ಸ್ಥಾಪನೆ : ೧೯೧೫

**ಕನ್ನಡ ನುಡಿ**

ಏಪ್ರಿಲ್ ೨೦೨೨ – ಏಪ್ರಿಲ್ ೨೦೨೩

ಸಂಪುಟ : ೮೭, ೮೮

ಅಧ್ಯಕ್ಷರು

**ನಾಡೋಜ ಡಾ. ಮಹೇಶ ಜೋಶಿ**

ಗೌರವ ಕಾರ್ಯದರ್ಶಿ

**ನೇ.ಭ. ರಾಮಲಿಂಗಶೆಟ್ಟಿ**

ಗೌರವ ಕಾರ್ಯದರ್ಶಿ

**ಡಾ. ಪದ್ಮಿನಿ ನಾಗರಾಜು**

* * *

ಗೌರವ ಕೋಶಾಧ್ಯಕ್ಷರು

**ಬಿ.ಎಂ. ಪಟೇಲ್‌ಪಾಂಡು**

* * *

ಸಂಪಾದಕ

**ಪ್ರೊ. ಎನ್.ಎಸ್. ಶ್ರೀಧರಮೂರ್ತಿ**

ಸಂಪಾದಕ ಮಂಡಳಿ

**ಶ್ರೀಮತಿ ನಯನಾ ಎಸ್.**

**ಡಾ. ರಹಮತ್ ಕಂಚುಗಾರ**

**ಶ್ರೀ ಶ್ರೀನಾಥ್ ಜೋಶಿ**

**ಶ್ರೀ ಟಿ.ಎ.ಎಂ. ಕೊಟ್ರೇಶ್**

**ಡಾ. ಮೇಘನಾ ಕೆ.**

**ಶ್ರೀಮತಿ ಬ್ರಾಹ್ಮಿಲಾ ಮದನ್**

**ಶ್ರೀ ಎನ್ನೇಬಿ ಮೊಗ್ರಾಲ್‌ಪುತ್ತೂರು**

**ಶ್ರೀ ಪ್ರಶಾಂತ್ ಹೆಬ್ಬಾರ್**

* * *

ಮುಖಪುಟ, ಒಳಪುಟ ವಿನ್ಯಾಸ

**ಉದಯ ಕುಮಾರ್ ಹೆಚ್.**

**ವಿಳಾಸ :**

**ಕನ್ನಡ ನುಡಿ** ಕನ್ನಡ ಸಾಹಿತ್ಯ ಪರಿಷತ್ತು,
ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ,
ಬೆಂಗಳೂರು – ೫೬೦ ೦೧೮

ದೂ. ೦೮೦–೨೬೬೧೨೯೯೧ / ೨೬೬೨೩೫೮೪ / ೨೨೪೨೩೮೬೭

ಜಾಲತಾಣ : http://www.kasapa.in
ಮಿಂಚಂಚೆ : kannadaparishattu@gmail.com
ಯೂಟ್ಯೂಬ್ : http://www.youtube.com/c/KannadaParishattu
ಫೇಸ್‌ಬುಕ್ : ಕಸಾಪ ಬೆಂಗಳೂರು



# ಅಧ್ಯಕ್ಷರ ನುಡಿ

**ಸ**ಮಸ್ತ ಕನ್ನಡಿಗರಿಗೆ ಶುಭಾಶಯಗಳು.

ಹಿರಿಯ ಬರಹಗಾರರಾದ ಶ್ರೀ ಡಿ.ವಿ. ಗುಂಡಪ್ಪ (ಡಿ.ವಿ.ಜಿ) ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಉಪಾಧ್ಯಕ್ಷರಾಗಿದ್ದಾಗಿನ (೧೯೩೪–೩೭) ಅವಧಿಯಲ್ಲಿ 'ಕನ್ನಡ ಸಾಹಿತ್ಯ ಪರಿಷತ್ಪತ್ರಿಕೆ'ಯ ಜೊತೆಗೆ ಇನ್ನೊಂದು ಪತ್ರಿಕೆಯನ್ನು ಹೊರಡಿಸಲು ಉದ್ದೇಶಿಸಿದ್ದರು. ಆದರೆ, ಅಂದಿನ ಆರ್ಥಿಕ ಒತ್ತಡದ ಕಾರಣ ಈ ಆಶಯ ಈಡೇರಿರಲಿಲ್ಲ. ಕ್ರಮೇಣ 'ಪರಿಷತ್ಪತ್ರಿಕೆ'ಯ 'ಸಂಗ್ರಹ ಪ್ರತಿ' ಪ್ರಕಟಿಸುವ ಯೋಜನೆ ಆರಂಭವಾಯಿತು. 'ಪರಿಷತ್ಪತ್ರಿಕೆ'ಯಲ್ಲಿ ಪ್ರಕಟವಾಗುತ್ತಿದ್ದ ಪರಿಷತ್ತಿನ ಸುದ್ದಿಗಳು, ಮುಖ್ಯವಾದ ಸಂಪಾದಕೀಯ ಟಿಪ್ಪಣಿಗಳು, ಕಾರ್ಯನಿರ್ವಾಹಕ ಮಂಡಲಿಯ ಮುಖ್ಯ ನಿರ್ಣಯಗಳನ್ನು ಈ 'ಸಂಗ್ರಹ ಪ್ರತಿ'ಯಲ್ಲಿ ಮುದ್ರಿಸಿ ಪ್ರಕಟಿಸಲಾಗುತ್ತಿತ್ತು.

ಆಚಾರ್ಯ ಶ್ರೀ ಬಿ.ಎಂ. ಶ್ರೀಕಂಠಯ್ಯನವರು ಕನ್ನಡ ಸಾಹಿತ್ಯ ಪರಿಷತ್ತಿಗೆ ಉಪಾಧ್ಯಕ್ಷರಾಗಿ ಬಂದ ಬಳಿಕ 'ಸಂಗ್ರಹ ಪ್ರತಿ'ಯನ್ನು ವಿಸ್ತಾರಗೊಳಿಸುವ ಕಾರ್ಯ ಆರಂಭಿಸಿದರು. ೧೯೩೮ನೇ ಅಕ್ಟೋಬರ್ ೪ರಂದು ವಿಜಯದಶಮಿ ದಿನ 'ಕನ್ನಡ ನುಡಿ' ಮುದ್ರಿತ ಪತ್ರಿಕೆಯಾಗಿ ಪ್ರಾರಂಭವಾಯಿತು. ಆರಂಭದಲ್ಲಿ 'ಕನ್ನಡ ನುಡಿ'ಯು ವಾರಪತ್ರಿಕೆಯಾಗಿತ್ತು. ಕನ್ನಡ ಕಾದಂಬರಿ ಸಾರ್ವಭೌಮ ಎಂದೇ ಖ್ಯಾತರಾಗಿರುವ ಅ.ನ. ಕೃಷ್ಣರಾಯರು ಮೊದಲ ಸಂಪಾದಕರು. ಆರ್ಥಿಕ ಅನಾನುಕೂಲತೆ ಕಾರಣ 'ಕನ್ನಡ ನುಡಿ' ಯ ಪ್ರಕಟಣೆ ಅನಿಯತವಾಗಿತ್ತು. ೧೯೫೦ರಲ್ಲಿ ಪಾಕ್ಷಿಕ ಮುದ್ರಿತ ಪತ್ರಿಕೆಯಾಗಿ ಪ್ರಕಟಣೆಯನ್ನು ಪುನರಾರಂಭಿಸಿ ಬಳಿಕ ಮಾಸಿಕ ಪತ್ರಿಕೆಯಾಯಿತು. ೨೦೧೪ರಿಂದ ತ್ರೈಮಾಸಿಕವಾಗಿ ಮುದ್ರಿತ 'ಕನ್ನಡ ನುಡಿ' ಪತ್ರಿಕೆ ಆರಂಭವಾಯಿತು. ಅಂದಿನಿಂದ ಅಕ್ಟೋಬರ್ ೨೦೨೧–ಮಾರ್ಚ್ ೨೦೨೨ ರ ಸಂಚಿಕೆಯವರೆಗೆ ಮುದ್ರಿತ ಸಂಚಿಕೆಗಳು ಹೊರಬರುತ್ತಿದ್ದವು.

ಪ್ರಿಯ ಓದುಗರೇ, 'ಕನ್ನಡ ನುಡಿ' ಪತ್ರಿಕೆಗಾಗಿ ನೀವು ಬಹುದಿನಗಳಿಂದ ಕಾಯುತ್ತಿದ್ದೀರಿ, ಮಾಧ್ಯಮಗಳ ಮೂಲಕವೂ ಒತ್ತಾಯಿಸಿದ್ದಿರಿ. ನಾನು ಅಧ್ಯಕ್ಷ ಪದ ಸ್ವೀಕರಿಸಿದ (೨೦೨೧ರ ನವಂಬರ್ ೨೬) ಕನ್ನಡ ಸಾಹಿತ್ಯ ಪರಿಷತ್ತಿಗೆ ಹೊಸ ರೂಪ ನೀಡಲು ಪ್ರಯತ್ನಿಸುತ್ತಲೇ ಬಂದಿದ್ದೇನೆ, ನಾವು ಪ್ರಣಾಳಿಕೆಯಲ್ಲಿಯೇ 'ಕನ್ನಡ ನುಡಿ'ಯನ್ನು ಆಪ್ ಮೂಲಕ ತಲುಪಿಸುವ ಯೋಜನೆಯನ್ನು ಪ್ರಕಟಿಸಿದ್ದೆ. ಆಧುನಿಕತೆಯ ಇಂದಿನ ಯುಗದಲ್ಲಿ ಜಗತ್ತಿನ ಪ್ರತಿ ವಿದ್ಯಮಾನವೂ ಬೆರಳ ತುದಿಯಲ್ಲಿ ಲಭ್ಯವಾಗುತ್ತಿದೆ. ಹೀಗಿರುವಾಗ ನಾವೂ ಕಾಲಕ್ಕೆ ತಕ್ಕಂತೆ ಬದಲಾಗಬೇಕಿದೆ. ಮುದ್ರಣವನ್ನು ಮಾಡದೆ ಇರುವುದರಿಂದ ಕಾಗದವನ್ನು ಉಳಿಸಿ ಪ್ರಕೃತಿಗೂ ಮಹತ್ತರ ಕೊಡುಗೆಯನ್ನು ನೀಡಿದಂತಾಗುತ್ತದೆ ಎನ್ನುವುದು ನಿಜ. ಆದರೆ, ಕನ್ನಡ ನುಡಿಯ ಮುದ್ರಿತ ಪ್ರತಿಗಳು ನಮ್ಮ ಸಂಗ್ರಹದಲ್ಲಿ ಇರಬೇಕೆಂದು ಬಹಳ ಜನ ಅಪೇಕ್ಷೆ ಪಡುತ್ತಾರೆ. ಅದು ನನ್ನ ಅಪೇಕ್ಷೆ ಕೂಡ. ಆದರೆ ಇಂದಿನ ಪರಿಸ್ಥಿತಿಯಲ್ಲಿ ೩೨ ಪುಟಗಳ 'ಕನ್ನಡ ನುಡಿ'ಯ ಸಂಚಿಕೆಯನ್ನು ಈಗ ಇರುವ ೪ ಲಕ್ಷ ಓದುಗರಿಗೆ ತಲುಪಿಸಲು ಮುದ್ರಣ ಕಾಗದ, ಮುದ್ರಣ, ಸಾಗಣೆ ವೆಚ್ಚವೇ ಸುಮಾರು ೬೦ ಲಕ್ಷ ರೂಪಾಯಿಗಳಾಗುತ್ತದೆ. ವಿಳಾಸದಾರರು ಇಲ್ಲವೆಂದು ೧೫ ಸಾವಿರ ಪ್ರತಿಗಳು ಹಿಂದಿರುಗಿ ಬರುತ್ತವೆ. ಅವುಗಳ ದಾಸ್ತಾನು, ವಿಲೇವಾರಿ ದೊಡ್ಡ ಸಮಸ್ಯೆಯಾಗುತ್ತದೆ. ಇದರ ಜೊತೆಗೆ ನಾವು ಕೋಟಿ ಸದಸ್ಯತ್ವದ ಗುರಿಯನ್ನು ಹೊಂದಿದ್ದು ಸದಸ್ಯತ್ವದ ಸಂಖ್ಯೆ ಹೆಚ್ಚಾಗುತ್ತಾ ಹೋದಂತೆ ಸಮಸ್ಯೆ ಇನ್ನಷ್ಟು ಬಿಗಡಾಯಿಸಲಿದೆ. ಈ ಕಾರಣದಿಂದ ಆಧುನಿಕತೆಗೆ ತೆರೆದುಕೊಳ್ಳುವುದು ನಮಗೆ ಅನಿವಾರ್ಯವೂ ಆಗಿದೆ.

ಈ ಎಲ್ಲ ಕಾರಣಗಳಿಂದ 'ಕನ್ನಡ ನುಡಿ'ಯನ್ನು ಮುದ್ರಿತ ಸಂಚಿಕೆಯ ಬದಲು ಆನ್‌ಲೈನ್ ಮೂಲಕ ತರಲು ಯೋಚಿಸಿದೆವು. ಇದನ್ನು ನಮ್ಮ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಚಿಂತಿಸಿದೆವು. ಈ ಆಧುನಿಕ ಕಾಲಘಟ್ಟದಲ್ಲಿ ಸುಮಾರಾಗಿ ಎಲ್ಲರ ಬಳಿಯೂ ಆ್ಯಂಡ್ರಾಯ್ಡ್ ಮೊಬೈಲ್, ಗಣಕಯಂತ್ರ ವ್ಯವಸ್ಥೆ ಇರುವುದರಿಂದ 'ಕನ್ನಡ ನುಡಿ' ಪತ್ರಿಕೆಯನ್ನು ಆನ್‌ಲೈನ್ ಮೂಲಕ ಪಡೆಯಬಹುದು.

'ಕನ್ನಡ ನುಡಿ'ಯ ಕೊನೆಯ ಸಂಚಿಕೆ ೧೬ನೆಯ ಜುಲೈ ೨೦೨೧ – ೩ನೇ ಸೆಪ್ಟೆಂಬರ್ ೨೦೨೧ರ ಸಂಚಿಕೆ. ಈ ಸಂಚಿಕೆಯ ನಂತರ ಅಕ್ಟೋಬರ್ ೨೦೨೧ – ಮಾರ್ಚ್ ೨೦೨೨ರ ಸಂಚಿಕೆಯು ಸರ್ವಸದಸ್ಯರ ವಿಶೇಷ ಸಭೆಯ ತಿಳಿವಳಿಕೆ ಪತ್ರವಾಗಿ ಪ್ರಕಟವಾಗಿತ್ತು. ಈ ಸುದೀರ್ಘ ಅವಧಿಯಲ್ಲಿ 'ಕನ್ನಡ ನುಡಿ' ಪತ್ರಿಕೆಯನ್ನು ನಿಮಗೆ ನೀಡಲು ಸಾಧ್ಯವಾಗದಿದ್ದಕ್ಕೆ ಕ್ಷಮೆ ಕೋರುತ್ತೇನೆ.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷನಾಗುತ್ತಿದ್ದಂತೆ ಪರಿಷತ್ತಿನ ಕಟ್ಟಡಗಳ ನವೀಕರಣ, ಇತರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕಾಯಿತು. ದುಬಾರಿ ವೆಚ್ಚದ ಈ ಕಾಮಗಾರಿಗಳಿಗಾಗಿ ಆರ್ಥಿಕ ಸಂಪನ್ಮೂಲಗಳನ್ನು ಕ್ರೋಡೀಕರಿಸುವುದು ಆಗ ಮುಖ್ಯ ಕೆಲಸವಾಗಿತ್ತು. ಕೃಷ್ಣರಾಜ ಪರಿಷತ್ತಿನ ಮಂದಿರ ನವೀಕರಣ, ಪರಿಷತ್ತಿನ ಅಂಗಳ ಮತ್ತು ಆವರಣಗೋಡೆ ನಿರ್ಮಾಣ, ಆಡಳಿತ ಕಚೇರಿಯ ನವೀಕರಣ, ಆಡಳಿತ ಕಚೇರಿ ಪ್ರವೇಶದ್ವಾರದ ಬಳಿ ಕನ್ನಡ ತಾಯಿ ಭುವನೇಶ್ವರಿದೇವಿಯ ಪ್ರತಿಮೆ ಸ್ಥಾಪನೆ, ಇತರ ಕಾಮಗಾರಿಗಳು ಜೊತೆಗೆ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಸಿದ್ಧತೆ, ಮತ್ತೆ ಮತ್ತೆ ಮುಂದೂಡಿಕೆ, ಅಂತಿಮವಾಗಿ ಜನವರಿ ೬, ೭, ೮ರಂದು ಹಾವೇರಿಯಲ್ಲಿ ನಡೆಸಿರುವುದು, ಸಮ್ಮೇಳನ ನಂತರದ ಕೆಲಸಗಳು, ಪರಿಷತ್ತಿನ ದತ್ತಿ ಪ್ರಶಸ್ತಿ ಮತ್ತು ಪ್ರಕಟಣೆಗಳ ಒತ್ತಡ ಹೀಗೆ ಇತರ ಕಾರ್ಯಗಳು ಬಿಡುವಿಲ್ಲದೆ ನಡೆದಿರುವುದು 'ಕನ್ನಡ ನುಡಿ' ಸಂಚಿಕೆ ಹೊರತರಲು ವಿಳಂಬವಾಯಿತು. ಈಗಂತೂ ಸಾಮಾಜಿಕ ಜಾಲತಾಣದ ಯುಗ. ಸರ್ವೇಸಾಮಾನ್ಯವಾಗಿ ಎಲ್ಲರ ಕೈಯಲ್ಲೂ ಇಂಟರ್‌ನೆಟ್ ಸೌಕರ್ಯವಿರುವ ಮೊಬೈಲ್ ಇದ್ದೇ ಇರುತ್ತದೆ.

ಇನ್ನು ಮುಂದೆ ಪ್ರತಿ ಮೂರು ತಿಂಗಳಿಗೊಮ್ಮೆ 'ಕನ್ನಡ ನುಡಿ' ಕನ್ನಡ ಸಾಹಿತ್ಯ ಪರಿಷತ್ತಿನ ವೆಬ್‌ಸೈಟ್‌ನಲ್ಲಿ ಪ್ರಕಟವಾಗಲಿದೆ. ಎಲ್ಲರೂ ಓದಬಹುದು ಮತ್ತು ಡೌನ್‌ಲೋಡ್ ಮಾಡಿಕೊಳ್ಳಬಹುದು. ತಾವೂ 'ಕನ್ನಡ ನುಡಿ'ಗೆ ಬರಹಗಳನ್ನು ಕಳುಹಿಸಬಹುದು. ಮೇಲ್ ಐಡಿ ಅಥವಾ ಅಂಚೆ ವಿಳಾಸ: ಸಂಪಾದಕರು, ಕನ್ನಡ ನುಡಿ, ಕನ್ನಡ ಸಾಹಿತ್ಯ ಪರಿಷತ್ತು, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ೫೬೦೦೧೮ ಇಲ್ಲಿಗೆ ಕಳುಹಿಸಬಹುದು.

ಗೌರವಪೂರ್ವಕವಾಗಿ,

**ನಾಡೋಜ ಡಾ. ಮಹೇಶ ಜೋಶಿ**

**ಅಧ್ಯಕ್ಷರು**

## ನುಡಿ ಹೂರಣ


* ಅಧ್ಯಕ್ಷರ ನುಡಿ
* ಶಾಸ್ತ್ರೀಯ ಭಾಷೆ ಅಭಿವೃದ್ಧಿ ವಿಚಾರದಲ್ಲಿ ಕೆಲಸಗಳು ನಡೆಯಲೇಬೇಕು ೩
* ಕನ್ನಡ ಮನಸ್ಸುಗಳನ್ನು ಒಗ್ಗೂಡಿಸುವ ಕೆಲಸ ಕೈಗೊಂಡಿದೆ ಕನ್ನಡ ರಥ ೭
* ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ– ೨೦೨೨ಕ್ಕೆ ಸಮಗ್ರ ಪರಿಷ್ಕರಣೆ ಅಗತ್ಯ ೯
* ಕನ್ನಡ ಸಾಹಿತ್ಯ ಪರಿಷತ್ತು ಕರ್ನಾಟಕ ಸರಕಾರಕ್ಕೆ ಗುರುವಾಗಿ ಕೆಲಸ ಮಾಡಬೇಕು: ೧೧
* ಪರಿಷತ್ತಿನ ಆವರಣದಲ್ಲಿ ಕನ್ನಡ ತಾಯಿ ಭುವನೇಶ್ವರಿ ಪ್ರತಿಮೆ ಅನಾವರಣ ೧೩
* ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆದ ಕೆನಡಾ ಸಂಸದರ ಕುಟುಂಬ ೧೫
* ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಶಸ್ತಿ ಪಡೆಯಲು ಅರ್ಜಿಯೂ ಬೇಡ ೧೬
* ಆಂತರಿಕ ಕಣ್ಣುಗಳುಳ್ಳ ದಿವ್ಯಾಂಗ ಚೇತನರಿಗೆ ಬಾಹ್ಯ ಕಣ್ಣು ಕಾಣುವಂತೆ ಮಾಡಬೇಕಿದೆ ೧೭
* ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕದ ಉದ್ಘಾಟನೆ ೧೮
* ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆಗಳಿಗೆ ಚಾರಿತ್ರಿಕ ತಿದ್ದುಪಡಿ ೨೦
* ಗೋವಾ ವಿಮೋಚನೆಯಲ್ಲಿ ಕನ್ನಡಿಗರ ಪಾತ್ರ ಸ್ಮರಣೀಯ ೨೨
* ಬಳ್ಳಾರಿ ಕರ್ನಾಟಕದಲ್ಲೇ ಇರಲು ನಾಡೋಜ ಡಾ. ಕೋ.ಚೆನ್ನಬಸಪ್ಪನವರು ಕಾರಣ ೨೪
* ಮಾದರಿ ಮೈಸೂರನ್ನು ರೂಪಿಸಿದ ಸರ್ ಮಿರ್ಜಾ ಇಸ್ಮಾಯಿಲ್ ೨೫
* ಸಾಮಾಜಿಕ ಮೌಲ್ಯಗಳ ಅವನತಿಯ ಕಾಲದಲ್ಲಿ ಸರ್ ಎಂ. ವಿಶ್ವೇಶ್ವರಯ್ಯನವರ ಮಹತ್ವ ಇನ್ನಷ್ಟು ಹೆಚ್ಚಾಗಿದೆ ೨೬
* ಕನ್ನಡಿಗರಿಗೆ ತಮ್ಮ ನಿಜ ಶಕ್ತಿ ಅರಿವಾಗಬೇಕಿದೆ ೨೭
* ೮೬ನೇ ಕನ್ನಡ ಸಾಹಿತ್ಯ ಸಮ್ಮೇಳನದ ಗೋಷ್ಠಿಗಳ ವಿಷಯ ರಚನೆ ಮತ್ತು ಸಂಪನ್ಮೂಲ ವ್ಯಕ್ತಿಗಳ ಆಯ್ಕೆಯ ಮೊದಲ ಸಭೆ ೨೮
* ಕನ್ನಡ ಸಾಹಿತ್ಯ ಪರಿಷತ್ತಿನ ಆ್ಯಪ್ ಲೋಕಾರ್ಪಣೆ ೨೯
* ಇಳಿದು ಬಾ ತಾಯಿ ಇಳಿದು ಬಾ ಬೇಂದ್ರೆ ನಮನ ೩೦
* ಕನ್ನಡ ಸಾಹಿತ್ಯ ಪರಿಷತ್ತಿನ ವಿದೇಶ ಘಟಕಗಳ ಸಲಹಾ ಸಮಿತಿ ರಚನೆ ೩೧
* ವಿದೇಶದಲ್ಲಿರುವ ಕನ್ನಡಿಗರನ್ನು ಒಗ್ಗೂಡಿಸುವ ಕಾರ್ಯ ಕಸಾಪದ್ದು ೩೨


* * *

## ಸಂಪಾದಕೀಯ

ಕನ್ನಡ ಸಾಹಿತ್ಯ ಪರಿಷತ್ತು ತನ್ನ ಆರಂಭದ ದಿನಗಳಿಂದಲೂ ಸಾಮಾನ್ಯ ಕನ್ನಡಿಗರೊಂದಿಗೆ ನಿಕಟ ಬಾಂಧವ್ಯವನ್ನು ಇಟ್ಟು ಕೊಳ್ಳುವ ಪ್ರಯತ್ನವನ್ನು ಮಾಡುತ್ತಲೇ ಇತ್ತು. ಸಾರ್ವಜನಿಕ ಕ್ಷೇತ್ರದಲ್ಲಿ ಕೂಡ ಮಹತ್ವದ ಸ್ಥಾನವನ್ನು ಪಡೆದಿದ್ದ ಡಿ.ವಿ. ಗುಂಡಪ್ಪನವರು ಪರಿಷತ್ತಿನ ಉಪಾಧ್ಯಕ್ಷರಾದಾಗ ಅದಕ್ಕೆ ವಿಶೇಷ ಚಾಲನೆ ದೊರಕಿತು. ಆಗಲೇ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಪರಿಷತ್ ಪತ್ರಿಕೆ ಪ್ರಕಟವಾಗುತ್ತಿತ್ತು. ಆದರೆ ಅದು ವಿದ್ವತ್ಪೂರ್ಣ ಪತ್ರಿಕೆಯಾಗಿದ್ದರಿಂದ ಜನ ಸಾಮಾನ್ಯರಿಗೆ ನಿಲುಕುತ್ತಿರಲಿಲ್ಲ. ಹೀಗಾಗಿ ಜನ ಸಾಮಾನ್ಯರನ್ನು ತಲುಪುವ ಉದ್ದೇಶದಿಂದಲೇ 'ಕನ್ನಡ ನುಡಿ'ಯನ್ನು ಆರಂಭಿಸಲು ನಿರ್ಧರಿಸಲಾಯಿತು. ೧೯೩೮ನೇ ಅಕ್ಟೋಬರ್ ೪ನೆಯ ತಾರೀಖಿನ ವಿಜಯದಶಮಿಯ ದಿನ ಕನ್ನಡ ನುಡಿ ಆರಂಭವಾಯಿತು. ಅ.ನ. ಕೃಷ್ಣರಾಯರು ಅದರ ಪ್ರಥಮ ಸಂಪಾದಕರಾಗಿ ನಿಯೋಜಿತರಾದರು. ಆರಂಭದಲ್ಲಿ ಅದು ವಾರಪತ್ರಿಕೆಯಾಗಿತ್ತು. ಈ ಪತ್ರಿಕೆಯ ಉದ್ದೇಶದ ಕುರಿತು ಬಿ.ಎಂ. ಶ್ರೀಕಂಠಯ್ಯನವರು ಮೊದಲ ಸಂಚಿಕೆಯಲ್ಲಿ ಹೀಗೆ ಹೇಳಿದ್ದಾರೆ

"ಜನ ಸಾಮಾನ್ಯರಲ್ಲಿ, ಸ್ತ್ರೀಯರಲ್ಲಿ, ಕನ್ನಡಿಗರಾಗಿ ಕನ್ನಡದಲ್ಲಿ ಅಕ್ಕರೆ ಇರಬೇಕಾದ ಸಾರ್ವಜನಿಕರಲ್ಲಿ ಕನ್ನಡ ತಿಳಿವಳಿಕೆಯನ್ನು, ಸಾಹಿತ್ಯ, ಸಂಸ್ಕೃತಿಗಳ ಸಾಮಾನ್ಯ ಜ್ಞಾನವನ್ನು, ಕನ್ನಡ ನಾಡಿನ ಇಂದಿನ ಪರಿಸ್ಥಿತಿಯನ್ನು, ಮುಂದಿನ ನಮ್ಮ ಆಶೋತ್ತರಗಳನ್ನು ಹರಡುವುದೂ, ಸಾರ್ವಜನಿಕರ ವಿದ್ಯಾಪೀಠವಾಗುವುದೂ ಪರಿಷತ್ತಿನ ಕರ್ತವ್ಯವೆಂದು ಒಂದು ದೃಷ್ಟಿಯಲ್ಲಿ ಇದೇ ಹೆಚ್ಚು ಕರ್ತವ್ಯವೆಂದು ಭಾವಿಸಿ ಕನ್ನಡ ನುಡಿಯನ್ನು ವಾರಪತ್ರಿಕೆಯಾಗಿ ಹೊರಡಿಸಲಾಯಿತು. ಆಗಾಗಿನ ಪರಿಷತ್ತಿನ ಕಾರ್ಯಕಲಾಪಗಳೂ, ಉತ್ಸವ, ಉಪನ್ಯಾಸಾದಿಗಳೂ, ಸುದ್ದಿಗಳೂ, ಕನ್ನಡ ಚಟುವಟಿಕೆಗಳೂ ಮಹಾ ಜನರ ಗಮನಕ್ಕೆ ಬರಲು ಇದರಿಂದ ಸಾಧ್ಯವಾಗಿದೆ".

ಆದರೆ ನಿರೀಕ್ಷಿಸಿದಷ್ಟು ಸಹಾಯ ಸಂಪತ್ತು ಒದಗದೆ ಕನ್ನಡ ನುಡಿ ಮುಂದೆ ಮಾಸ ಪತ್ರಿಕೆಯಾಯಿತು. ೧೯೬೯ರಿಂದ ಕೆಲಕಾಲ ಪಾಕ್ಷಿಕ ಪತ್ರಿಕೆ ಕೂಡ ಆಯಿತು. ಒಟ್ಟಿನಲ್ಲಿ ಕನ್ನಡ ನುಡಿ ನಿರಂತರವಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳ್ನು ಜನಸಾಮಾನ್ಯರಿಗೆ ತಲುಪಿಸುವ ವೇದಿಕೆಯಾಗಿ ರೂಪುಗೊಂಡಿತು.

ಕನ್ನಡ ಸಾಹಿತ್ಯ ಪರಿಷತ್ತಿಗೆ ನಾಡೋಜ ಡಾ. ಮಹೇಶ ಜೋಶಿಯವರು ಅಧ್ಯಕ್ಷರಾದ ನಂತರ ಹೊಸ ರೂಪ ಒದಗಿದೆ. ಪರಿಷತ್ತಿನ ಮೂಲ ಸ್ವರೂಪದಲ್ಲಿಯೇ ರೂಪಾಂತರವನ್ನು ತಂದ ಅವರು ಪರಂಪರೆಯ ಸತ್ವವನ್ನು ಆಧುನಿಕತೆಯ ಅಗತ್ಯಕ್ಕೆ ಹೊಂದಿಸುವ ಮಹತ್ವದ ಕೆಲಸವನ್ನು ಮಾಡುತ್ತಿದ್ದಾರೆ. ಕನ್ನಡ ನುಡಿಗೂ ಕೂಡ ಹೊಸ ರೂಪವನ್ನು ನೀಡುವುದು ಅವರ ಕನಸು. ಆಧುನಿಕ ಅಗತ್ಯಗಳಿಗೆ ತಕ್ಕಂತೆ ಪತ್ರಿಕೆಯನ್ನು ಆ್ಯಪ್ ಮೂಲಕ ಬಿಡುಗಡೆ ಮಾಡುವ ಯೋಜನೆಯನ್ನು ರೂಪಿಸಿ ಅದಕ್ಕೆ ತಕ್ಕಂತೆ ನಿಬಂಧನೆಗಳಲ್ಲಿ ತಿದ್ದುಪಡಿಯನ್ನು ತಂದಿದ್ದಾರೆ. ಈ ಮೂಲಕ ಪತ್ರಿಕೆಯು ಜನಸ್ನೇಹಿಯೂ, ಪರಿಸರಸ್ನೇಹಿಯೂ ಆಗಿ ರೂಪುಗೊಂಡಿದೆ. ಕಳೆದ ಒಂದು ವರ್ಷದ ಚಟುವಟಿಕೆಗಳ ಸ್ಥೂಲ ಚಿತ್ರಣವನ್ನು ಈ ಸಂಚಿಕೆಯಲ್ಲಿ ನೀಡಲು ಪ್ರಯತ್ನಿಸಲಾಗಿದೆ. ಮುಂದಿನ ಸಂಚಿಕೆಯಿಂದ ಪರಿಷತ್ತಿನ ಚಟುವಟಿಕೆಗಳು ಮಾತ್ರವಲ್ಲ, ಮುಂದಿನ ಕನಸು, ಸಾಧನೆ, ಸಿದ್ಧಿ ಎಲ್ಲಕ್ಕೂ ಅವಕಾಶವಿರುತ್ತದೆ. ನಿಮ್ಮ ಸೃಜನಾತ್ಮಕ ಅಭಿವ್ಯಕ್ತಿಗೂ ಅವಕಾಶವಿದ್ದು ಕನ್ನಡ ನುಡಿ ನಿಜವಾದ ಅರ್ಥದಲ್ಲಿ ಕನ್ನಡಿಗರ ನುಡಿಯಾಗಲಿದೆ.

ಪತ್ರಿಕೆಯ ಹೊಸ ಸ್ವರೂಪವನ್ನು ಸೇರಿದಂತೆ ನಿಮ್ಮ ಎಲ್ಲಾ ಸಲಹೆ ಸೂಚನೆಗಳಿಗೂ ಸ್ವಾಗತವಿದೆ.

**ಎನ್.ಎಸ್. ಶ್ರೀಧರಮೂರ್ತಿ**

# ಶಾಸ್ತ್ರೀಯ ಭಾಷೆ ಅಭಿವೃದ್ಧಿ ಕೆಲಸಗಳು ನಡೆಯಲೇಬೇಕು:

## ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಅಧ್ಯಕ್ಷ ಡಾ. ದೊಡ್ಡರಂಗೇಗೌಡ




*೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಸನ್ಮಾನ್ಯ ಶ್ರೀ ಬಸವರಾಜ ಬೊಮ್ಮಾಯಿ ಅವರು ಉದ್ಘಾಟಿಸಿದರು.*

**ಕನಕ–ಶರೀಫ–ಸರ್ವಜ್ಞ ಪ್ರಧಾನ ವೇದಿಕೆ, ಹಾವೇರಿ:** ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರೆತು ಸರಿಸುಮಾರು ೧೫ ವರ್ಷಗಳಾದವು. ಆದರೆ, ಅದರಿಂದ ಆದ ಪ್ರಯೋಜನ ಏನೂ ಇಲ್ಲ? ರಾಜ್ಯದಲ್ಲಿನ ಸರ್ಕಾರಗಳ ನಿರ್ಲಕ್ಷ್ಯದಿಂದಾಗಿ ಶಾಸ್ತ್ರೀಯ ಭಾಷೆಯ ಅಭಿವೃದ್ಧಿಯ ವಿಚಾರದಲ್ಲಿ ಏನೂ ಕೆಲಸಗಳು ನಡೆದಿಲ್ಲ ಎಂದು ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ ಡಾ. ದೊಡ್ಡರಂಗೇಗೌಡ ಅವರು ಕಳವಳ ವ್ಯಕ್ತಪಡಿಸಿದರು.

ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ನೀಡಿರುವುದು ಕೇವಲ ಕಣ್ಣೊರೆಸುವ ತಂತ್ರವಾಗಿದೆ. ಕಳೆದ ೧೩ ವರ್ಷಗಳಲ್ಲಿ ಸಂಸ್ಕೃತದ ಅಭಿವೃದ್ಧಿಗೆ ೬೪೩ ಕೋಟಿ ರೂ, ತಮಿಳು ಭಾಷೆಗೆ ೪೨ ಕೋಟಿ ರೂ. ನೀಡಿರುವ ಕೇಂದ್ರ ಸರ್ಕಾರ, ಕರ್ನಾಟಕಕ್ಕೆ ಮಾತ್ರ ೩ ಕೋಟಿ ರೂ. ನೀಡಿದ್ದು ಏಕೆ? ಕನ್ನಡಕ್ಕೆ ದೊರೆಯಬೇಕಾದ ಹಕ್ಕಿನ ಹಣವನ್ನು ತರುವ ಜವಾಬ್ದಾರಿ ಮುಖ್ಯಮಂತ್ರಿಗಳದ್ದು ಎಂದು ಡಾ. ದೊಡ್ಡರಂಗೇಗೌಡ ಅವರು ಖಡಾಖಂಡಿತವಾಗಿ ಹೇಳಿದರು.

ಕನ್ನಡ ಶಾಸ್ತ್ರೀಯ ಭಾಷೆಯ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲು ರಾಜ್ಯ ಸರ್ಕಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಬೇಕು. ತಮಿಳುನಾಡು ಸರ್ಕಾರ ಈವರೆಗೆ ಏನೇನು ಮಾಡಿದೆ ಎಂಬುದನ್ನು ಅಧ್ಯಯನ ಮಾಡಿ ಕನ್ನಡದ ಶಾಸ್ತ್ರೀಯ ಸ್ಥಾನಮಾನದ ಸದ್ಬಳಕೆಗೆ ಕ್ರಮ ಕೈಗೊಳ್ಳಬೇಕು. ಕೇಂದ್ರದ ಶಾಸ್ತ್ರೀಯ ಭಾಷಾ ಅಧ್ಯಯನ ಕೇಂದ್ರವನ್ನು ಸ್ವಾಯತ್ತ ಸಂಸ್ಥೆಯನ್ನಾಗಿ ಮಾಡಬೇಕು. ರಾಜ್ಯದಲ್ಲಿ ಶಾಸ್ತ್ರೀಯ ಭಾಷೆ ಅಧ್ಯಯನಕ್ಕೆ ಉಪ ಕೇಂದ್ರಗಳನ್ನು ಸ್ಥಾಪಿಸಬೇಕು. ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳಲ್ಲಿ ಶಾಸ್ತ್ರೀಯ ಭಾಷೆ ಅಧ್ಯಯನಕ್ಕೆ ಪ್ರತ್ಯೇಕ ವಿಭಾಗ ತೆರೆಯಬೇಕು ಎಂದು ಡಾ. ದೊಡ್ಡರಂಗೇಗೌಡರು ಸಲಹೆ ನೀಡಿದರು.

ಐದನೇ ತರಗತಿಯವರೆಗೆ ಮಕ್ಕಳಿಗೆ ಕನ್ನಡ ಕಲಿಕೆ ಕಡ್ಡಾಯಗೊಳಿಸಬೇಕು. ನಮ್ಮ ಪ್ರಾದೇಶಿಕ ಭಾಷೆ ಕನ್ನಡವೇ ನಮಗೆ ಮೊದಲು, ಉಳಿದುದೆಲ್ಲಾ ಆಮೇಲೆ. ಮಗು ಚೆನ್ನಾಗಿ ವಿಷಯ ಗ್ರಹಿಸಬೇಕಾದರೆ ಕನ್ನಡ ಅತಿ ಮುಖ್ಯ. ಐದನೇ ತರಗತಿ ನಂತರ ಮಗು ತನ್ನ ಬೌದ್ಧಿಕ ಸಾಮರ್ಥ್ಯದ ಮೇಲೆ ಎಷ್ಟು ಭಾಷೆಗಳನ್ನು ಬೇಕಾದರೂ ಕಲಿಯಲಿ ಎಂದು ದೊಡ್ಡರಂಗೇಗೌಡರು ಹೇಳಿದರು.

ಗಡಿಯಲ್ಲಿ ಮರಾಠಿಗರು ಉಪಟಳ ನೀಡುತ್ತಿದ್ದಾರೆ. ಅದಕ್ಕೆ ಕರ್ನಾಟಕದ ಜನರೇ ಉತ್ತರ ಕೊಟ್ಟಿದ್ದಾರೆ. ಕ್ಯಾತೆ ತೆಗೆದು ಬಂದವರ ಖಾತೆಗಳನ್ನೇ ಇಲ್ಲವಾಗಿಸಬಲ್ಲವರು ಕನ್ನಡಿಗರು. ಆದರೆ, ಇಷ್ಟು ದಿನವಾದರೂ ಏಕೆ ಈ ಸಮಸ್ಯೆ ಬಗೆಹರಿದಿಲ್ಲ? ಕೇಂದ್ರ ಹಾಗೂ ರಾಜ್ಯದಲ್ಲಿ ದೊಡ್ಡ ದೊಡ್ಡ ನಾಯಕರಿದ್ದಾರೆ. ಬೇಗ ಈ ಸಮಸ್ಯೆ ಬಗೆಹರಿಸಿ ಎಂದು ದೊಡ್ಡರಂಗೇಗೌಡರು ತಿಳಿಸಿದರು.

ನಮ್ಮ ಮುಂದಿರುವ ದೊಡ್ಡ ಪ್ರಶ್ನೆಯೆಂದರೆ, ಇಷ್ಟು ಕಾಲ ಕಳೆದರೂ ಏಕೆ ನಮಗೆ ಉನ್ನತ ಶಿಕ್ಷಣ ಹಾಗೂ ವೃತ್ತಿಪರ ಶಿಕ್ಷಣವನ್ನು ಕನ್ನಡದಲ್ಲಿ ನೀಡಲು ಸಾಧ್ಯವಾಗಿಲ್ಲ? ಎಂಬುದು. ಒಂದೊಮ್ಮೆ ಅದು ಸಾಧ್ಯವಿಲ್ಲ ಎಂಬ ಭಾವನೆಯನ್ನು ಹೇಡಿಗಳಾರಾದರೂ ತುಂಬಿದ್ದರೆ ಅವರನ್ನು ಕನ್ನಡಿಗರು ಎಂದು ಕರೆಯಲಾದೀತೆ? ಎಂದು ಕಟುವಾಗಿ ದೊಡ್ಡರಂಗೇಗೌಡರು ನುಡಿದರು.

**ಕನ್ನಡಕ್ಕೆ ಎರಡು ಬಹುದೊಡ್ಡ ಕುತ್ತುಗಳಿವೆ**

೮೫ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಡಾ. ಎಚ್.ಎಸ್. ವೆಂಕಟೇಶಮೂರ್ತಿ ಅವರು ಮಾತನಾಡಿ, ನೆರೆಯ ಪ್ರಾಂತದವರು ಅಖಂಡ ಭಾರತ ಕಲ್ಪನೆ ಮರೆತು ವರ್ತಿಸುತ್ತಿರುವುದು ಹಾಗೂ ಕನ್ನಡಿಗರಲ್ಲಿ ಇಂಗ್ಲಿಷ್ ವ್ಯಾಮೋಹ ಹೆಚ್ಚುತ್ತಿರುವುದು ಕನ್ನಡಿಗರಿಗೆ ಇರುವ ಬಹುದೊಡ್ಡ ಕುತ್ತು ಎಂದು ಹೇಳಿದರು. ಅವರು ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ನಿಕಟಪೂರ್ವ ಸಮ್ಮೇಳನಾಧ್ಯಕ್ಷರ ಭಾಷಣ ಮಾಡಿ ಮಾತನಾಡುತ್ತಿದ್ದರು. ನೆರೆಯ ಪ್ರಾಂತ್ಯ ಎಂದು ಪರೋಕ್ಷವಾಗಿ





ಮಹಾರಾಷ್ಟ್ರ ರಾಜ್ಯವು ಕರ್ನಾಟಕದ ಪ್ರಾಂತ್ಯಗಳನ್ನು ಕೇಳುತ್ತಿರುವುದು ತೀವ್ರ ಬಿಕ್ಕಟ್ಟಿನ ವಿಷಯ ಎಂದರು.

ಕರ್ನಾಟಕದಲ್ಲಿ ಕನ್ನಡ ಶಾಲೆಗಳು ದಿನೇ ದಿನೆ ಕಡಿಮೆಯಾಗುತ್ತಿವೆ. ಇಂಗ್ಲಿಷ್ ವ್ಯಾಮೋಹ ಹೆಚ್ಚಾಗುತ್ತಿದೆ. ಈ ಎರಡು ಸಂಗತಿಗಳು ದೊಡ್ಡ ಕುತ್ತುಗಳಾಗಿದ್ದರೂ ಒಟ್ಟಾರೆ ಅಭಿವೃದ್ಧಿ ಹೆಮ್ಮೆ ಪಡುವಂತಿದೆ ಎಂದರು.

**ಸಮಗ್ರ ಕನ್ನಡ ಭಾಷೆ ಅಭಿವೃದ್ಧಿಗೆ ಸುಗ್ರೀವಾಜ್ಞೆ ಹೊರಡಿಸಿ: ನಾಡೋಜ ಮಹೇಶ ಜೋಶಿ ಒತ್ತಾಯ**

ಸಮಗ್ರ ಕನ್ನಡ ಭಾಷೆಯ ಅಭಿವೃದ್ಧಿಗೆ ಕಾನೂನು ಜಾರಿಗೊಳಿಸಬೇಕು ಮತ್ತು ಸುಗ್ರೀವಾಜ್ಞೆ ಹೊರಡಿಸಬೇಕು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರು ಒತ್ತಾಯ ಮಾಡಿದರು. ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಜೋಶಿ ಅವರು ಆಶಯ ನುಡಿಗಳಲ್ಲಿ ಈ ಒತ್ತಾಯ ಮಾಡಿದರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ತೆರೆದ ಮನಸ್ಸಿದೆ. ಅವರಲ್ಲಿ ಚಿಂತನಾ ಶಕ್ತಿ ಇದೆ. ಸುಗ್ರೀವಾಜ್ಞೆಯ ಮೂಲಕ ಸಮಗ್ರ ಕನ್ನಡ ಭಾಷೆಯ ಅಭಿವೃದ್ಧಿಗೆ ಕಾನೂನು ಜಾರಿಗೊಳಿಸುವ, ಕನ್ನಡ ಕೈಗಾರಿಕಾ ನೀತಿ ಅನುಷ್ಠಾನಗೊಳಿಸುವ, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನ ಒದಗಿಸಲು ನಿಖರ ಯೋಜನೆ ಪ್ರಕಟಿಸುವ, ಗಡಿ ಸಮಸ್ಯೆಗಳಿಗೆ ಪರಿಹಾರ ಒದಗಿಸುವ, ಕನ್ನಡ ಶಾಲೆಗಳು ಮುಚ್ಚದಂತೆ ಕನ್ನಡ ಭಾಷೆಗೆ ಮನ್ನಣೆ ತರುವ ಇಚ್ಛಾಶಕ್ತಿಯನ್ನು ಮುಖ್ಯಮಂತ್ರಿ ವ್ಯಕ್ತಪಡಿಸುತ್ತಾರೆ ಎಂಬ ನಂಬಿಕೆ ಇದೆ ಎಂದು ನಾಡೋಜ ಡಾ. ಮಹೇಶ ಜೋಶಿ ಅವರು ಹೇಳಿದರು.

**ಕನ್ನಡಕ್ಕೆ ಆಪತ್ತು ತರುವ ಶಕ್ತಿ ಹುಟ್ಟಿಲ್ಲ, ಹುಟ್ಟುವುದೂ ಇಲ್ಲ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ**

ಕನ್ನಡವು ಅತ್ಯಂತ ಶ್ರೀಮಂತ ಭಾಷೆಯಾಗಿದ್ದು, ಇದಕ್ಕೆ ಆಪತ್ತು ತರುವ ಯಾವುದೇ ಶಕ್ತಿ ಜಗತ್ತಿನಲ್ಲಿ ಇನ್ನೂ ಹುಟ್ಟಿಲ್ಲ ಮತ್ತು ಹುಟ್ಟುವುದೂ ಇಲ್ಲ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿಯಲ್ಲಿ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಒಂದು ಭಾಷೆ, ಒಂದು ಸಂಸ್ಕೃತಿ ಬೆಳೆಯಬೇಕಾದರೆ ಇದುವರೆಗೆ ನಡೆದು ಬಂದ ದಾರಿಯ ಸಿಂಹಾವಲೋಕನ ಮಾಡಬೇಕಾಗುತ್ತದೆ. ಆಗ ಅದು ಮುಂದಿನ ದಾರಿಯನ್ನು ನಿರ್ಧರಿಸುತ್ತದೆ ಎಂದರು. ಇದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ಕನ್ನಡದ ಸಮಗ್ರ ಅಭಿವೃದ್ಧಿ ಕುರಿತ ವಿಧೇಯಕದ ಬಗ್ಗೆ ವಿಧಾನಸೌಧದ ಒಳಗೆ, ಹೊರಗೆ, ಸಾಹಿತ್ಯ ವಲಯ ಹಾಗೂ ಸಾರ್ವಜನಿಕವಾಗಿ ವ್ಯಾಪಕ ಚರ್ಚೆಯಾಗಬೇಕು. ಇದು ಅವಸರದಲ್ಲಿ ಕೈಗೊಳ್ಳಬೇಕಾದ ನಿರ್ಧಾರ ಅಲ್ಲ ಎಂದರು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕಕ್ಕೆ ಸಂಬಂಧಿಸಿದಂತೆ ಕಾನೂನು ಆಯೋಗವು ಅಭಿಪ್ರಾಯ ನೀಡಿದೆ. ಇದರಲ್ಲಿ ಸಾಹಿತ್ಯಕ ಅಂಶಗಳು ಸೇರಿದಂತೆ ಹಲವು ವಿಷಯಗಳನ್ನು ಸೇರಿಸಬೇಕಿದೆ. ಅನಂತರ ವಿಧೇಯಕ ಸಿದ್ಧಪಡಿಸಿ ಮಂಡಿಸಬೇಕಾಗುತ್ತದೆ ಎಂದು ಬೊಮ್ಮಾಯಿ ಅವರು ಹೇಳಿದರು.

೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದ ವೇದಿಕೆಯಲ್ಲಿ ಕೇಂದ್ರ ಸಚಿವರಾದ ಶ್ರೀ ಪ್ರಹ್ಲಾದ್ ಜೋಶಿ, ರಾಜ್ಯ ವಿಧಾನಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಇಂಧನ ಖಾತೆ ಸಚಿವರಾದ ವಿ ಸುನಿಲ್‌ಕುಮಾರ್, ಕಾರ್ಮಿಕ ಖಾತೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಅರಬೈಲ್ ಶಿವರಾಮ ಹೆಬ್ಬಾರ, ಗಣಿ ಖಾತೆ ಸಚಿವ ಮುರುಗೇಶ ನಿರಾಣಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಖಾತೆ ಸಚಿವ ಬಿ.ಸಿ. ಪಾಟೀಲ್, ಶಾಸಕ ನೆಹರು ಓಲೇಕಾರ, ಇತರರು ಉಪಸ್ಥಿತರಿದ್ದರು.






**ಸಮ್ಮೇಳನ ವಿಶೇಷತೆಗಳು:**

* **ಮೊದಲ ಬಾರಿಗೆ ಕನ್ನಡ ಜ್ಯೋತಿ ಮತ್ತು ಕನ್ನಡ ರಥ:** ಸಮ್ಮೇಳನದ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಸಿದ್ಧಾಪುರದ ಭುವನಗಿರಿಯಲ್ಲಿನ ಕನ್ನಡ ತಾಯಿ ಭುವನೇಶ್ವರಿ ದೇವಿಯ ದೇಗುಲದಲ್ಲಿ ಪೂಜೆ ಸಲ್ಲಿಸಿ, ದೇವಿ ಎದುರಿನಲ್ಲಿ ಕನ್ನಡ ಜ್ಯೋತಿ ಬೆಳಗಿಸಿ, ಅದನ್ನು ವಿಶೇಷ 'ಕನ್ನಡ ರಥ'ದಲ್ಲಿಟ್ಟು ರಾಜ್ಯಾದ್ಯಂತ ಸಂಚಾರ ನಡೆಸಲಾಯಿತು. ಅಂತಿಮವಾಗಿ ಹಾವೇರಿಗೆ ತಲುಪಿದ ಜ್ಯೋತಿಯಿಂದ ಮಾನ್ಯ ಮುಖ್ಯಮಂತ್ರಿಗಳು ಸಮ್ಮೇಳನವನ್ನು ಉದ್ಘಾಟಿಸಿದರು.
* ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಹಾವೇರಿ ಜಿಲ್ಲೆಯವರು ಮತ್ತು ಸಮ್ಮೇಳನದ ಹೊಣೆ ಹೊತ್ತಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರು ಸಹ ಹಾವೇರಿ ಜಿಲ್ಲೆಯವರೇ.
* ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಹಿನ್ನೆಲೆಯಲ್ಲಿ ೮೬ ಕನ್ನಡ ಪುಸ್ತಕಗಳನ್ನು ಬಿಡುಗಡೆ ಮಾಡಲಾಯಿತು.

**ಆಹ್ವಾನ ಪತ್ರಿಕೆಯ ವಿಶೇಷಗಳು**

ಹಾವೇರಿಯಲ್ಲಿ ೮೬ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಆಹ್ವಾನ ಪತ್ರಿಕೆಯನ್ನು ಡಿಸೆಂಬರ್ ೨೪ರಂದು ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿಯವರು ಬಿಡುಗಡೆ ಮಾಡಿದ್ದರು.

**ಈ ಆಹ್ವಾನ ಪತ್ರಿಕೆಯ ವಿಶೇಷಗಳು:**

* ಆಹ್ವಾನ ಪತ್ರಿಕೆಯಲ್ಲಿ ಇದೇ ಮೊದಲ ಸಲ ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ಮಾತೃಗಳಾದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ. ವಿಶ್ವೇಶ್ವರಯ್ಯ ಮತ್ತು ಸರ್ ಮಿರ್ಜಾ ಇಸ್ಮಾಯಿಲ್ ಅವರ ಭಾವಚಿತ್ರಗಳನ್ನು ಪ್ರಕಟಿಸುವ ಮೂಲಕ ಗೌರವವನ್ನು ಸಲ್ಲಿಸಲಾಗಿದೆ.
* ಕನ್ನಡ ತಾಯಿಯ ಭುವನೇಶ್ವರಿಯ ಚಿತ್ರವು ಮುಖಪುಟದಲ್ಲಿದ್ದು ಕನ್ನಡ ಬಾವುಟದ ಜೊತೆಯಲ್ಲಿ ಭಕ್ತಿ ಭಾವ ಮೂಡಿ ಬರುವ ಭಂಗಿಯ ಈ ಚಿತ್ರವು ಆಹ್ವಾನ ಪತ್ರಿಕೆಯ ವಿಶೇಷತೆಯನ್ನು ಹೆಚ್ಚು ಮಾಡಿದೆ.
* ಆಹ್ವಾನ ಪತ್ರಿಕೆಯ ಮುಖಪುಟದಲ್ಲಿಯೇ 'ಇದು ಕನ್ನಡಿಗರೆಲ್ಲರ ಹಬ್ಬ' ಎಲ್ಲಾ ಕನ್ನಡಿಗರೂ ಸಮಾನರು ಎನ್ನುವ ವಾಕ್ಯವಿದ್ದು, ಇದು ಜಾತಿ ಧರ್ಮಗಳನ್ನು ಮೀರಿದ ಕನ್ನಡದ ಹಬ್ಬ ಎನ್ನುವುದನ್ನು ಸಾಕ್ಷೀಕರಿಸಿ ಕನ್ನಡವನ್ನು ಹೊರತು ಪಡಿಸಿದ ಯಾವುದೇ ಶಿಷ್ಟಾಚಾರಕ್ಕೂ ಸಮ್ಮೇಳನದಲ್ಲಿ ಮಹತ್ವವಿಲ್ಲ ಎನ್ನುವುದನ್ನು ಸೂಚಿಸಿದೆ.
* ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ಮಹತ್ವ ನೀಡಿ ಕಾರ್ಯಕ್ರಮವನ್ನು ನಿಗದಿತ ಸಮಯದಲ್ಲಿ ಮುಗಿಸುವ ಸ್ಪಷ್ಟ ಉದ್ದೇಶವನ್ನು ಕನ್ನಡ ಸಾಹಿತ್ಯ ಪರಿಷತ್ ಹೊಂದಿದ್ದು ಇದೇ ಮೊದಲ ಸಲ ಪ್ರತಿಯೊಬ್ಬರಿಗೂ ಮಾತನಾಡುವ ಸಮಯವನ್ನು ಸೂಚಿಸಲಾಗಿದ್ದು ಅದನ್ನು ಕಟ್ಟುನಿಟ್ಟಾಗಿ ಅನುಷ್ಠಾನಕ್ಕೆ ತರಲಾಗಿದೆ.
* ಇಡೀ ಆಹ್ವಾನ ಪತ್ರಿಕೆಯ ವಿನ್ಯಾಸವು ಕನ್ನಡದ ಧ್ವಜದ ನೆನಪನ್ನು ತರುವಂತಿದ್ದು, ಇದರ ಸ್ವರೂಪವೇ ಕನ್ನಡಮಯವಾಗಿದೆ.
* ಇದೇ ಮೊಟ್ಟ ಮೊದಲ ಸಲ ಪ್ರಧಾನ ವೇದಿಕೆಗೆ 'ಕನಕ–ಶರೀಫ–ಸರ್ವಜ್ಞ' ಮೂವರು ಸಾಧಕರ ಹೆಸರನ್ನು ಇಡಲಾಗಿದ್ದು 'ಸಾಮರಸ್ಯದ ಭಾವ ಕನ್ನಡದ ಜೀವ' ಎನ್ನುವ ಧ್ಯೇಯ ವಾಕ್ಯವನ್ನೂ ನೀಡಲಾಗಿದೆ. ಇದು ಸಮ್ಮೇಳನ ಹೊಂದಿರುವ ಉನ್ನತ ಆಶಯದ ದ್ಯೋತಕವಾಗಿದೆ.
* ಪ್ರಧಾನ ವೇದಿಕೆ ಎನ್ನುವ ಪರಿಕಲ್ಪನೆಯನ್ನು ಮೀರಿ ಇದೇ ಮೊದಲ ಸಲ ಮೂರು ಪ್ರಧಾನ ವೇದಿಕೆಗಳನ್ನು ರೂಪಿಸಲಾಗಿದೆ. 'ಸಮಾನಾಂತರ ವೇದಿಕೆ' ಎಂಬ ಪರಿಕಲ್ಪನೆಯನ್ನು ಕೈಬಿಡಲಾಗಿದೆ. ಕನ್ನಡ ಸಾಹಿತ್ಯ ಸಮ್ಮೇಳನಗಳ ಇತಿಹಾಸದಲ್ಲಿಯೇ ಇದೇ ಮೊದಲ ಸಲ ೩೨ ಗೋಷ್ಠಿಗಳು ಏರ್ಪಾಟಾಗಿದ್ದು ಒಟ್ಟು ೧೫೪ ತಜ್ಞರು ಭಾಗವಹಿಸಿದ್ದರು. ಇದು ನಿಜಕ್ಕೂ ದಾಖಲೆಯಾಗಿದ್ದು ಹಿಂದಿನ ಸಮ್ಮೇಳನಗಳಲ್ಲಿ ಇದ್ದ ಗೋಷ್ಠಿ ಮತ್ತು ಭಾಗವಹಿಸಿದವರ ತಜ್ಞರ ಪಟ್ಟಿ ನೋಡಿದರೆ ಇದರ ಮಹತ್ವ ಅರಿವಾಗುತ್ತದೆ.
* ಎಲ್ಲ ಗೋಷ್ಠಿಗಳಲ್ಲೂ ತಜ್ಞ ಹೊಸಬರಿಗೆ ಅವಕಾಶ ನೀಡಲಾಗಿದೆ. ಸಮಯ ಪರಿಪಾಲನೆಯನ್ನು ಅನುಸರಿಸಲಾಗಿದೆ. ಈ ನಿಟ್ಟಿನಲ್ಲಿ ಆಮಂತ್ರಣ ಪತ್ರಿಕೆಯಲ್ಲಿಯೇ ಸಮಯಮಿತಿಯನ್ನು ನಿಗದಿಪಡಿಸಲಾಗಿತ್ತು.
* ಕವಿಗೋಷ್ಠಿಗಳಲ್ಲಿ ಹಿರಿಯ ಕವಿಗಳನ್ನು ವಿಶೇಷ ಆಹ್ವಾನಿತರನ್ನಾಗಿಸಿ ಕೊಂಡು ಹೊಸ ಪೀಳಿಗೆಯ ಕವಿ, ಕವಯತ್ರಿಯರಿಗೆ ಆದ್ಯತೆ ನೀಡಲಾಗಿತ್ತು. ಇದು ಹೊಸ



ಪೀಳಿಗೆಯ ಅಭಿವ್ಯಕ್ತಿಗೆ ಕನ್ನಡ ಸಾಹಿತ್ಯ ಪರಿಷತ್ ನೀಡುವ ಮಹತ್ವವನ್ನು ಸೂಚಿಸುತ್ತದೆ. ಕರ್ನಾಟಕದ ೩೧ ಜಿಲ್ಲೆಗಳಿಗೆ ಮಾತ್ರವಲ್ಲದೆ ಎಂಟು ಜನ ಹೊರ ನಾಡ ಕನ್ನಡಿಗರಿಗೂ ಕೂಡ ಕವನ ವಾಚಿಸುವ ಅವಕಾಶವನ್ನು ನೀಡಲಾಗಿದೆ. 'ಕನ್ನಡ ಸಾಹಿತ್ಯದ ಹೊಸ ಒಲವುಗಳು' ಗೋಷ್ಠಿಯಲ್ಲಿ ಕೂಡ ಯುವ ಬರಹಗಾರರ ತುಡಿತಗಳ ಕುರಿತು ಚರ್ಚೆ ನಡೆಯಿತು.

* ಗೋಷ್ಠಿಗಳಲ್ಲಿ ಈವರೆಗೂ ಚರ್ಚೆಯಾಗದ ವಿಷಯಗಳ ಕುರಿತು ಆದ್ಯತೆಯನ್ನು ನೀಡಿರುವುದು ಮಹತ್ವದ ಸಂಗತಿಯಾಗಿತ್ತು. ಕನ್ನಡದಲ್ಲಿ ಕಾನೂನು ಸಾಹಿತ್ಯ ಎನ್ನುವ ವಿಶೇಷ ವಿಷಯದ ಕುರಿತು ಗೋಷ್ಠಿ ಏರ್ಪಾಟಾಗಿದ್ದು ತಮ್ಮ ಕ್ಷೇತ್ರದಲ್ಲಿ ಕಟ್ಟು ನಿಟ್ಟಾಗಿ ಕನ್ನಡವನ್ನು ಅನುಷ್ಠಾನಕ್ಕೆ ತಂದ ನ್ಯಾಯಾಧೀಶರು ಮತ್ತು ವಕೀಲರು ಇದೇ ಮೊದಲ ಸಲ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ರಾಷ್ಟ್ರೀಯ ಶಿಕ್ಷಣ ನೀತಿಯ ಹಿನ್ನೆಲೆಯಲ್ಲಿ 'ಶಿಕ್ಷಣದಲ್ಲಿ ಕನ್ನಡದ ಅಸ್ಮಿತೆ' ಎನ್ನುವ ಗೋಷ್ಠಿ ರೂಪು ಗೊಂಡಿದ್ದು ಇದು ಒಟ್ಟಾಗಿ ಕನ್ನಡ ಶಾಲೆಗಳು ಮತ್ತು ಕನ್ನಡ ಮಾಧ್ಯಮದ ಕುರಿತಾಗಿ ವಿಸ್ತೃತವಾದ ಚರ್ಚೆ ನಡೆಯಲಿದೆ. ಸಮ್ಮೇಳನಾಧ್ಯಕ್ಷರ ಜೊತೆಗಿನ ಮಾತು–ಮಂಥನದಲ್ಲಿ ಸಮಾಜದ ಎಲ್ಲಾ ಸ್ತರದವರಿಗೆ ಮಹತ್ವ ನೀಡಲಾಗಿದ್ದು, ಸಮ್ಮೇಳನಾಧ್ಯಕ್ಷರ ಸಾಧನೆಯ ಎಲ್ಲಾ ಮುಖಗಳನ್ನು ಈ ಮೂಲಕ ಅನಾವರಣಗೊಳಿಸಲು ಪ್ರಯತ್ನಿಸಲಾಗಿದೆ. 'ಅನ್ನದಾತರ ಅಳಲು–ಅಪೇಕ್ಷೆಗಳು' ಗೋಷ್ಠಿಯಲ್ಲಿ ಕೃಷಿಕರ ನೈಜ ಸ್ಥಿತಿಯ ಜೊತೆಗೆ ಕೃಷಿ ವಿಶ್ವವಿದ್ಯಾಲಯಗಳು ನೀಡಬಹುದಾದ ಕೊಡುಗೆಗಳ ಕುರಿತು ಚರ್ಚೆ ನಡೆದು, ಈ ಕ್ಷೇತ್ರದ ಎಲ್ಲಾ ನೆಲೆಗಳೂ ಇಲ್ಲಿ ಚರ್ಚಿತವಾದವು. 'ವರ್ತಮಾನದಲ್ಲಿ ಮಹಿಳೆ' ಗೋಷ್ಠಿಯಲ್ಲಿ ಮಹಿಳೆಯರ ಸಾಹಿತ್ಯ ಮತ್ತು ಔದ್ಯೋಗಿಕ ಕ್ಷೇತ್ರದಲ್ಲಿನ ಸಾಧನೆಗಳ ಜೊತೆಗೆ ಗ್ರಾಮೀಣ ಮಹಿಳೆಯರ ಸಾಧನೆಗಳಿಗೂ ಕೂಡ ಮಹತ್ವ ನೀಡಲಾಗಿತ್ತು. 'ಮಕ್ಕಳ ಸಾಹಿತ್ಯ' ಕುರಿತ ಗೋಷ್ಠಿಯಲ್ಲಿ ಮಕ್ಕಳ ಸಾಹಿತ್ಯದ ಜೊತೆಗೆ ವಿಶೇಷ ಚೇತನ ಮಕ್ಕಳ ಶೈಕ್ಷಣಿಕ ವಿಕಾಸದ ಕುರಿತೂ ಚರ್ಚೆ ನಡೆಯಿತು.

'ದಮನಿತರ ಲೋಕ'ದ ಸಬಲೀಕರಣಕ್ಕೆ ಮಹತ್ವ ನೀಡುವ ಗೋಷ್ಠಿ ಹೋರಾಟ ಮತ್ತು ಸಾಂಸ್ಕೃತಿಕ ದೃಷ್ಟಿ ಎರಡಕ್ಕೂ ಕೂಡ ಮಹತ್ವವನ್ನು ನೀಡಿತು. ಕನ್ನಡ ಸಾಹಿತ್ಯದಲ್ಲಿನ ವಿಷಯ ವೈವಿಧ್ಯತೆಯ ಕುರಿತ ಗೋಷ್ಠಿಯಲ್ಲಿ ಯಕ್ಷಗಾನ ಸಾಹಿತ್ಯ, ವೈದ್ಯ ಸಾಹಿತ್ಯ, ಚುಟುಕು ಸಾಹಿತ್ಯ, ಬಯಲಾಟ ಸಾಹಿತ್ಯದ ಕುರಿತೂ ಚರ್ಚೆಗಳು ನಡೆದವು. ಸಂಕೀರ್ಣ ಗೋಷ್ಠಿಯಲ್ಲಿ ಗಮಕ ಕಲೆ, ಲಿಂಗತ್ವ ಅಲ್ಪಸಂಖ್ಯಾತರ ಭವಿಷ್ಯ, ಮೊಬೈಲ್ ಸಾಧಕ–ಬಾಧಕಗಳು, ಪೊಲೀಸ್ ಸಾಹಿತ್ಯ ಹೀಗೆ ವೈವಿಧ್ಯಮಯ ವಿಷಯಗಳ ಕುರಿತು ಚರ್ಚೆ ನಡೆದವು. ಕಲಾ ಸಂಗಮದಲ್ಲಿ ಶಿಲ್ಪ ಕಲೆ, ಸಂಗೀತ, ನೃತ್ಯ, ಬೀದಿ ನಾಟಕಗಳ ಕುರಿತು ಚರ್ಚೆ ನಡೆದು, ಇದು ಸಮ್ಮೇಳನಕ್ಕೆ ವ್ಯಾಪಕತೆಯನ್ನು ತಂದು ಕೊಟ್ಟಿತು.

ಜಿಲ್ಲಾ ದರ್ಶನದ ಗೋಷ್ಠಿಯಲ್ಲಿಯೂ ಕೂಡ ಚಾರಿತ್ರಿಕ ನೆಲೆಗಳ ವಿವಿಧ ಸ್ವರೂಪವನ್ನು ಚರ್ಚಿಸಲಾಯಿತು. ಸ್ವಾತಂತ್ರ್ಯದ ಅಮೃತ ಮಹೋತ್ಸವದ ಕುರಿತಾಗಿ ಕೂಡ ಒಂದು ವಿಶಿಷ್ಟ ಗೋಷ್ಠಿ ರೂಪುಗೊಂಡಿದ್ದು ಕರ್ನಾಟಕದ ಕೊಡುಗೆಗಳು ಇಲ್ಲಿ ಚರ್ಚಿತವಾಯಿತು. ಕನ್ನಡಪರ ಮತ್ತು ಪ್ರಗತಿಪರ ವರದಿಗಳ ಕುರಿತಾಗಿಯೇ ಒಂದು ವಿಶಿಷ್ಟ ಗೋಷ್ಠಿ ರೂಪುಗೊಂಡಿದ್ದು ಸಮಗ್ರ ಕನ್ನಡ ಭಾಷಾ ಅಭಿವೃದ್ಧಿ ವಿಧೇಯಕ, ಮಹಾಜನ ವರದಿಗಳು ಇಲ್ಲಿ ಚರ್ಚಿತವಾಯಿತು. ವಿಜ್ಞಾನದ ಕುರಿತ ಗೋಷ್ಠಿಯಲ್ಲಿ ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿನ ಕನ್ನಡದ ಕುರಿತೂ ಚರ್ಚೆಗಳು ನಡೆಯಲಿದ್ದು ಹೊಸ ಅವಿಷ್ಕಾರಗಳ ಅಳವಡಿಕೆಯೂ ಚರ್ಚಿತವಾಯಿತು.

'ವಿದೇಶದಲ್ಲಿ ಕನ್ನಡ ಡಿಂಡಿಮ' ಗೋಷ್ಠಿಯಲ್ಲಿ ಅನಿವಾಸಿ ಕನ್ನಡಿಗರ ಆಶೋತ್ತರಗಳು ಬಿಂಬಿತವಾಗಿದ್ದು, ಕನ್ನಡ ಸಾಹಿತ್ಯ ಸಮ್ಮೇಳನದ ಇತಿಹಾಸದಲ್ಲೇ ಮೊದಲ ಸಲ ದುಬೈ, ಜರ್ಮನಿ, ಅಮೆರಿಕಗಳಿಂದಲೂ ಕನ್ನಡಿಗರು ಬಂದು ಪ್ರಬಂಧಗಳನ್ನು ಮಂಡಿಸಿರುವುದು ವಿಶೇಷ. ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಕನ್ನಡದ ಕುರಿತು ಇದೇ ಮೊದಲ ಸಲ ವಿಶೇಷ ಗೋಷ್ಠಿ ರೂಪು ಗೊಂಡಿದ್ದು ಕನ್ನಡಿಗರಿಗೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಸಿಕ್ಕುವ ಅವಕಾಶಗಳ ಕುರಿತು ಚರ್ಚೆ ನಡೆದಿರುವುದು ವಿಶೇಷ. ಕನ್ನಡದಲ್ಲಿ ಉಪ ಭಾಷೆಗಳು, ಸೋದರ ಭಾಷೆಗಳು ಸುಮಾರು ನಲವತ್ತು ಇರಬಹುದು ಎನ್ನುವುದು ಭಾಷಾ ಶಾಸ್ತ್ರಜ್ಞರ ಅಭಿಮತ, ಇದರಲ್ಲಿ ಪ್ರಾತಿನಿಧಿಕವಾಗಿ ತುಳು, ಸೋಲಿಗ, ಕೊಂಕಣಿ, ಕೊಡವ, ಅರೆಭಾಷೆಗಳ ಬಾಂಧವ್ಯದ ಕುರಿತು ಚರ್ಚೆ ನಡೆಯಿತು.

* ೮೬ನೆಯ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ೮೬ ಸಾಧಕರಿಗೆ ಸನ್ಮಾನ ಮಾಡಲಾಯಿತು. ನಾಡಿನ ವಿವಿಧ ಭಾಗಗಳಿಂದ ಮಾತ್ರವಲ್ಲದೆ ವಿದೇಶದಿಂದ ಕೂಡ ಸಾಧಕರು ಬಂದಿದ್ದು ವಿಶೇಷ. ಫೀಲ್ಡ್ ಮಾರ್ಷಲ್ ಕಾರಿಯಪ್ಪನವರ ಮಗ ಏರ್ ಮಾರ್ಷಲ್ ಕೆ.ಸಿ.ಕಾರಿಯಪ್ಪ, ಕನ್ನಡಕ್ಕೆ ಮೊದಲ ನಿಘಂಟು ನೀಡಿದ ರೆವರೆಂಡ್ ಫರ್ಡಿನ್ಯಾಂಡ್ ಕಿಟ್ಟೆಲ್ ಅವರ ಮರಿ ಮೊಮ್ಮಗ ಯಾರ್ಕ್ ಕಿಟ್ಟೆಲ್, ಮಾಲ್ಡೀವ್ ದೇಶದ ಗೌರವ ಕೌನ್ಸಿಲ್ ಜನರಲ್ ಡಾ.ವಿ.ಜಿ. ಜೋಸೆಫ್, ಜರ್ಮನಿ ನಗರ ಸಭಾ ಸದಸ್ಯರಾದ ವಿದುಷಿ ನಂದಿನಿ ನಾರಾಯಣ್, ಕತಾರ್ ದೇಶದ ಶ್ರೀ ಸುಬ್ರಹ್ಮಣ್ಯ ಹೆಬ್ಬಾಗಿಲು, ವಿಶ್ವ ಸಂಸ್ಥೆಯ ಮಾನವ ಹಕ್ಕು ಸಮಿತಿ ಪ್ರತಿನಿಧಿ ಡಾ.ಕೆ.ಪಿ.ಅಶ್ವಿನಿ, ಹಿರಿಯ ಕಲಾವಿದ ಶ್ರೀ ವೈಜನಾಥ ಬಿರಾದಾರ ಮೊದಲಾದ ಅನೇಕ ವಿಶಿಷ್ಟ ಸಾಧಕರು ಇದರಲ್ಲಿ ಸೇರಿರುವುದು ವಿಶೇಷವಾಗಿದೆ. ಸಮಾಜದ ಎಲ್ಲಾ ಕ್ಷೇತ್ರಗಳಿಂದಲೂ ಅರ್ಹರನ್ನು ಪಾರದರ್ಶಕವಾಗಿ ಆಯ್ಕೆ ಮಾಡಲಾಗಿದ್ದು, ಅರ್ಜಿಯನ್ನು ಆಹ್ವಾನಿಸದೆ ಎಲೆಮರೆಯ ಫಲದಂತೆ ಇರುವ ಅನೇಕ ಸಾಧಕರನ್ನು ಈ ಸಲ ಆಯ್ಕೆ ಮಾಡಿರುವುದು ವಿಶೇಷವಾಗಿದೆ. ಸನ್ಮಾನವು ಮೂರೂ ದಿನಗಳು ನಡೆದು ಎಲ್ಲಾ ಸನ್ಮಾನಿತರ ಸಾಧನೆಗೆ ಮಹತ್ವ ದೊರಕಿತು.

**ಸಮ್ಮೇಳನದ ಮೊದಲ ದಿನ ಸನ್ಮಾನಿತರಾಗಬೇಕಿದ್ದ ಹಿರಿಯ ರಂಗಭೂಮಿ ಕಲಾವಿದ ಶ್ರೀ ಗೋಪಾಲ ಕೃಷ್ಣ ನಾಯರಿ ಹಿಂದಿನ ದಿನ ನಿಧನರಾದರು.**

# ಕನ್ನಡ ಮನಸ್ಸುಗಳನ್ನು ಒಗ್ಗೂಡಿಸುವ ಕೆಲಸ ಕೈಗೊಂಡಿದೆ ಕನ್ನಡರಥ

## ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಮಹೇಶ ಜೋಶಿ



*ಕನ್ನಡರಥಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಪೂಜೆ ಸಲ್ಲಿಸಿ ಗೌರವ ನೀಡಿದರು.*

"**ತೇ**ರನೆಳೆಯುತ್ತಾರೆ ತಂಗಿ–ತೇರನೆಳೆಯುತ್ತಾರೆ ನೋಡಲಿಕ್ಕೆ ಹೋಗೂಣ ಬಾರೆ".. ಎಂದು ಸಂತ ಶಿಶುನಾಳ ಶರಿಫರು ಹಾಡಿದ ರೀತಿಯಲ್ಲಿ ನಾವು ಇಂದು ಕನ್ನಡದ ತೇರು ಎಳೆಯುತ್ತಿದ್ದೇವೆ. ಸಾಹಿತ್ಯ ಪರಿಷತ್ತಿನ ಇತಿಹಾಸದಲ್ಲೇ ಈ ಕನ್ನಡದ ತೇರು ಮೊದಲ ಬಾರಿಗೆ ಕನ್ನಡ ಜ್ಯೋತಿಯನ್ನು ಹೊತ್ತು ನಾಡಿನಾದ್ಯಂತ ಸಂಚರಿಸಿ, ಕನ್ನಡದ ಮನಸ್ಸುಗಳನ್ನು ಒಟ್ಟುಗೂಡಿಸಿ, ಕನ್ನಡದ ನುಡಿ ಜಾತ್ರೆಗೆ ಆಹ್ವಾನ ನೀಡುವ ಕಾರ್ಯ ಶುರುವಾಗಿದೆ, ಬಹು ಜನರ ನಿರೀಕ್ಷೆಯ ಕನ್ನಡ ತೇರು ನಾಡಿನಲ್ಲಿ ಸಂಚರಿಸಲು ಆರಂಭ ಮಾಡಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರ ತಾಲೂಕಿನ ಭುವನಗಿರಿಯ 'ತಾಯಿ ಕನ್ನಡ ಭುವನೇಶ್ವರಿ'ಗೆ ಪೂಜೆ ಸಲ್ಲಿಸಿ ಕನ್ನಡ ತಾಯಿಯ ದೇಗುಲದಿಂದ ತಂದಿರುವ ದೀಪವನ್ನು ಹೊತ್ತ ಕನ್ನಡ ರಥಕ್ಕೆ ಚಾಲನೆ ನೀಡಿ ಮೊದಲ ದಿನದ ಸಂಚಾರ ಯಶಸ್ವಿಗೊಳಿಸಿದ ಹಿನ್ನೆಲೆಯಲ್ಲಿ ಮಾಧ್ಯಮಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಪ್ರತಿಕ್ರಿಯೆ ನೀಡಿದರು. ಯಲ್ಲಾಪುರದಲ್ಲಿ ಆಗಮಿಸಿದ ಕನ್ನಡ ರಥಕ್ಕೆ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷರು ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶಿವರಾಮ ಹೆಬ್ಬಾರ

## ಒಂದು ಇಂಚು ಜಾಗವನ್ನೂ ಬಿಡಲಾರೆವು

ನಿರಂತರ ಗಡಿ ಕ್ಯಾತೆ ಮಾಡುತ್ತಿರುವ ಮಹಾರಾಷ್ಟ್ರಕ್ಕೆ ತಕ್ಕ ಉತ್ತರ ನೀಡಲು ನಮ್ಮ ಸರಕಾರ ಸಿದ್ಧವಾಗಿದೆ. ನಾಡಿನ ಸಮಸ್ತ ಕನ್ನಡಿಗರ ಆಶೋತ್ತರಗಳನ್ನು ಕಾಯುವುದು ನಮ್ಮ ಸರಕಾರದ ಆದ್ಯ ಕರ್ತವ್ಯ. ನಿತ್ಯವೂ ಕನ್ನಡದ ನೆಲದ ಮೇಲೆ ಕಣ್ಣಿಟ್ಟು ಕ್ಯಾತೆ ತೆಗೆಯುವ ಮರಾಠಿಗರ ನಡೆಯನ್ನು ತೀವ್ರವಾಗಿ ಖಂಡಿಸುತ್ತೇವೆ. ಕನ್ನಡ ನಾಡಿನ ಒಂದಿಂಚು ನೆಲವನ್ನೂ ಅನ್ಯರಿಗೆ ಬಿಟ್ಟುಕೊಡುವ ಮಾತೇ ಇಲ್ಲ. ನಮ್ಮ ಸರಕಾರ ಗಡಿ ವಿವಾದವನ್ನು ಸಮರ್ಥವಾಗಿ ನಿಭಾಯಿಸುವ ಮೂಲಕ ನಾಡಿನ ನೆಲ ಜಲದ ರಕ್ಷಣೆ ಮಾಡಿಕೊಳ್ಳಲಿದ್ದೇವೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿಯವರು ಸಂಪೂರ್ಣವಾಗಿ ಪ್ರಯತ್ನ ಮಾಡಲಿದ್ದಾರೆ ಎಂದು ಸಚಿವ ಶ್ರೀ ಶಿವರಾಮ ಹೆಬ್ಬಾರ ತಿಳಿಸಿದರು.

ಕನ್ನಡಿಗರು ಹೆಚ್ಚಾಗಿ ಇರುವ ಕಾಸರಗೋಡು, ಅಕ್ಕಲಕೋಟೆ, ಸೊಲ್ಲಾಪುರ, ಜತ್ತ, ಮಡಕಶಿರಾ ಸೇರಿದಂತೆ 'ಕನಾಡಾ ಪಂಡರಿ' ಎಂದು ಕರೆಸಿಕೊಂಡ ಪಂಡರಿನಾಥನ ಕ್ಷೇತ್ರ ಪಂಡರಾಪುರ ಸಹ ಕನ್ನಡದ ನೆಲವಾಗಿದೆ. ಇವೆಲ್ಲವೂ ಕನ್ನಡ ನಾಡಿಗೆ ಸೇರಬೇಕು. ಕನ್ನಡ ಜನರನ್ನು ಹಾಗೂ ಕನ್ನಡ ನೆಲವನ್ನು ಮರಳಿ ನಾಡಿಗೆ ತರುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ರಾಜ್ಯ ಸರಕಾರದೊಂದಿಗೆ ನಿಲ್ಲಲಿದೆ. ಕನ್ನಡ ನೆಲ, ಜಲ ರಕ್ಷಣೆಗೆ ಸರಕಾರದೊಂದಗೆ ಪರಿಷತ್ತು ಸದಾ ಕಟಿಬದ್ಧವಾಗಿ ಇರಲಿದೆ ಎನ್ನುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರು ಸರಕಾರ ನಡೆಸುತ್ತಿರುವ ನಾಡು ನುಡಿ ನೆಲ ಜಲದ ಹೋರಾಟಕ್ಕೆ ಬೆಂಬಲ ಸೂಚಿಸಿದರು.

ಅವರು ತಾಯಿ ಭುವನೇಶ್ವರಿಗೆ ಪೂಜೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

ರಾಜ್ಯದ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಹಾಗೂ ನನ್ನ ತವರು ಜಿಲ್ಲೆಯಾದ ಹಾವೇರಿಯಲ್ಲಿ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸುವ ಹಿನ್ನೆಲೆಯಲ್ಲಿ ಎಲ್ಲ ಸಿದ್ಧತೆಗಳು ಸಾಗಿವೆ. ಕನ್ನಡ ಸಾಹಿತ್ಯ ಪರಿಷತ್ತು ಮತ್ತು ರಾಜ್ಯ ಸರಕಾರ ಈ ಬಾರಿಯ ಕನ್ನಡ ಸಮ್ಮೇಳನವನ್ನು ಸವಾಲಿನ ರೀತಿಯಲ್ಲಿ ಸ್ವೀಕರಿಸಿದ್ದೇವೆ ಎಂದು ಕನ್ನಡ ಸಾಹಿತ್ಯ ಪರಿಷತ್ ರಾಜಾಧ್ಯಕ್ಷ ಡಾ. ಮಹೇಶ ಜೋಶಿ ತಿಳಿಸಿದ್ದಾರೆ.

ಸಿದ್ದಾಪುರ ತಾಲೂಕಿನ ಭುವನಗಿರಿಯಿಂದ ಚಾಲನೆ ನೀಡಲಾದ ಕನ್ನಡ ರಥ ಕರ್ನಾಟಕದಲ್ಲಿ ಕನ್ನಡತನವನ್ನು ಉಳಿಸಲು ದಾರಿದೀಪವಾಗಲಿದೆ. ಶಿಕ್ಷಣ, ಉದ್ಯೋಗ, ವ್ಯಾಪಾರ, ನ್ಯಾಯಾಲಯದಲ್ಲಿ ಕನ್ನಡವೇ ಸಾರ್ವಭೌಮವಾಗಬೇಕು ಎಂಬುದು ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತಿನ ಉದ್ದೇಶವಾಗಿದೆ. ಜೊತೆಗೆ ಚಳಿಗಾಲದ ಅಧಿವೇಶನದಲ್ಲಿ "ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨"ವನ್ನು ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರ ನೇತೃತ್ವದಲ್ಲಿ ಸರ್ವಾನುಮತದಲ್ಲಿ ಕಾನೂನಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿ, ಹಾವೇರಿಯ ಸಮ್ಮೇಳನವು ಸಾಹಿತ್ಯೋತ್ಸವದ ಜೊತೆಗೆ ಕನ್ನಡಿಗರ ವಿಜಯೋತ್ಸವವಾಗಲಿದೆ. ಎಲ್ಲಾ ಕನ್ನಡಿಗರು ಹಾವೇರಿಯಲ್ಲಿ ನಡೆಯಲಿರುವ ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸಿ ಕನ್ನಡದ ಹಬ್ಬಕ್ಕೆ ಎಲ್ಲ ಕನ್ನಡಿಗರು ಭಾಗವಹಿಸುವ ಮೂಲಕ ಕನ್ನಡ ಕಟ್ಟಿ ಬೆಳೆಸುವ ಕಾರ್ಯವಾಗಬೇಕಿದೆ. ಅದಕ್ಕಾಗಿ ಎಲ್ಲ ಕನ್ನಡದ ಮನಸ್ಸುಗಳು ಹಾವೇರಿಯಲ್ಲಿ ನಡೆಯುವ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಭಾಗವಹಿಸಬೇಕು ಎಂದು ಎಂದು ನಾಡೋಜ ಡಾ. ಮಹೇಶ ಜೋಶಿ ಆಹ್ವಾನ ನೀಡಿದ್ದಾರೆ. ಕನ್ನಡ ನಂದಾ ದೀಪವನ್ನು ಹೊತ್ತ ಕನ್ನಡ ರಥಕ್ಕೆ ಪೂಜೆ ಸಲ್ಲಿಸುವ ಮೂಲಕ ಗೌರವ ನೀಡಿದ ಸಚಿವ ಶ್ರೀ ಶಿವರಾಮ ಹೆಬ್ಬಾರ ಅವರು ಮಾತನಾಡಿ, ಅಖಿಲ ಕನ್ನಡ ರಥ ಉತ್ತರ ಕನ್ನಡ ಜಿಲ್ಲೆಯಿಂದ ಹೊರಟಿರುವುದು ಸಂತಸದ ಸಂಗತಿ. ಈ ಬಾರಿಯ ಸಾಹಿತ್ಯ ಸಮ್ಮೇಳನವನ್ನು ಅದ್ಭುತವಾಗಿ ಯಶಸ್ವಿಗೊಳಿಸುವ ಉದ್ದೇಶ ಸರಕಾರ ಹೊಂದಿದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಸಿದ್ಧತೆಗಳು ನಡೆದಿವೆ. ಕನ್ನಡವನ್ನು ಕೀಳಾಗಿ ನೋಡುವ ಜನರಿಗೆ ಪ್ರಸ್ತುತ ಸಮ್ಮೇಳನದ ಮೂಲಕ ಸೂಕ್ತ ಉತ್ತರ ನೀಡಬೇಕಿದೆ. ಕನ್ನಡಿಗರ ವಿಜಯೋತ್ಸವ ರೀತಿಯಲ್ಲಿ ಕನ್ನಡ ಅಕ್ಷರ ಜಾತ್ರೆಯನ್ನು ನಡೆಸಲಿದ್ದೇವೆ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಉತ್ತರ ಕನ್ನಡ ಜಿಲ್ಲಾಧ್ಯಕ್ಷ ಶ್ರೀ ಬಿ.ಎನ್. ವಾಸರೆ ಮಾತನಾಡಿ, ಕನ್ನಡ ರಥಕ್ಕೆ ಚಾಲನೆ ನೀಡುವ ಮೂಲಕ ಕನ್ನಡ ನಾಡಿನಲ್ಲಿ ಕನ್ನಡದ ಅಸ್ಮಿತೆ ತಿಳಿಸುವ ಕಾರ್ಯ ನಡೆಯುತ್ತಿದೆ. ನಾಡಿನ ಪ್ರತಿಯೊಬ್ಬನೂ ಕನ್ನಡ ತಾಯಿಯ ಋಣದಲ್ಲಿ ಇದ್ದಾರೆ. ತಾಯಿಯ ಋಣ ತೀರಿಸುವುದು ಎಂದೂ ಸಾಧ್ಯವಿಲ್ಲದ ಮಾತು. ಆದರೆ ಕನ್ನಡ ತಾಯಿಯ ರಥದ ದರ್ಶನ ಮಾಡುವುದೇ ಪುಣ್ಯದ ಕೆಲಸ ಎಂದು ಹೇಳಿದರು.

ಕನ್ನಡ ರಥದ ಜಾಥಾ ಉತ್ತರ ಕನ್ನಡ ಜಿಲ್ಲೆಯಲ್ಲಿ ಸಂಚರಿಸಿ ಕಲಘಟಗಿಯ ಮೂಲಕ ಧಾರವಾಡ ಜಿಲ್ಲೆಗೆ ಪ್ರವೇಶ ಮಾಡಿತು. ಈ ಸಂದರ್ಭದಲ್ಲಿ ಉತ್ತರ ಕನ್ನಡ ಜಿಲ್ಲಾಡಳಿತದ ಅಧಿಕಾರಿಗಳು ಜಿಲ್ಲೆಯ ಸಾಹಿತಿಗಳು, ಕನ್ನಡಾಭಿಮಾನಿಗಳು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಶೃಂಗಾರಗೊಂಡ ಹಾವೇರಿ: ಕಲಾತಂಡಗಳ ಮೆರುಗು, ಭೂರೀ ಭೋಜನ, ವಸತಿ ವ್ಯವಸ್ಥೆ


ಮೂರು ದಿನಗಳ ಕಾಲ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಹಾವೇರಿ ನಗರ ಮದುವಣಗಿತ್ತಿಯಂತೆ ಅಲಂಕಾರಗೊಂಡಿತ್ತು. ನಗರದ ಪ್ರಮುಖ ರಸ್ತೆಗಳು ಡಾಂಬರೀಕರಣಗೊಂಡಿದ್ದವು. ರಸ್ತೆಯ ಇಕ್ಕೆಲಗಳು ಸ್ವಚ್ಛಗೊಂಡಿದ್ದವು. ಅಲಂಕಾರಿಕ ಸ್ವಾಗತ ಕಮಾನಗಳು ರಾರಾಜಿಸುತ್ತಿದ್ದವು. ಗೋಡೆ ಬರಹ, ವಾರ್ಲಿ ಚಿತ್ರಗಳ ಚಿತ್ತಾರ, ಮೈಸೂರು ದಸರಾ ಮಾದರಿ ದೀಪಾಲಂಕಾರಗಳು ಆಕರ್ಷಣೀಯವಾಗಿದ್ದವು. ನಗರದ ವೃತ್ತಗಳಲ್ಲಿ ಹೂವಿನ ಅಲಂಕಾರ, ಕಂಬಗಳಿಗೆ ಬಟ್ಟೆಯ ಅಲಂಕಾರಿಕ ಬಟ್ಟೆಗಳ ಸಿಂಗಾರ, ಕನ್ನಡಧ್ವಜದ ಹಾರಾಟಗಳು ಗಮನ ಸೆಳೆದವು.

ಸಮ್ಮೇಳನದಲ್ಲಿ ಊಟ–ತಿಂಡಿಗಳಿಗೆ ಯಾವುದೇ ಕೊರತೆ ಇರಲಿಲ್ಲ. ಲಕ್ಷ ಲಕ್ಷಗಟ್ಟಲೇ ಜನ ಬಂದರೂ ಎಲ್ಲರಿಗೂ ಊಟ–ಉಪಹಾರ, ಕಾಫಿ, ಟೀ ವ್ಯವಸ್ಥೆ ಮಾಡಲಾಗಿತ್ತು. ಅನ್ನ, ಸಾಂಬಾರು, ಸಾರು, ಪಲ್ಯ, ರೊಟ್ಟಿ, ಬಿರಂಜಿ ರೈಸ್, ಶೇಂಗಾ ಹೋಳಿಗೆ, ಕೇಸರಿಬಾತ್, ಉಪ್ಪಿಟ್ಟು, ಲಡ್ಡು, ಮೈಸೂರುಪಾಕ್, ಹೆಸರುಬೇಳೆ ಪಾಯಸ, ಶ್ಯಾವಿಗೆ ಖೀರು, ಗೋಧಿ ಹುಕ್ಕಿ, ವೆಜಿಟೇಬಲ್ ಬಾತ್, ಚಪಾತಿ, ಶೇಂಗಾ ಚಟ್ನಿ, ಉಪ್ಪಿನಕಾಯಿ, ಪುಳಿಯೋಗರೆ, ಬಿಸಿಬೇಳೆಬಾತ್, ಚಿತ್ರಾನ್ನ– ಮೂರು ದಿನವೂ ಸಮ್ಮೇಳನಕ್ಕೆ ಆಗಮಿಸಿದವರ ಹಸಿವನ್ನು ಇಂಗಿಸಿದವು. ಸಮ್ಮೇಳನದ ಮೆರವಣಿಗೆಯು ಪುರಸಿದ್ದೇಶ್ವರ ದೇವಸ್ಥಾನದಿಂದ ಆರಂಭವಾಗಿ ಬಸ್‌ನಿಲ್ದಾಣ, ಆರ್‌ಟಿಓ ಕಚೇರಿ ಮಾರ್ಗವಾಗಿ ವೇದಿಕೆ ತಲುಪಿತು. ಮೆರವಣಿಗೆಯಲ್ಲಿ ಜಿಲ್ಲೆ, ರಾಜ್ಯದ ನಾನಾ ಜಿಲ್ಲೆಗಳ ೯೧ ಕಲಾ ತಂಡಗಳು ಭಾಗವಹಿಸಿದ್ದವು. ೮೦೦ ರಿಂದ ೯೦೦ ಕಲಾವಿದರು ಭಾಗವಹಿಸಿದ್ದರು. ೧೩ ಸಾರೋಟು, ೪ ಸ್ತಬ್ಧಚಿತ್ರಗಳು, ಸಮ್ಮೇಳನಾಧ್ಯಕ್ಷರ ಸಾರೋಟು, ಕನ್ನಡ ರಥಗಳು ಮೆರವಣಿಗೆಗೆ ಮೆರುಗು ನೀಡಿದವು.

ಸಮ್ಮೇಳನಕ್ಕೆ ಆಗಮಿಸುವವರಿಗಾಗಿ ಹಾವೇರಿಯ ಲಾಡ್ಜ್‌ಗಳಲ್ಲಿ ಅಲ್ಲದೇ, ಪಕ್ಕದ ಹುಬ್ಬಳ್ಳಿ, ದಾವಣಗೆರೆಗಳಲ್ಲದೇ, ಶಿಗ್ಗಾವಿ, ಬ್ಯಾಡಗಿ ತಾಲೂಕಿನ ಹೊಟೇಲ್‌ಗಳಲ್ಲಿ ವ್ಯವಸ್ಥೆ ಮಾಡಲಾಗಿತ್ತು.

# ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨ಕ್ಕೆ ಸಮಗ್ರ ಪರಿಷ್ಕರಣೆ ಅಗತ್ಯ

## ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ವಿಶೇಷ ಚಿಂತನಗೋಷ್ಠಿಯಲ್ಲಿ ಒಕ್ಕೊರಲ ಅಭಿಪ್ರಾಯ



*ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨"ದ ಸಮಗ್ರ ಪರಿಷ್ಕರಣೆ ಅಗತ್ಯ ಎಂದು ಬುಧವಾರ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ವಿಶೇಷ ಚಿಂತನಗೋಷ್ಠಿಯ ಉದ್ಘಾಟನೆ*

**ಬೆಂಗಳೂರು:** ಕರ್ನಾಟಕ ವಿಧಾನ ಸಭೆಯಲ್ಲಿ ಮಂಡನೆಯಾಗಿರುವ ಕನ್ನಡಿಗರ ಬಹುನಿರೀಕ್ಷಿತ "ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨"ದ ಸಮಗ್ರ ಪರಿಷ್ಕರಣೆ ಅಗತ್ಯ ಎಂದು ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ವಿಶೇಷ ಚಿಂತನಗೋಷ್ಠಿಯಲ್ಲಿ ಒಕ್ಕೊರಲ ಅಭಿಪ್ರಾಯ ವ್ಯಕ್ತವಾಯಿತು. ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ೧೨.೧೦.೨೦೨೨ ರಂದು ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಚಿಂತನಗೋಷ್ಠಿ ನಡೆಯಿತು.

ನಿಡುಮಾಮಿಡಿ ಮಠದ ಶ್ರೀ ಶ್ರೀ ವೀರಭದ್ರ ಚನ್ನಮಲ್ಲ ಸ್ವಾಮೀಜಿಗಳು, ಬೇಲಿಮಠದ ಶ್ರೀ ಶ್ರೀ ಶಿವರುದ್ರ ಸ್ವಾಮೀಜಿಗಳು, ಕಾನೂನು ಮತ್ತು ಸಂಸದೀಯ ಸಚಿವರಾದ ಶ್ರೀ ಜೆ.ಸಿ. ಮಾಧುಸ್ವಾಮಿ, ಮಾಜಿ ಕಾನೂನು ಸಚಿವ ಶ್ರಿ ಎಚ್.ಕೆ. ಪಾಟೀಲ್, ವಿಶ್ರಾಂತ ನ್ಯಾಯಮೂರ್ತಿ ಶ್ರೀ ಅರಳಿ ನಾಗರಾಜ್, ವಿಶ್ರಾಂತ ನ್ಯಾಯಾಧೀಶ ಶ್ರೀ ಶಿವಲಿಂಗೇಗೌಡ, ಕೇಂದ್ರ ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾದ ಶ್ರೀ ಚಂದ್ರಶೇಖರ ಕಂಬಾರ, ಹಿರಿಯ ಸಾಹಿತಿ ಶ್ರೀ ಎಸ್.ಎಲ್. ಭೈರಪ್ಪ, ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನಿಯೋಜಿತ ಅಧ್ಯಕ್ಷ ಡಾ. ದೊಡ್ಡರಂಗೇಗೌಡ, ಹಿರಿಯ ಸಾಹಿತಿ ಡಾ. ಪ್ರಧಾನ ಗುರುದತ್ತ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಶ್ರೀ ಟಿ.ಎಸ್. ನಾಗಾಭರಣ, ಮಾಜಿ ಅಡ್ವೋಕೇಟ್ ಜನರಲ್ ಶ್ರೀ ಅಶೋಕ ಹಾರನಹಳ್ಳಿ ಅವರು ಸೇರಿದಂತೆ, ಅನೇಕ ಕನ್ನಡ ಪರ ಚಿಂತಕರು, ಹೋರಾಟಗಾರರು, ಹಲವು ಕ್ಷೇತ್ರದ ಗಣ್ಯರು ಈ ಚಿಂತನಗೋಷ್ಠಿಯಲ್ಲಿ ಭಾಗವಹಿಸಿದ್ದರು.

ಪ್ರಾಸ್ತಾವಿಕ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು, ಈ ವಿಧೇಯಕದಲ್ಲಿ ಎಲ್ಲ ಕನ್ನಡಿಗರನ್ನು ಪ್ರತಿನಿಧಿಸುವ ಅಂಶಗಳು ಕಂಡುಬರುತ್ತಿಲ್ಲ, ವಿಧೇಯಕದಲ್ಲಿ 'ಕನ್ನಡಿಗ' ಎನ್ನುವ ಪರಿಕಲ್ಪನೆ ಸಮರ್ಪಕವಾಗಿಲ್ಲ. ಅದು ಭೌಗೋಳಿಕ ವ್ಯಾಪ್ತಿಯನ್ನು ಮಾತ್ರ ಪರಿಗಣಿಸಿದ್ದು, ಇದರಿಂದ ಹೊರನಾಡು, ಗಡಿನಾಡು ಹಾಗೂ ಹೊರ ದೇಶದ ಕನ್ನಡಿಗರಿಗೆ ತಾವು ಕನ್ನಡಿಗರು  ಅಲ್ಲ ಎಂಬ ಭಾವನೆ ಬರುತ್ತದೆ. ಅನುಷ್ಠಾನ ಕಾರ್ಯವ್ಯವಸ್ಥೆಯಲ್ಲಿ ಅಧಿಕಾರಿಗಳದ್ದೇ ಪಾರುಪತ್ಯ ಕಂಡುಬರುತ್ತಿದೆ. ಕೇವಲ ಅಧಿಕಾರಿಗಳಿಂದ ಸಮಗ್ರ ಕನ್ನಡ ಅಭಿವೃದ್ಧಿಯಾಗುವುದಿದ್ದರೆ ಇಷ್ಟೆಲ್ಲಾ ಕಾನೂನು ಹಾಗೂ ನೂರಾರು ಸುತ್ತೋಲೆಗಳು ಬಂದಿದ್ದರೂ ಇಲ್ಲಿಯವರೆಗೆ  ಏಕೆ ಕನ್ನಡದ ಅಭಿವೃದ್ಧಿಯಾಗಲಿಲ್ಲ ಎಂದು ಪ್ರಶ್ನಿಸಿದ ಅವರು, ಈ ಹಿನ್ನೆಲೆಯಲ್ಲಿ ವಿಧೇಯಕದ ಕುರಿತು ಕೂಲಂಕಷವಾಗಿ ಚರ್ಚೆ ನಡೆಯಬೇಕಿದೆ ಎಂದು ಹೇಳಿದರು.

ಕಾನೂನು ಮತ್ತು ಸಂಸದೀಯ ಸಚಿವರಾದ ಶ್ರೀ ಜೆ.ಸಿ. ಮಾಧುಸ್ವಾಮಿ ಅವರು ಮಾತನಾಡಿ, ವಿಧೇಯಕ ಮಂಡನೆಯಾಗಿದೆ ಅಷ್ಟೇ. ಕಾನೂನು ಆಯೋಗವು ನೀಡಿದ ಕರಡು ಪ್ರತಿಯಲ್ಲಿ ಸಂವಿಧಾನದ ಚೌಕಟ್ಟಿಗೆ ಅನುಗುಣವಾಗುವಂತೆ ತಿದ್ದುಪಡಿ ಮಾಡಲಾಗಿದೆ. ಉದಾಹರಣೆಗೆ ರಾಜ್ಯಪಾಲರಿಗೆ ಸಲ್ಲಿಕೆಯಾಗುವ ಸುಗ್ರೀವಾಜ್ಞೆಗಳು ಕನ್ನಡದಲ್ಲೇ ಇದ್ದರೆ ರಾಜ್ಯಪಾಲರು ಬೇರೆ ಭಾಷೆಯವರಾಗಿರುತ್ತಾರೆ. ಅವರಿಗೆ ಅದನ್ನು ಅರ್ಥ ಮಾಡಿಕೊಳ್ಳಲು ಕಷ್ಟವಾಗುವುದರಿಂದ ಅದು ಇಂಗ್ಲಿಷ್‌ನಲ್ಲಿಯೇ ಇರುವುದು ಅನಿವಾರ್ಯ ಎಂದು ಹೇಳಿದ ಅವರು ಸರ್ಕಾರ ಮಂಡಿಸಿರುವ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨ವನ್ನು ಸಮರ್ಥಿಸಿಕೊಂಡರು.

ನಿಡುಮಾಮಿಡಿ ಮಠದ ಶ್ರೀ ಶ್ರೀ ವೀರಭದ್ರ ಚನ್ನಮಲ್ಲ ಸ್ವಾಮೀಜಿ ಮಾತನಾಡಿ, ವಿಧೇಯಕದಲ್ಲಿ ಮೇಲ್ನೋಟಕ್ಕೆ ಸಾಕಷ್ಟು ಕೊರತೆಗಳು ಕಂಡುಬಂದಿವೆ. ಮುಖ್ಯವಾಗಿ ಕನ್ನಡಿಗರನ್ನು ಪ್ರತಿನಿಧಿಸುವ ಯಾವುದೇ ಸಂಸ್ಥೆಗಳನ್ನು ಅನುಷ್ಠಾನ ಕಾರ್ಯ ವ್ಯವಸ್ಥೆಯಲ್ಲಿ ಸೇರಿಸಿಲ್ಲ. ನಿಶ್ಯಕ್ತ ಕಾಯಿದೆ ಆಗಬಾರದು, ಸಶಕ್ತ ಕಾಯಿದೆ ಆಗಬೇಕು ಎಂದರು.

ಮಾಜಿ ಕಾನೂನು ಸಚಿವ ಶ್ರೀ ಎಚ್.ಕೆ. ಪಾಟೀಲ್ ಅವರು ಮಾತನಾಡಿ, ಈ ವಿಧೇಯಕದ ಕುರಿತು ವ್ಯಾಪಕ ಚರ್ಚೆ ನಡೆಯಬೇಕು, ಯಾವುದೇ ಸರ್ಕಾರ ತನ್ನ ಅವಧಿಯ ಕೊನೆಯ ಭಾಗದಲ್ಲಿ ಕಾನೂನು ರೂಪಿಸುವ ಬದಲು, ಆರಂಭಿಕ ಹಂತದಲ್ಲೇ ವಿಧೇಯಕ ಮಂಡಿಸಿ ಕಾಯ್ದೆಯಾಗಿ ಅನುಷ್ಠಾನಗೊಳಿಸಬೇಕು ಎಂದರು.

ಹಿರಿಯ ಸಾಹಿತಿ ಡಾ. ಎಸ್.ಎಲ್. ಭೈರಪ್ಪ ಅವರು ಮಾತನಾಡಿ, ಪ್ರಸ್ತುತ ವಿಧೇಯಕವು ಅಧಿಕಾರಿಗಳ ಮೂಲಕ ಆಡಳಿತ ನಡೆಸಲು ಹೊರಟಿದೆ. ಇದು ಪರಿಣಾಮಕಾರಿಯಾಗುವುದು ಸಾಧ್ಯವಿಲ್ಲ. ಸ್ವಾಯತ್ತತೆ ಇರುವ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತು ಕಾರ್ಯವ್ಯವಸ್ಥೆಯಲ್ಲಿ ಇರಲೇಬೇಕು ಎಂದು ಹೇಳಿದರು.

ಮಾಜಿ ಅಡ್ವೋಕೇಟ್ ಜನರಲ್ ಶ್ರೀ ಆಶೋಕ ಹಾರನಹಳ್ಳಿ ಅವರು ಮಾತನಾಡಿ, ಈ ವಿಧೇಯಕವು ಅಸ್ತಿತ್ವದಲ್ಲಿರುವ ಅನೇಕ ಕಾನೂನುಗಳೊಂದಿಗೆ ಸಂಘರ್ಷವನ್ನು ಹೊಂದಿದ್ದು ಜಾರಿಗೊಳಿಸುವಾಗ ಈ ವಿಷಯ ತೊಡಕಾಗುತ್ತದೆ ಎಂದು ಎಚ್ಚರಿಸಿದರು. ಇದರಲ್ಲಿನ 'ಕನ್ನಡಿಗ' ಎನ್ನುವ ವ್ಯಾಖ್ಯಾನ ಸರಿಯಾಗಿಲ್ಲ. ರಾಜ್ಯಭಾಷಾ ಆಯೋಗ ಎನ್ನುವ ಸೂಚನೆ ಇದ್ದರೂ ಅದು ಕೇವಲ ಭಾಷಾಂತರಕ್ಕೆ ಸೀಮಿತವಾಗಿ ಅಸ್ಪಷ್ಟವಾಗಿದೆ. ಜಾರಿ ಮತ್ತು ನಿಯಂತ್ರಣ ಇವೆರಡರ ವ್ಯತ್ಯಾಸ ವಿಧೇಯಕದಲ್ಲಿ ಸ್ಪಷ್ಟವಾಗಿಲ್ಲ. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರನ್ನು ಸಮಿತಿಯಲ್ಲಿ ಸೇರಿಸಲು ಯಾವ ಕಾನೂನು ತೊಡಕೂ ಇಲ್ಲ. ಉದ್ಯೋಗ ಪೋರ್ಟಲ್ ಪ್ರಸ್ತಾಪ ವಿಧೇಯಕದಲ್ಲಿದ್ದು, ಅದರ ಉದ್ದೇಶ ಅಸ್ಪಷ್ಟವಾಗಿದೆ. ಹೀಗಾಗಿ ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ವಿಧೇಯಕವನ್ನು ಪರಿಷ್ಕರಿಸಬೇಕು ಎಂದರು.

ಕನ್ನಡಪರ ಹೋರಾಟಗಾರ, ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಶ್ರೀ ಸಾ.ರಾ. ಗೋವಿಂದು, ಕನ್ನಡ ಅನುಷ್ಠಾನಗೊಳಿಸಲು ಸರ್ಕಾರಕ್ಕೆ ಇಚ್ಛಾಶಕ್ತಿ ಬೇಕು, ಈ ವಿಧೇಯಕದಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಸೇರಿಸಿಕೊಳ್ಳಬೇಕು ಎಂದರು.

ಬನವಾಸಿ ಬಳಗದ ಶ್ರೀ ಆನಂದ ಅವರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತನ್ನು ಬಿಟ್ಟು ವಿಧೇಯಕ ಸಮಗ್ರವಾಗುವುದು ಸಾಧ್ಯವಿಲ್ಲ, ವಿಧೇಯಕದ ಪರಿಷ್ಕರಣೆಯಲ್ಲಿ ನಾವು ಸರ್ಕಾರಕ್ಕೆ ಸಲಹೆ ನೀಡಲು ಸಿದ್ಧ ಎಂದು ಹೇಳಿದರು.

ಜ್ಞಾನಪೀಠ ಪುರಸ್ಕೃತ ಸಾಹಿತಿ ಡಾ. ಚಂದ್ರಶೇಖರ ಕಂಬಾರ ಮಾತನಾಡಿ, ಕನ್ನಡ ಅನುಷ್ಠಾನ ಎಲ್ಲಿ ಹೇಗಿರಬೇಕು ಎಂಬುದರ ಬಗ್ಗೆ ಸ್ಪಷ್ಟ ನಿಲುವು ಪಡೆದುಕೊಳ್ಳುವ ಅಗತ್ಯವಿದೆ. ಕನ್ನಡ ಸಾಹಿತ್ಯ ಪರಿಷತ್ತು ಬಿಟ್ಟು ಸಮಗ್ರ ಭಾಷಾ ವಿಧೇಯಕವನ್ನು ರೂಪಿಸಿರುವುದು ತಿರುಕನ ಕನಸು ಕಂಡಂತಾಗಿದೆ ಎಂದರು.

ವಿಶ್ರಾಂತ ನ್ಯಾಯಮೂರ್ತಿ ಶ್ರೀ ಶಿವಲಿಂಗೇಗೌಡ ಅವರು ಮಾತನಾಡಿ, ವಿಧೇಯಕದ ಸಮಗ್ರ ಪರಿಷ್ಕರಣೆ ನಡೆಯಬೇಕು, ಇಚ್ಛಾಶಕ್ತಿಯ ಕೊರತೆ ನಿವಾರಿಸಿಕೊಂಡು ಪ್ರಬಲವಾದ ಕಾನೂನು ರಚನೆಯಾಗಬೇಕು ಎಂದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀ ಟಿ.ಎಸ್. ನಾಗಾಭರಣ ಅವರು ಮಾತನಾಡಿ, ಕನ್ನಡ ಭವಿಷ್ಯದ ಭಾಷೆಯಾಗಬೇಕು ಎನ್ನುವ ಆಶಯದೊಂದಿಗೆ ಒಂದು ವರ್ಷ ಮೂರು ತಿಂಗಳ ಅವಧಿಯಲ್ಲಿ ಪ್ರಾಧಿಕಾರವು ಶ್ರಮ ವಹಿಸಿ ಈ ವಿಧೇಯಕವನ್ನು ಸಿದ್ಧಪಡಿಸಿದ್ದು ಇದಕ್ಕೆ ಕಾನೂನು ಆಯೋಗ ಸಹ ಆರು ತಿಂಗಳ ಪರಿಶ್ರಮವನ್ನು ವಹಿಸಿದೆ. ಕಾನೂನನ್ನು ಯಾವಾಗಲೂ ಭಾವನಾತ್ಮಕವಾಗಿ ನೋಡಬಾರದು, ಬದಲಾಗಿ ಕಾನೂನಾತ್ಮಕವಾಗಿ ನೋಡಬೇಕು. ಭಾಷೆಗೆ ಸಂಬಂಧಿಸಿದಂತೆ ಸಂವಿಧಾನದಲ್ಲಿ ಇದುವರೆಗೂ ಕೇವಲ ಎರಡೇ ತಿದ್ದುಪಡಿಗಳು ನಡೆದಿದ್ದು ಇದು ಹಿಂದಿ ಭಾಷೆಗೆ ಅನುಕೂಲವಾಗುವಂತಿದೆ. ಶಿಕ್ಷಣದಂತೆ ಉದ್ಯೋಗ, ವ್ಯಾಪಾರ ಮತ್ತು ನ್ಯಾಯಾಲಯಗಳಲ್ಲಿ ಕೂಡ ಕನ್ನಡ ಸಮಗ್ರವಾಗಿ ಜಾರಿಗೆ ಬರಬೇಕು ಎನ್ನುವುದು ನಮ್ಮ ಸಂಕಲ್ಪ. ಈ ವಿಧೇಯಕಕ್ಕೆ ಸಮಗ್ರತೆ ತಂದು ಕೊಡುವ ಕೆಲಸ ಆಗಬೇಕಿದೆ ಎಂದು ಹೇಳಿದರು.

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨ ದೋಷಯುಕ್ತವಾಗಿದೆ ಎಂದು ಅಭಿಪ್ರಾಯಪಟ್ಟ ವಿಶ್ರಾಂತ ನ್ಯಾಯಮೂರ್ತಿ ಶ್ರೀ ಅರಳಿ ನಾಗರಾಜ್ ಅವರು, ಕನ್ನಡದ ಜಾರಿಗೆ 'ಪ್ರಾಮುಖ್ಯತೆ' ಎಂಬ ಪದ ವಿಧೇಯಕದಲ್ಲಿದ್ದು, ಅದು 'ಕಡ್ಡಾಯ' ಎಂದಾಗಬೇಕು. ನ್ಯಾಯಾಲಯದಲ್ಲಿ ಕನ್ನಡ ಬಳಕೆಯ ಪ್ರಸ್ತಾಪ ವಿಧೇಯಕದಲ್ಲಿದ್ದರೂ ಅದು ಕೇವಲ ಜಿಲ್ಲಾ ನ್ಯಾಯಾಲಯಗಳಿಗೆ ಸೀಮಿತವಾಗಿದೆ. ಅದನ್ನು ಉಚ್ಚ ನ್ಯಾಯಾಲಯಗಳಿಗೂ ವಿಸ್ತರಿಸಬೇಕಿದೆ. ಸಂವಿಧಾನದ ೩೪೮ನೇ ವಿಧಿಗೆ ತಿದ್ದುಪಡಿಯಾದರೆ ಮಾತ್ರವೇ ವಿಧೇಯಕ ಪರಿಣಾಮಕಾರಿಯಾಗಲು ಸಾಧ್ಯ. ಹೀಗಾಗಿ ರಾಜ್ಯ ಸರ್ಕಾರ ಮಾತ್ರವಲ್ಲದೆ ಕೇಂದ್ರ ಸರ್ಕಾರ ಕೂಡ ಈ ಕುರಿತು ಆಸಕ್ತಿ ವಹಿಸಬೇಕು ಎಂದು ಸೂಚಿಸಿದರು.

ಚಿಂತನಗೋಷ್ಠಿಯಲ್ಲಿ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಕಾರ್ಯದರ್ಶಿ ಶ್ರೀ ಸುಂದರರಾಜ್, ಐಟಿ ಹಾಗೂ ಸಮಾನ ಶಿಕ್ಷಣ ತಜ್ಞ ಪ್ರಕಾಶ್ ಹೆಬ್ಬಳ್ಳಿ, ಸಂಶೋಧಕ ಡಾ. ತಲಕಾಡು ಚಿಕ್ಕರಂಗೇಗೌಡ, ಸೇರಿದಂತೆ ಹಲವರು ಮಾತನಾಡಿದರು. ವಿಜಯವಾಣಿ ಕಾರ್ಯನಿರ್ವಾಹಕ ಸಂಪಾದಕರಾದ ಶ್ರೀ ಚನ್ನೇಗೌಡ, ವಿಸ್ತಾರ ಟಿವಿ ಪ್ರಧಾನ ಸಂಪಾದಕರಾದ ಶ್ರೀ ಹರಿಪ್ರಕಾಶ್ ಕೋಣೆಮನೆ, ವಿಜಯಕರ್ನಾಟಕ ಸಂಪಾದಕರಾದ ಸುದರ್ಶನ್ ಚೆನ್ನಂಗಿಹಳ್ಳಿ, ಹೊಸದಿಗಂತ ಸಮೂಹ ಸಂಪಾದಕರಾದ ವಿನಾಯಕ ಭಟ್ ಮೂರೂರು, ಕೋಲಾರವಾಣಿ ಸಂಪಾದಕರಾದ ಶ್ರೀ ಮುರಳಿಪ್ರಸಾದ್, ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಿ.ವಿ. ಗೋಪಾಲರೆಡ್ಡಿ, ಹೋಟೆಲ್ ಮಾಲಿಕರ ಸಂಘ ಅಧ್ಯಕ್ಷರಾದ ಶ್ರೀ ಪಿ.ಸಿ. ರಾವ್, ಮಾಲಿ ದೇಶದ ರಾಯಭಾರಿ ಶ್ರೀ ಎಚ್.ವಿ.ಎಸ್. ಕೃಷ್ಣ, ಚಲನಚಿತ್ರ ನಿರ್ದೇಶಕ ಶ್ರೀ ಎಸ್.ವಿ. ರಾಜೇಂದ್ರಸಿಂಗ್ ಬಾಬು, ಕನ್ನಡಪರ ಚಿಂತಕ ಶ್ರೀ ಹಾ.ವಿ. ಹರೀಶ್, ಹಲ್ಮಿಡಿ ಕೂಟದ ಶ್ರೀ ಜ್ಞಾನೇಶ್ವರ, ಕರವೇ ಪತ್ರಿಕಾ ಕಾರ್ಯದರ್ಶಿ ಶ್ರೀ ಗೋಮೂರ್ತಿ ಯಾದವ್, ಪ್ರಾಧ್ಯಾಪಕ ಪ್ರೊ. ಎ. ನಾರಾಯಣ್, ಕನ್ನಡ ಗಣಕ ಪರಿಷತ್ ಕಾರ್ಯದರ್ಶಿ ಶ್ರೀ ಜಿ.ಎಂ.ನರಸಿಂಹಮೂರ್ತಿ, ಬರಹಗಾರ ಪ್ರೊ. ಜಿ. ಅಶ್ವತ್ಥನಾರಾಯಣ ಮುಂತಾದವರು ಉಪಸ್ಥಿತರಿದ್ದರು.

ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ ನೇ.ಭ. ರಾಮಲಿಂಗಶೆಟ್ಟಿ, ಶ್ರೀ ಕೆ. ಮಹಾಲಿಂಗಯ್ಯ ಉಪಸ್ಥಿತರಿದ್ದರು. ಗೌರವ ಕೋಶಾಧ್ಯಕ್ಷರಾದ ಶ್ರೀ ಬಿ.ಎಂ. ಪಟೇಲ್‌ಪಾಂಡು ಕಾರ್ಯಕ್ರಮ ನಿರ್ವಹಿಸಿದರು.

**ಕನ್ನಡ ಭಾಷೆಯ ಅಭಿವೃದ್ಧಿಗಾಗಿ "ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ೨೦೨೩ರ ಫೆ. ೨೩ರಂದು ಕರ್ನಾಟಕ ವಿಧಾನಸಭೆಯಲ್ಲಿ ಅಂಗೀಕರಿಸಲಾಗಿದ್ದು ರಾಜ್ಯಪಾಲರ ಒಪ್ಪಿಗೆ ಪಡೆದು ಈ ಮೂಲಕ ಕಾನೂನಾಗಿ ಜಾರಿಗೊಂಡಿದೆ.**

# ಕನ್ನಡ ಸಾಹಿತ್ಯ ಪರಿಷತ್ತು ಕರ್ನಾಟಕ ಸರಕಾರಕ್ಕೆ ಗುರುವಾಗಿ ಕೆಲಸ ಮಾಡಬೇಕು: ಸಿಎಂ ಬಸವರಾಜ ಬೊಮ್ಮಾಯಿ




*ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರ ಹಾಗೂ ಆವರಣದ ನವೀಕೃತ ಕಟ್ಟಡಗಳನ್ನು ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು ಉದ್ಘಾಟಿಸಿದರು.*

**ಬೆಂಗಳೂರು:** ಕನ್ನಡ ಭಾಷೆಯ ಶ್ರೀಮಂತಿಕೆ ಅಪಾರವಾಗಿದೆ. ಕನ್ನಡ ಭಾಷೆಗೆ ಇರುವ ಇತಿಹಾಸ ಭಾರತದ ಬೇರೆ ಯಾವ ಭಾಷೆಗೂ ಇಲ್ಲ. ನಮ್ಮಲ್ಲಿ ಅತ್ಯಂತ ಶ್ರೀಮಂತ ಸಾಹಿತ್ಯವಿದೆ. ಕನ್ನಡದ ಶ್ರೀಮಂತ ಪರಂಪರೆಯನ್ನು ಕನ್ನಡ ಸಾಹಿತ್ಯ ಪರಿಷತ್ತು ಭವಿಷ್ಯಕ್ಕೆ ಕರೆದುಕೊಂಡು ಹೋಗುವ ಕೆಲಸ ಮಾಡಬೇಕಿದೆ. ಅದಕ್ಕಾಗಿ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ಪರಿಷತ್ತು ಕನ್ನಡ ನಾಡಿನ ಸಾಕ್ಷಿಪ್ರಜ್ಞೆಯಾಗಿ, ಕರ್ನಾಟಕ ಸರಕಾರಕ್ಕೆ ಗುರುವಾಗಿ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ೨೬.೦೮.೨೦೨೨ ರಂದು ಕನ್ನಡ ಸಾಹಿತ್ಯ ಪರಿಷತ್ತು ಏರ್ಪಡಿಸಿದ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರ ಹಾಗೂ ಆವರಣದ ನವೀಕೃತ ಕಟ್ಟಡಗಳ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಿದ್ದರು. ನಾವೆಲ್ಲರೂ ಕನ್ನಡಿಗರ ಏಳಿಗೆಗೆ ನಿರಂತರವಾಗಿ ಕೆಲಸ ಮಾಡಬೇಕು. ಕನ್ನಡ ಎನ್ನುವುದು ಅಭಿಮಾನ ಪ್ರದರ್ಶನದ ವಸ್ತುವಲ್ಲ, ಅದು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸೀಮಿತವಾಗದೆ ನಿತ್ಯ ನಿರಂತರವಾಗಬೇಕು. ಯುವಜನಾಂಗದ ಮನಸ್ಸನ್ನು ಅರ್ಥ ಮಾಡಿಕೊಂಡು ಅವರಲ್ಲಿ ಕನ್ನಡ ಪ್ರಜ್ಞೆ ಬೆಳೆಸಬೇಕು ಎಂದರು.

ಈಗಾಗಲೇ ಹೊಸ ಶಿಕ್ಷಣ ನೀತಿಯನ್ನು ಸರಕಾರ ಸಿದ್ಧಗೊಳಿಸಿದೆ. ಎಲ್ಲಾ ಹಂತಗಳಲ್ಲೂ ಕನ್ನಡವನ್ನು ಜಾರಿಗೆ ತರಲು ಅದರಲ್ಲಿ ಅವಕಾಶವಿದೆ. ಕನ್ನಡ ಮಾಧ್ಯಮದಲ್ಲೇ ಇಂಜಿನಿಯರಿಂಗ್ ಮತ್ತು ವೈದ್ಯಕೀಯ ಪದವಿ ಪಡೆಯಲು ಅವಕಾಶವಿದ್ದು, ಈ ಬಗ್ಗೆ ನಾವು ಪ್ರೋತ್ಸಾಹ ನೀಡಬೇಕು. ಅದರೊಂದಿಗೆ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ-೨೦೨೨ ಸಿದ್ಧವಾಗಿದ್ದು ಅದು ವಿಧಾನಮಂಡಲದಲ್ಲಿ ಚರ್ಚೆಯಾಗುವ ಮುನ್ನ ಸಾರ್ವಜನಿಕವಾಗಿ ಚರ್ಚೆಯಾಗಬೇಕು ಎಂದರು.

ಇದಕ್ಕೆ ಸ್ಪಂದಿಸಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು, ಸೆಪ್ಟೆಂಬರ್ ತಿಂಗಳಲ್ಲಿ ಈ ಕುರಿತು ಒಂದು ದಿನದ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸುವುದಾಗಿ ತಿಳಿಸಿದರು.

ನಾಡೋಜ ಡಾ. ಮಹೇಶ ಜೋಶಿ ಅವರು ತಮ್ಮ ಪ್ರಾಸ್ತಾವಿಕ ಭಾಷಣದಲ್ಲಿ ಮನವಿ ಮಾಡಿದ ಮೂರು ಬೇಡಿಕೆಗಳಾದ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕಕ್ಕೆ ಕಾನೂನು ರೂಪ, ಕನ್ನಡ ಸಾಹಿತ್ಯ ಪರಿಷತ್ತಿನ ಕಟ್ಟಡಗಳ ನಾನಾ ಅಭಿವೃದ್ಧಿ ಕಾಮಗಾರಿಗಳು, ನವೀಕರಣ ಕಾರ್ಯಕ್ಕೆ ೧೦ ಕೋಟಿ ರೂ. ಧನಸಹಾಯ,






ಚಾಮರಾಜಪೇಟೆಯ ಮಿಂಟೋ ವೃತ್ತದ ಬಳಿಯ ಪೊಲೀಸ್ ಠಾಣೆಯ ಎದುರಿನಿಂದ ಮಕ್ಕಳಕೂಟದವರೆಗಿನ ರಸ್ತೆಯನ್ನು ಕನ್ನಡ ಮಯ ರಸ್ತೆಯಾಗಿಸಬೇಕು ಎಂಬ ಬೇಡಿಕೆಗೆ ಮುಖ್ಯಮಂತ್ರಿಯವರು ಸಕಾರಾತ್ಮಕವಾಗಿ ಸ್ಪಂದಿಸಿದರು.

**ಗೋವಾ, ಸೊಲ್ಲಾಪುರ, ಕಾಸರಗೋಡಿನಲ್ಲಿ ಕನ್ನಡ ಭವನ:**

ಗಡಿನಾಡ ಕನ್ನಡಿಗರನ್ನು ಸರಕಾರ ಮರೆತಿಲ್ಲ. ಗೋವಾ, ಸೊಲ್ಲಾಪುರ, ಕಾಸರಗೋಡುಗಳಲ್ಲಿ "ಕನ್ನಡ ಭವನ" ಈ ವರ್ಷದಲ್ಲಿ ಸಿದ್ಧಪಡಿಸುತ್ತೇವೆ. ಎಲ್ಲಾ ಕನ್ನಡ ಶಾಲೆಗಳು ಉಳಿಯಲಿವೆ. ಅವುಗಳನ್ನು ಮುಚ್ಚುವ ಪ್ರಮೇಯ ಇಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು, ಕನ್ನಡ ಸಾಹಿತ್ಯ ಪರಿಷತ್ತಿನ ಪರಂಪರೆಯನ್ನು ಸ್ಮರಿಸಿ ಅದನ್ನು ಆಧುನಿಕ ಹಂತಕ್ಕೆ ಕರೆದುಕೊಂಡು ಹೋಗುವ ವಿಶ್ವಾಸ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿಸುವ ಹಿನ್ನೆಲೆಯಲ್ಲಿ ಕೋಟಿ ಸದಸ್ಯತ್ವ ಗುರಿಯನ್ನು ಮುಟ್ಟುವ ವಿಶ್ವಾಸ ವ್ಯಕ್ತಪಡಿಸಿದರು. ಆ ಮೂಲಕ ಪರಿಷತ್ತು ಸ್ವಾವಲಂಬಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಕಂದಾಯ ಸಚಿವ ಆರ್. ಅಶೋಕ್ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸುಂದರವಾದ ಸನ್ನಿವೇಶ ಹಾಗೂ ವ್ಯವಸ್ಥೆ ನಿರ್ಮಾಣ ಮಾಡಿದ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರನ್ನು ಅಭಿನಂದಿಸಿದರು.

ಕನ್ನಡದ ಹೋರಾಟಕ್ಕೆ ಕನ್ನಡ ಸಾಹಿತ್ಯ ಪರಿಷತ್ತು ಮುಂಚೂಣಿಯಲ್ಲಿ ನಿಲ್ಲಬೇಕು. ಚಾಮರಾಜಪೇಟೆಯ ಈದ್ಗಾ ಮೈದಾನ ಕಂದಾಯ ಇಲಾಖೆಯ ಆಸ್ತಿ ಎಂದು ನ್ಯಾಯಾಲಯ ತೀರ್ಪು ನೀಡಿದೆ. ಈ ಹಿನ್ನೆಲೆಯಲ್ಲಿ ಪ್ರಸ್ತುತ ಈದ್ಗಾ ಮೈದಾನದಲ್ಲಿ ಕನ್ನಡ ರಾಜ್ಯೋತ್ಸವ ಆಚರಿಸಲು ಸರಕಾರ ಬದ್ಧವಾಗಿದೆ ಎಂದು ಕಂದಾಯ ಸಚಿವ ಆರ್. ಅಶೋಕ್ ವಿಶ್ವಾಸ ನೀಡಿದರು.

ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ. ಚಂದ್ರಶೇಖರ ಕಂಬಾರರು ಮಾತನಾಡಿ, ಎಂದೆಂದೂ ಜನರ ಪರವಾಗಿ ಕನ್ನಡ ಸಾಹಿತ್ಯ ಪರಿಷತ್ತು ಕೆಲಸ ಮಾಡುತ್ತಿದೆ. ಭಾಷಾ ಹಿತರಕ್ಷಣೆಗಾಗಿ ಕೆಲಸ ಮಾಡುವಂತಹ ಸಂಸ್ಥೆ ಬೇರೆ ಯಾವ ರಾಜ್ಯದಲ್ಲೂ ಇಲ್ಲ. ಕಾಲಕಾಲಕ್ಕೆ ಕನ್ನಡ ಭಾಷೆ ಪ್ರತಿನಿತ್ಯ ಬೆಳವಣಿಗೆಯ ಕುರಿತು ಕನ್ನಡ ಸಾಹಿತ್ಯ ಪರಿಷತ್ತು ಪರಿಶೀಲಿಸಿ ಸರಕಾರಕ್ಕೆ ಸಲಹೆ ಸೂಚನೆ ನೀಡುತ್ತ ಬಂದಿದೆ, ಹೀಗಾಗಿ ಇದು ಅತ್ಯಂತ ವಿಶಿಷ್ಟವಾದ ಸಂಸ್ಥೆ ಎಂದು ಬಣ್ಣಿಸಿದರು.

ಹಿರಿಯ ಸಾಹಿತಿ ನಾಡೋಜ ಡಾ. ಕಮಲಾ ಹಂಪನಾ ಮಾತನಾಡಿ, ಕೋಟಿ ಸದಸ್ಯತ್ವದ ಕನಸು ನನಸಾಗಲಿ. ನಾಡಗೀತೆಯ ಬಗ್ಗೆ ಇರುವ ಗೊಂದಲ ನಿವಾರಣೆಯಾಗಬೇಕು. ಅನಂತಸ್ವಾಮಿ ಅವರ ರಾಗ ಸಂಯೋಜನೆ ಇಟ್ಟುಕೊಳ್ಳುವುದು ಸೂಕ್ತ. ರಾಷ್ಟ್ರಗೀತೆಯಂತೆ ನಾಡಗೀತೆಯನ್ನು ಒಂದು ನಿಮಿಷದೊಳಗೆ ಮುಕ್ತಾಯಗೊಳಿಸುವಂತೆ ಮೊದಲ ಹಾಗೂ ಕೊನೆಯ ಚರಣಗಳನ್ನು ಇಟ್ಟುಕೊಂಡು ಬಳಸುವಂತೆ ನಿರ್ಣಯ ತೆಗೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

೮೬ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನಿಯೋಜಿತ ಅಧ್ಯಕ್ಷ ಹಿರಿಯ ಸಾಹಿತಿ ಡಾ. ದೊಡ್ಡರಂಗೇಗೌಡ ಅವರು ಮಾತನಾಡಿ, ಕನ್ನಡಿಗರ ಬದುಕು ಸುಂದರವಾಗಲು ಸಾಂಸ್ಕೃತಿಕ ಕಾರ್ಯಕ್ರಮಗಳು ಸಾಕಷ್ಟು ನಡೆಯಬೇಕು. ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ನಿಲುವು ಇರಬೇಕು. ಅನೇಕ ಕನ್ನಡಿಗರು ತಮಗೂ ಕನ್ನಡ ಸಾಹಿತ್ಯ ಪರಿಷತ್ತಿಗೂ ಯಾವುದೇ ಸಂಬಂಧ ಇಲ್ಲ ಎನ್ನುವಂತೆ ವರ್ತಿಸುತ್ತಾರೆ. ಹಾಗೆ ಮಾಡಿದರೆ ಕನ್ನಡ ಭಾಷೆಗೆ ನಾವು ಮಾಡುವ ಅನ್ಯಾಯ. ಪರಿಷತ್ತು ಕೇವಲ ಸಾಹಿತಿಗಳ ಸೊತ್ತಲ್ಲ, ಅದು ಕೋಟಿ ಕನ್ನಡಿಗರ ಆಸ್ತಿ. ಪರಿಷತ್ತು ಹೇಗೆ ಕನ್ನಡಿಗರಿಗೆ ಸ್ಪಂದಿಸಬೇಕೋ ಕನ್ನಡಿಗರೂ ಸಹ ಪರಿಷತ್ತಿನೊಂದಿಗೆ ಸ್ಪಂದಿಸಬೇಕು ಎನ್ನುವ ಆಶಯ ವ್ಯಕ್ತಪಡಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ ನೇ.ಭ. ರಾಮಲಿಂಗಶೆಟ್ಟಿ ಸ್ವಾಗತಿಸಿದರು. ಶ್ರೀ ಕೆ.ಮಹಾಲಿಂಗಯ್ಯ ವಂದಿಸಿದರು. ಗೌರವ ಕೋಶಾಧ್ಯಕ್ಷರಾದ ಶ್ರೀ ಬಿ.ಎಂ. ಪಟೇಲ್‌ಪಾಂಡು ಕಾರ್ಯಕ್ರಮ ನಿರೂಪಿಸಿದರು.

# ಪರಿಷತ್ತಿನ ಆವರಣದಲ್ಲಿ ಕನ್ನಡ ತಾಯಿ ಭುವನೇಶ್ವರಿ ಪ್ರತಿಮೆ ಅನಾವರಣ



*ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನ ಆವರಣದಲ್ಲಿ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು 'ಕನ್ನಡ ತಾಯಿ ಭುವನೇಶ್ವರಿ'ಯ ಪ್ರತಿಮೆಯನ್ನು ಅನಾವರಣಗೊಳಿಸಿದರು.*

**ಬೆಂಗಳೂರು:** ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨ನ್ನು ಸರ್ವಕಾಲಕ್ಕೂ ಪರಿಣಾಮಕಾರಿಯಾಗಿ ಸಮ್ಮತವಾಗಿ ಕಾರ್ಯಗತವಾಗಬೇಕು. ಈ ಹಿನ್ನೆಲೆಯಲ್ಲಿ ವಿಧೇಯಕದ ಕುರಿತು ಸಮಗ್ರ ಚರ್ಚೆಯಾಗಲಿ ಎನ್ನುವ ಕಾರಣಕ್ಕೆ ಕಳೆದ ಅಧಿವೇಶನದಲ್ಲಿ ಮಂಡನೆ ಮಾಡಲಾಗಿದೆ. ಎಲ್ಲರ ಅಭಿಪ್ರಾಯಗಳನ್ನು ಗೌರವಪೂರ್ವಕವಾಗಿ ಸ್ವೀಕರಿಸಲಾಗುವುದು. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨ದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ ಬಹಳ ಮುಖ್ಯ. ವಿಧೇಯಕದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಒಳಗೊಳ್ಳಲಿದೆ. ಎಲ್ಲರ ಮನದಾಳದ ಭಾವನೆಯನ್ನು ಪಡೆದು, ನಮ್ಮ ಕಾಲಾವಧಿಯಲ್ಲಿಯೇ ಸಮಗ್ರ ಭಾಷಾ ಅಭಿವೃದ್ಧಿ ವಿಧೇಯಕ ಕಾನೂನು ಮಾಡುತ್ತೇವೆ ಎಂಬ ಭರವಸೆಯನ್ನು ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು ನೀಡಿದರು.

೧೭.೧೧.೨೦೨೨ರ ಸಂಜೆ ನಗರದ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನ ಆವರಣದಲ್ಲಿ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು 'ಕನ್ನಡ ತಾಯಿ ಭುವನೇಶ್ವರಿ'ಯ ಪ್ರತಿಮೆಯನ್ನು ಅನಾವರಣಗೊಳಿಸಿ ಮಾತನಾಡುತ್ತಿದ್ದರು. ಕನ್ನಡ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳೆಯಲು ವಿಜ್ಞಾನ ತಂತ್ರಜ್ಞಾನವನ್ನು ಬಳಸಿಕೊಂಡು ಶಕ್ತಿಯುತವಾಗಿ ಮುನ್ನುಗ್ಗಬೇಕು. ಹಿಂದಿನ ಸಾಧನೆ ಹಾಗೂ ಮುಂದಿನ ಯೋಜನೆಗಳನ್ನು ಕನ್ನಡದಲ್ಲಿ ಸಮಾಜಕ್ಕೆ ನೀಡುವ ಮೂಲಕ ಕನ್ನಡವನ್ನು ಅರ್ಥಪೂರ್ಣವಾಗಿ ಬೆಳೆಸಬೇಕು. ನಾಗರಿಕತೆ ಬೆಳೆದಂತೆ ನಮ್ಮ ಸಂಸ್ಕೃತಿ ಕಳೆದು ಹೋಗಬಾರದು. ಕನ್ನಡ ಸಂಸ್ಕೃತಿಯಲ್ಲಿ ಸಾಕಷ್ಟು ಶಕ್ತಿ ಇದೆ. ನಾಗರಿಕತೆಯೊಂದಿಗೆ ನಮ್ಮ ಸಂಸ್ಕೃತಿಯನ್ನೂ ಬೆಳೆಸಬೇಕು. ನಮ್ಮ ಹತ್ತಿರ ಇರುವುದು ನಾಗರಿಕತೆ, ಬೆಳೆಸಬೇಕಾಗಿರುವುದು ಸಂಸ್ಕೃತಿ ಎಂದು ಹೇಳಿದರು.

ತಾಯಿ ಭುವನೇಶ್ವರಿಯ ಆಶೀರ್ವಾದದಿಂದ ಕನ್ನಡ ನಾಡಿನಲ್ಲಿ ದೊಡ್ಡ ಸಾಮ್ರಾಜ್ಯವೇ ಬೆಳೆದು ನಿಂತಿದೆ. ಮುಂದೆಯೂ ತಾಯಿಯ ಆಶೀರ್ವಾದ ಕನ್ನಡ ಸಾಹಿತ್ಯ ಪರಿಷತ್ತಿನ ಎಲ್ಲ ಕೆಲಸಗಳಿಗೂ ಇರಲಿ. ಹಾವೇರಿಯಲ್ಲಿ ನಡೆಯಲಿರುವ ೮೬ನೇ ಸಾಹಿತ್ಯ ಸಮ್ಮೇಳನವನ್ನು ಅದ್ಭುತವಾಗಿ ಸಂಘಟಿಸಲಾಗುವುದು. ಇದು ಎಲ್ಲಾ ಕಾಲಕ್ಕೂ ಮಾದರಿಯಾಗುವಂತೆ ನಡೆಯಲಿದೆ ಎನ್ನುವುದು ನನ್ನ ವಿಶ್ವಾಸ ಎಂದು ಹೇಳಿದರು. ಶಾಂತಚಿತ್ತಳಾಗಿ ನಮ್ಮೆಲ್ಲರಿಗೂ ಜ್ಞಾನವನ್ನು ನೀಡುವ ಮೂಲಕ ನಮ್ಮ ಬದುಕನ್ನು ಕಟ್ಟಿಕೊಳ್ಳುವ ಅವಕಾಶ ಮಾಡಿಕೊಟ್ಟು, ಕನ್ನಡಕ್ಕೆ ಆತ್ಮವನ್ನು ಕೊಟ್ಟ ತಾಯಿ ಭುವನೇಶ್ವರಿಯ ಪ್ರತಿಮೆ ಸ್ಥಾಪನೆ ಆಗಿರಲಿಲ್ಲ ಎನ್ನುವುದೇ ಆಶ್ಚರ್ಯ ಹಾಗೂ ಬೇಸರದ ಸಂಗತಿಯಾಗಿದೆ. ಅದರೆ ಯಾವ ಕಾಲಕ್ಕೆ ಏನು ಆಗಬೇಕು ಅದು ಆಗೇ ಆಗುತ್ತದೆ. ನಾಡೋಜ ಡಾ. ಮಹೇಶ ಜೋಶಿ ಅವರ ಕಾಲದಲ್ಲಿ ತಾಯಿ ಭುವನೇಶ್ವರಿಯ ಪ್ರತಿಮೆ ಸ್ಥಾಪನೆಯಾಗಬೇಕು ಎನ್ನುವುದು ದೈವ ಸಂಕಲ್ಪವೇ ಸರಿ. ಕನ್ನಡ ಹರಿದು ಹಂಚಿ ಹೋದಾಗ ಕನ್ನಡವನ್ನು

ಒಟ್ಟುಗೂಡಿಸುವ ಹಿನ್ನೆಲೆಯಲ್ಲಿ ಚಳವಳಿ ಮಾಡಿ ಒಂದುಗೂಡಿಸದಿದ್ದರೆ ನಾವೆಲ್ಲಾ ಒಂದಾಗುತ್ತಿರಲಿಲ್ಲ. ಅಂಥವರನ್ನು ನಾವು ಗುರುತಿಸಬೇಕು, ನೆನೆಸಿಕೊಳ್ಳಬೇಕು. ನಮ್ಮ ಇತಿಹಾಸವನ್ನು ನಾವು ಅಭಿಮಾನ ಪೂರ್ವಕವಾಗಿ ಗುರುತಿಸಿದರೆ ಹೊರಗಿಂದ ಬಂದವರು ನಮ್ಮ ಸಂಸ್ಕೃತಿ ಭಾಷೆಯನ್ನು ಗೌರವಿಸುತ್ತಾರೆ.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನಾಡಿಗೊಂದು ಅಧಿದೇವತೆ, ಭಾಷೆಗೊಂದು ಸುಂದರ ಲಾಂಛನವನ್ನು ಹೊಂದಿರುವ ಅಪರೂಪದ ಭಾಷೆ ನಮ್ಮ ಕನ್ನಡ. "ಕನ್ನಡದ ಕುಲದೇವತೆ ಭುವನೇಶ್ವರಿ ತಾಯಿ"ಯನ್ನು ಮಡಿಲಿನಲ್ಲಿ ಇಟ್ಟುಕೊಂಡು, ಕನ್ನಡತನವನ್ನು ಎದೆಯ ಗುಂಡಿಯಲ್ಲಿ ತುಂಬಿಟ್ಟುಕೊಂಡು ಕನ್ನಡ ಸಾಮ್ರಾಜ್ಯ ಕಟ್ಟಿದೆ. "ಕನ್ನಡಿಗರ ಕಾಶಿ" ವಿಜಯನಗರ ಸಾಮ್ರಾಜ್ಯದ ಸ್ಥಾಪನೆಗೆ ಕಾರಣರಾದ ವಿದ್ಯಾರಣ್ಯರು ಕನ್ನಡಿಗರ ಸಾಮ್ರಾಜ್ಯ ಸ್ಥಾಪನೆಗೆ ಆಶೀರ್ವಾದ ಕೋರಿ ಭುವನೇಶ್ವರಿ ದೇವಿಯನ್ನು ಕುರಿತು ತಪಸ್ಸು ಮಾಡಿದರು ಎಂಬ ಚರಿತ್ರೆಯನ್ನು ನೆನಪಿಸಿದರು.

ಕನ್ನಡ ನಾಡಿನಲ್ಲಿ ಮೊಟ್ಟ ಮೊದಲ ಬಾರಿಗೆ ಕನ್ನಡ ತಾಯಿ ಭುವನೇಶ್ವರಿ ಪ್ರತಿಮೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಆವರಣದಲ್ಲಿ ಸ್ಥಾಪಿಸಿ, ಅನಾವರಣಗೊಳಿಸಿದ್ದು ಸಮಸ್ತ ಕನ್ನಡಿಗರ ಹೆಮ್ಮೆಗೆ ಕಾರಣವಾಗಿದೆ. ಈ ಪ್ರತಿಮೆಯು ೬.೨೫ ಅಡಿ ಎತ್ತರವಿದೆ. ಪ್ರಭಾವಳಿ, ಚತುರ್ಭುಜ, ಪದ್ಮಪೀಠಾಸೀನ, ಪಾಶಾಂಕುಶ, ಅಭಯವರದ ಮುದ್ರೆಯುಳ್ಳ, ಕನ್ನಡ ಧ್ವಜವನ್ನು ಬಲಗೈಯಲ್ಲಿ ಹಿಡಿದಿರುವ ಭುವನೇಶ್ವರಿಯ ಚಿತ್ತಾಕರ್ಷಕ ಪ್ರತಿಮೆ ಕನ್ನಡಿಗರಲ್ಲಿ ಭಕ್ತಿ-ಭಾವವನ್ನು ಉದ್ದೀಪನಗೊಳಿಸುತ್ತದೆ ಎಂದು ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

"ತಾಯಿ ಭುವನೇಶ್ವರಿದೇವಿ ರಥವನ್ನು ಏರಿಹಳು, ದಾರಿ ಬಿಡಿ ದಾರಿ ಬಿಡಿ; ಅಡ್ಡ ಬಾರದಿರಿ" ಎಂದು ಕನ್ನಡದ ಕಣ್ವ ಬಿ.ಎಂ. ಶ್ರೀಕಂಠಯ್ಯ ಅವರು ಹಾಡಿ ಹೊಗಳಿದ್ದರು. ಮೈಸೂರು ಅರಸರು ಭುವನೇಶ್ವರಿಯ ಆರಾಧಕರಾಗಿದ್ದರು, ಅವರ ಆಸ್ಥಾನ ವಿದ್ವಾಂಸರಾದ ಮುತ್ತಯ್ಯ ಭಾಗವತರ್ ಅವರು "ಭುವನೇಶ್ವರಿಯ ನೆನೆ ಮಾನಸವೇ, ಭವ ಬಂಧನಗಳ ಭೀತಿಯ ಬಿಡುವೆ" ಎಂಬ ಕೀರ್ತನೆ ರಚಿಸಿ ಹಾಡಿದ್ದರು. ಕನ್ನಡದ ಕುಲಪುರೋಹಿತರಾದ ಆಲೂರು ವೆಂಕಟರಾಯರು ಕರ್ನಾಟಕದ ಏಕೀಕರಣಕ್ಕಾಗಿ ಭುವನೇಶ್ವರಿ ತಾಯಿಯನ್ನು ಆರಾಧಿಸಿ, ಸ್ಫೂರ್ತಿ ಪಡೆದಿರುವ ಇತಿಹಾಸವನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಸ್ಮರಿಸಿದರು.

ಮುಖ್ಯ ಅತಿಥಿಗಳಾಗಿ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಶಿವರಾಜ ಪಾಟೀಲ್ ಮಾತನಾಡಿ, ಈ ದಿನ ಕನ್ನಡ ಸಾಹಿತ್ಯ ಪರಿಷತ್ತಿಗೆ ಐತಿಹಾಸಿಕ ದಿನ. ೧೦೮ ವರ್ಷಗಳ ಸಮಗ್ರ ಇತಿಹಾಸದಲ್ಲಿ ಇಂದು ಕನ್ನಡ ಸಾಹಿತ್ಯ ಪರಿಷತ್ತಿಗೆ ಮರೆಯಲಾಗದ ದಿನ. ಕನ್ನಡ ತಾಯಿ ಭುವನೇಶ್ವರಿ ಪ್ರತಿಮೆ ಅನಾವರಣ ಮಾಡಿದ್ದು ಕನ್ನಡಿಗರ ಹೆಮ್ಮೆಗೆ ಕಾರಣವಾಗಿದೆ. ಕನ್ನಡಿಗರು ನಾಡಿನ ಒಳಗೆ, ಹೊರಗೆ ಎಲ್ಲೇ ಇದ್ದರೂ, ಕನ್ನಡಿಗರು ಯಾವ ಧರ್ಮದವರಾಗಿರಲಿ ಯಾವುದೇ ಪಂಥದವರಾಗಿರಲಿ ಅವರಿಗೆ ತಾಯಿ ಭುವನೇಶ್ವರಿಯೇ ಕುಲದೇವತೆ. ಆಗಿನ ಕನ್ನಡ ಸಾಹಿತ್ಯ ಪರಿಷತ್ತಿಗೂ ಈಗಿನ ಸಾಹಿತ್ಯ ಪರಿಷತ್ತಿಗೂ ಅಜಾಗಜಾಂತರ ವ್ಯತ್ಯಾಸವಿದೆ. ಈಗ ಇಲ್ಲಿನ ವಾತಾವರಣವೇ ಕನ್ನಡಮಯವಾಗಿದೆ. ಇದಕ್ಕೆ ಕಾರಣ ನಾಡೋಜ ಡಾ. ಮಹೇಶ ಜೋಶಿ ಅವರ ಕನ್ನಡದ ಮೇಲಿನ ಅಭಿಮಾನವೇ ಕಾರಣ ಎಂದು ಅಭಿಮಾನ ವ್ಯಕ್ತಪಡಿಸಿದರು.

ಮುಖ್ಯ ಅತಿಥಿ 'ತರಂಗ' ವಾರಪತ್ರಿಕೆ ವ್ಯವಸ್ಥಾಪಕ ಸಂಪಾದಕರಾದ ಶ್ರೀಮತಿ ಸಂಧ್ಯಾ ಎಸ್. ಪೈ ಮಾತನಾಡಿ, ಕನ್ನಡ ಸೊಗಡಿನ ಭಾಷೆ. ಇಲ್ಲಿ ಧ್ವನಿಸಿದರೆ ಸಂಗೀತದಂತೆ ಇರುತ್ತದೆ. ಆದರೂ ಕನ್ನಡದಲ್ಲಿ ಮಾತನಾಡುವುದೇ ಕಡಿಮೆಯಾಗಿದೆ. ಮಕ್ಕಳಲ್ಲಿ ಕನ್ನಡ ಮಾತನಾಡದೆ ಇಂಗ್ಲಿಷ ಮಾತನಾಡಿದರೆ ಭವಿಷ್ಯ ಉಜ್ವಲವಾಗುತ್ತದೆ ಎನ್ನುವ ಭಾವನೆ ಪೋಷಕರಿಗೆ ಇದೆ. ಯಾರ ಭವಿಷ್ಯವನ್ನು ಯಾರೂ ಕಂಡಿಲ್ಲ ಎನ್ನುವ ಸತ್ಯ ಅರಿಯಬೇಕಾಗಿದೆ. ಕನ್ನಡ ಓದುವ, ಬರೆಯುವ ಹವ್ಯಾಸ ಕಮ್ಮಿಯಾಗುತ್ತಿದೆ. ಮಕ್ಕಳಿಗೆ ಕನ್ನಡ ಕಡ್ಡಾಯ ಮಾಡುವ ಬದಲಿಗೆ ಪಾಲಕರಲ್ಲಿ ಕನ್ನಡದ ಅಭಿಮಾನ ಹುಟ್ಟಿಕೊಳ್ಳಬೇಕು ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀಮತ್ ಸುತ್ತೂರು ವೀರ ಸಿಂಹಾಸನಾಧೀಶ್ವರ ಪರಮಪೂಜ್ಯ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ತಮ್ಮ ಆಶೀರ್ವಚನದಲ್ಲಿ ಮೈಸೂರಿನ ಒಡೆಯರು ಕನ್ನಡ ತಾಯಿ ಭುವನೇಶ್ವರಿಯನ್ನು ತಮ್ಮ ಅರಮನೆಯ ದಕ್ಷಿಣ ದ್ವಾರದಲ್ಲಿ ಸ್ಥಾಪನೆ ಮಾಡಿ ನಿತ್ಯ ಪೂಜೆ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ಭಾಷೆ ಬೆಳೆಯುವಾಗ ಅನ್ಯ ಭಾಷೆಗಳು ಕನ್ನಡದಲ್ಲಿ ಸೇರಿ ಸಮೀಕರಣಗೊಂಡಿವೆ. ಅದನ್ನು ಬಳಸುವುದು ತಪ್ಪು ಅಂತ ಅಲ್ಲ. ಆದರೆ ಕನ್ನಡ ಬೆಳೆಸಬೇಕು ಎಂದರೆ ಕನ್ನಡವನ್ನು ಓದಬೇಕು, ಬರೆಯಬೇಕು. ಕನ್ನಡವನ್ನು ಬೆಳೆಸುವ ಕೆಲಸ ಕನ್ನಡ ಸಾಹಿತ್ಯ ಪರಿಷತ್ತಿನದ್ದು ಮಾತ್ರವಲ್ಲ ಸಮಸ್ತ ಕನ್ನಡಿಗರ ಕೆಲಸವಾಗಿದೆ. ಇಂದಿನ ದಿನಗಳಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸಾಕಷ್ಟು ಉತ್ತಮ ಕಾರ್ಯಚಟುವಟಿಕೆಗಳನ್ನು ಹಾಕಿಕೊಂಡಿದೆ. ಪರಿಷತ್ತು ನಿರಂತರವಾಗಿ ಕೆಲಸ ಕಾರ್ಯಗಳನ್ನು ನಿರ್ವಹಿಸಲಿ ಅದಕ್ಕೆ ಕನ್ನಡ ತಾಯಿ ಭುವನೇಶ್ವರಿಯ ಆಶೀರ್ವಾದ ಇರಲಿ ಎಂದರು.

## ತಾಯಿ ಭುವನೇಶ್ವರಿ ಆಶೀರ್ವಾದ ಕಿಟೆಲ್‌ರಿಗೆ ಇತ್ತು

**ತಾಯಿ ಭುವನೇಶ್ವರಿ ಪ್ರತಿಮೆ ಅನಾವರಣದ ಹೆಮ್ಮೆಯ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗಲು ಕನ್ನಡದ ಮೊದಲ ನಿಘಂಟುಕಾರ ರೆವರೆಂಡ್ ಫರ್ಡಿನ್ಯಾಂಡ್ ಕಿಟೆಲ್' ಅವರ ಮರಿಮೊಮ್ಮಗಳಾದ ಶ್ರೀಮತಿ ಆಲ್ಮುತ್ ಕಿಟೆಲ್ ಅವರು ಹಾಗೂ ಕಿಟ್ಟೆಲ್ ಕುಟುಂಬ ಸ್ನೇಹಿತರಾದ ಶ್ರೀ ಯಾನ್ ಸ್ಟಾರ್ಮರ್ ಅವರು ಜರ್ಮನಿಯಿಂದ ಆಗಮಿಸಿದ್ದರು. ಶ್ರೀಮತಿ ಆಲ್ಮುತ್ ಕಿಟೆಲ್ ತಾಯಿ ಭುವನೇಶ್ವರಿಯ ಪ್ರತಿಮೆ ಕಂಡು ಭಾವೋದ್ವೇಗೊಳ್ಳುತ್ತ ಕನ್ನಡ ಭಾಷೆ ಗಟ್ಟಿಯಾಗಿರಲು ಕನ್ನಡ ತಾಯಿಯ ಕೃಪೆಯೇ ಕಾರಣ. ತಮ್ಮ ಕುಟುಂಬದ ಹಿರಿಯರಿಗೆ ಈ ತಾಯಿ ಭುವನೇಶ್ವರಿಯ ಆಶೀರ್ವಾದವಿತ್ತು ಎಂದು ಹೇಳಿದರು.**

## ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆದ ಕೆನಡಾ ಸಂಸದರ ಕುಟುಂಬ

# ಎಲ್ಲರನ್ನೂ ಒಂದುಗೂಡಿಸುವ ಶಕ್ತಿ ಭಾಷೆಗಿದೆ: ಚಂದ್ರ ಆರ್ಯ



*ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವವನ್ನು ಕನ್ನಡಿಗ, ಕೆನಡಾ ಸಂಸದ ಶ್ರೀ ಚಂದ್ರ ಆರ್ಯ ಅವರಿಗೆ ನೀಡಿದರು.*

**ಬೆಂಗಳೂರು:** "ಜಾತಿ, ಮತ, ಪಂಥ, ಧರ್ಮಗಳ ಕಟ್ಟುಗಳನ್ನು ಮೀರಿ ಏಕಸೂತ್ರದಲ್ಲಿ ಎಲ್ಲರನ್ನೂ ಒಂದು ಮಾಡುವ ಶಕ್ತಿ ಮಾತೃಭಾಷೆಗೆ ಇದೆ. ಈ ಭಾಷಾಬಂಧನಕ್ಕೆ ಪ್ರಪಂಚದಲ್ಲಿ ಎಲ್ಲರನ್ನೂ ಒಂದು ಮಾಡುವ ಶಕ್ತಿ ಇದೆ" ಎಂದು ಹೆಮ್ಮೆಯ ಕನ್ನಡಿಗ, ಕೆನಡಾ ಸಂಸದ ಶ್ರೀ ಚಂದ್ರ ಆರ್ಯ ಹೇಳಿದರು.

೧೩.೦೭.೨೦೨೨ರಂದು ಶ್ರೀ ಚಂದ್ರ ಆರ್ಯ ಅವರು ಕನ್ನಡ ಸಾಹಿತ್ಯ ಪರಿಷತ್ತಿಗೆ ಭೇಟಿ ನೀಡಿ, ಕನ್ನಡಿಗರ ಅಸ್ಮಿತೆಯ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆದುಕೊಂಡರು. ಅವರ ಜೊತೆ ಅವರ ಶ್ರೀಮತಿ ಸಂಗೀತಾ ಗಾಯತ್ರಿ, ಸಹೋದರ ಶ್ರೀನಿವಾಸ್ ಸಹ ಸದಸ್ಯತ್ವ ಪಡೆದುಕೊಂಡರು.

ಪಂಪ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಪರಿಷತ್ತಿನ ಕಾರ್ಯಚಟುವಟಿಕೆಗಳ ಕುರಿತು ಚಂದ್ರ ಆರ್ಯರಿಗೆ ಸಂಪೂರ್ಣ ಮಾಹಿತಿ ನೀಡಿದರು. ನಂತರ ಮಾತನಾಡಿದ ಚಂದ್ರ ಆರ್ಯ ಅವರು, "ಕನ್ನಡ ಸಾಹಿತ್ಯ ಪರಿಷತ್ತು ಕೆಲ ಚಟುವಟಿಕೆಗಳಿಗೆ, ಕೆಲವರಿಗೆ ಮಾತ್ರ ಸೀಮಿತವಾಗದೆ ಎಲ್ಲ ಕನ್ನಡಿಗರನ್ನೂ ಒಳಗೊಳ್ಳುತ್ತಿರುವುದು ಸಂತಸದ ಸಂಗತಿ. ಇತ್ತೀಚಿನ ದಿನಗಳಲ್ಲಿ ನಾಡೋಜ ಡಾ. ಮಹೇಶ ಜೋಶಿ ಅವರ ನೇತೃತ್ವದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಕನ್ನಡ ಜನಸಾಮಾನ್ಯರ ಪರಿಷತ್ತಾಗುತ್ತಿದೆ. ಇಲ್ಲಿ ನಡೆಯುತ್ತಿರುವ ಎಲ್ಲಾ ಕಾರ್ಯಚಟುವಟಿಕೆಗಳು **ಕನ್ನಡ–ಕನ್ನಡಿಗ–ಕರ್ನಾಟಕ**ವನ್ನು ಗಟ್ಟಿಗೊಳಿಸುವಂಥದ್ದು" ಎಂದರು.

"ನನ್ನ ತಂದೆಯವರು ತಮ್ಮ ಸರಕಾರಿ ಸೇವೆಯಲ್ಲಿರುವಾಗ ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ರೂಪಿಸುವಲ್ಲಿ ಕಾರ್ಯಯೋಜನೆಯನ್ನು ಕೈಗೊಂಡಿದ್ದರು" ಎಂಬುದನ್ನು ಅವರು ಈ ಸಂದರ್ಭದಲ್ಲಿ ನೆನಪಿಸಿಕೊಂಡರು.

"ಕೆನಡಾದಲ್ಲಿರುವ ಕನ್ನಡಿಗರನ್ನು ಒಟ್ಟುಗೂಡಿಸಿ ಪರಿಷತ್ತಿನ ಘಟಕವನ್ನು ರಚಿಸಿ ಅದನ್ನು ಮುನ್ನಡೆಸುವ ಮಹತ್ವದ ಜವಾಬ್ದಾರಿಯನ್ನು ನಾಡೋಜ ಡಾ. ಮಹೇಶ ಜೋಶಿ ಅವರು ನೀಡಿದ್ದಾರೆ. ಅದನ್ನು ನಾನು ನನ್ನ ಕರ್ತವ್ಯ ಎಂದು ನಿಭಾಯಿಸುತ್ತೇನೆ" ಎಂಬ ಭರವಸೆಯನ್ನು ಚಂದ್ರ ಆರ್ಯ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಮಾತನಾಡಿ, ಕೆನಡಾ ಸಂಸತ್ತಿನಲ್ಲಿ ಕನ್ನಡ ಮಾತನಾಡುವ ಮೂಲಕ ಎಲ್ಲರ ಮನಸ್ಸು ಗೆದ್ದ ಚಂದ್ರ ಆರ್ಯ ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆದುಕೊಂಡಿರುವುದು ಹಾಗೂ ಕೆನಡಾದಲ್ಲಿ ಪರಿಷತ್ತಿನ ಘಟಕದ ಮುಂದಾಳತ್ವವನ್ನು ತೆಗೆದುಕೊಂಡಿರುವುದು ಶ್ಲಾಘನೀಯ. ಹಾವೇರಿಯಲ್ಲಿ ನಡೆಯಲಿರುವ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಖ್ಯ ಅಥಿತಿಗಳಾಗಿ ಭಾಗವಹಿಸುವುದಕ್ಕೆ ಒಪ್ಪಿಗೆ ನೀಡಿದ್ದಾರೆ. ಹೆಮ್ಮೆಯ ಕನ್ನಡಿಗ ಚಂದ್ರ ಆರ್ಯ ಅವರ ಕನ್ನಡದ ಅಸ್ಮಿತೆಗೆ ಪರಿಷತ್ತು ಹೆಮ್ಮೆ ವ್ಯಕ್ತ ಪಡಿಸುತ್ತಿದೆ ಎಂದು ಹೇಳಿದರು.

ಪರಿಷತ್ತಿನ ಸಿಬ್ಬಂದಿಗಳೊಂದಿಗೆ ಸಂವಾದ ನಡೆಸಿದ ಚಂದ್ರ ಆರ್ಯ ಅವರು ಕನ್ನಡಕ್ಕಾಗಿ ಕೆಲಸ ಮಾಡುತ್ತಿರುವ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶ್ರೀ ನೇ.ಭ. ರಾಮಲಿಂಗಶೆಟ್ಟಿ, ಗೌರವ ಕೋಶಾಧ್ಯಕ್ಷ ಶ್ರೀ ಬಿ.ಎಂ. ಪಟೇಲ್ ಪಾಂಡು, ಕನ್ನಡಪರ ಹೋರಾಟಗಾರ ಸತೀಶ ಗೌಡ ಅವರು ಉಪಸ್ಥಿತರಿದ್ದರು.

# ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಶಸ್ತಿ ಪಡೆಯಲು ಅರ್ಜಿಯೂ ಬೇಡ, ಮರ್ಜಿಯೂ ಬೇಡ: ನಾಡೋಜ ಡಾ. ಮಹೇಶ ಜೋಶಿ



**ಬೆಂಗಳೂರು:** ಕನ್ನಡ ಸಾಹಿತ್ಯ ಪರಿಷತ್ತಿನ ಮೇಲೆ ಜನರ ಸಂಪೂರ್ಣ ವಿಶ್ವಾಸ ನಂಬಿಕೆ ಇದೆ ಎನ್ನುವುದಕ್ಕೆ ಸಾಕ್ಷಿ ಪರಿಷತ್ತಿನಲ್ಲಿ ಬರೋಬ್ಬರಿ ೨೧೦೦ ದತ್ತಿ ಪ್ರಶಸ್ತಿಗಳನ್ನು ಇಟ್ಟಿರುತ್ತಾರೆ. ರಾಜ್ಯದ ಬೇರೆ ಯಾವ ಸಂಸ್ಥೆಗಳಲ್ಲಿಯೂ ಇಷ್ಟೊಂದು ದತ್ತಿಗಳನ್ನು ಇಟ್ಟಿರುವುದಿಲ್ಲ. ಇದು ಮುಖ್ಯವಾಗಿ ಪರಿಷತ್ತಿನ ವಿಶ್ವಾಸಾರ್ಹತೆ ಎತ್ತಿತೋರಿಸುತ್ತದೆ. ಗಮನಿಸ ಬೇಕಾದ ಸಂಗತಿ ಎಂದರೆ ಇಲ್ಲಿ ಪ್ರಶಸ್ತಿಗಳನ್ನು ಪಡೆಯುವುದಕ್ಕೆ ಯಾರೂ ಅರ್ಜಿ ಹಾಕುವುದಿಲ್ಲ, ಯಾರ ಮರ್ಜಿಯನ್ನೂ ಕಾಯುವುದಿಲ್ಲ, ಸಾಧಕರನ್ನು ಗುರುತಿಸುತ್ತದೆಯೇ ಹೊರತು ಸಮಯ ಸಾಧಕರನ್ನಲ್ಲ ಎಂದು ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯಪಟ್ಟರು.

ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಹಮ್ಮಿಕೊಂಡ 'ಚಾವುಂಡರಾಯ ದತ್ತಿ', 'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ' ಹಾಗೂ 'ಕನ್ನಡ ಕಾಯಕ ದತ್ತಿ' ಪ್ರಶಸ್ತಿ ಪ್ರದಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. 'ಕನ್ನಡದ ಕಣ್ವ' ಎಂದು ಕರೆಸಿಕೊಂಡ ಬಿ.ಎಂ.ಶ್ರೀ. ಅವರು ೧೯೩೫ರಲ್ಲಿ ಗಮಕ ಕಲೆಯ ಪ್ರೋತ್ಸಾಹಕ್ಕಾಗಿ ಒಂದು ಸಾವಿರ ರೂ.ಗಳೊಂದಿಗೆ ಮೊದಲನೆಯ ದತ್ತಿಗೆ ಭದ್ರವಾದ ಅಡಿಪಾಯ ಹಾಕಿದರು. ಬಿ.ಎಮ್.ಟಿ.ಸಿ ಸಂಸ್ಥೆಯವರು 'ನೃಪತುಂಗ ಸಾಹಿತ್ಯ ಪ್ರಶಸ್ತಿ' ಹಾಗೂ 'ಮಯೂರ ವರ್ಮ ಪ್ರಶಸ್ತಿ'ಗಾಗಿ ಅತಿ ಹೆಚ್ಚು ೧ ಕೋಟಿ ೫೦ ಲಕ್ಷ ರೂ ದತ್ತಿ ಹಣವನ್ನು ಇಟ್ಟಿರುತ್ತಾರೆ. ವರನಟ ಡಾ. ರಾಜಕುಮಾರ್ ಅವರು ತಮಗೆ ಬಂದ ಫಾಲ್ಕೆ ಪ್ರಶಸ್ತಿಯ ಮೂಲಕ ಬಂದ ಹಣವನ್ನು ನೇರವಾಗಿ ಪರಿಷತ್ತಿಗೆ ಬಂದು ದತ್ತಿ ಇಟ್ಟಿರುವುದನ್ನು ನಾಡೋಜ ಡಾ. ಮಹೇಶ ಜೋಶಿ ನೆನೆಪಿಸಿಕೊಂಡರು.

ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದ ಹಿರಿಯ ವಿದ್ವಾಂಸರಾದ ನಾಡೋಜ ಡಾ. ಹಂಪ ನಾಗರಾಜಯ್ಯ, ಕನ್ನಡ ಸಾಹಿತ್ಯ ಪರಿಷತ್ತನ್ನು ಅತ್ಯಂತ ಹತ್ತಿರದಿಂದ ನೋಡುತ್ತಾ ಬಂದಿರುವ ನನಗೆ ಪರಿಷತ್ತಿನಲ್ಲಿ ಆಗುತ್ತಿರುವ ಇತ್ತೀಚಿನ ಬದಲಾವಣೆಯ ಬಗ್ಗೆ ಅತೀವ ಸಂತೋಷವಾಗುತ್ತಿದೆ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿಗಳು ಹಾಗೂ ವಿಶ್ರಾಂತ ಲೋಕಾಯುಕ್ತರು ಆಗಿರುವ ನ್ಯಾಯಮೂರ್ತಿ ಶ್ರೀ ಸಂತೋಷ ಹೆಗ್ಡೆ ಅವರು ಮಾತನಾಡಿ, ಒಳ್ಳೆಯ ಕೆಲಸ ಮಾಡಿದವರಿಗೆ ಸನ್ಮಾನಿಸಿದಾಗ ಹುಮ್ಮಸ್ಸು ಬರುತ್ತದೆ, ಹಾಗೆಯೇ ಮುಂದೆ ಸಾಧನೆ ಮಾಡಿದರೆ ಸಮಾಜ ನಮ್ಮನ್ನು ಗುರುತಿಸುವುದು ಎನ್ನುವ ವಿಶ್ವಾಸ ಉಂಟಾಗುತ್ತದೆ. ಸಮಾಜದಲ್ಲಿ ಅನ್ಯಾಯಗಳು ಆಗುತ್ತಿರುವುದಕ್ಕೆ ವ್ಯಕ್ತಿಗಳು ಕಾರಣವಲ್ಲ, ಬದಲಾಗಿ ಈ ಸಮಾಜವೇ ಕಾರಣ. ಅಂತಸ್ತಿನ ಕನಸು ಕಾಣುವುದು ತಪ್ಪಲ್ಲ, ಅದಕ್ಕೆ ಬೇರೆಯವರ ಜೇಬಿಗೆ ಕೈ ಹಾಕಿ ಅಂತಸ್ತು ಕಟ್ಟಿಕೊಳ್ಳುವುದು ಸರಿಯಲ್ಲ. ಒಳ್ಳೆಯ ಕೆಲಸ ಮಾಡಿದವರಿಗೆ ಬೆಲೆ ಇಲ್ಲವೇ ಎನ್ನುವ ಆತಂಕ ಮೂಡುವ ಸಮಾಜದಲ್ಲಿ ನಾವು ಇದ್ದೇವೆ. ಶಾಂತಿ ಸೌಹಾರ್ದ ಇರಬೇಕು ಎಂದಾದರೆ ಸಮಾಜ ಬದಲಾಗಬೇಕು ಎಂದರು.

ಕನ್ನಡ ಕಾಯಕ ದತ್ತಿ ಪುರಸ್ಕೃತರಾದ ಸೊಲ್ಲಾಪುರ ಜಿಲ್ಲೆಯ ಅಕ್ಕಲಕೋಟೆ ತಾಲೂಕಿನ ಪೀಠಾಧ್ಯಕ್ಷರಾದ ಪರಮಪೂಜ್ಯ ಶ್ರೀಮನ್ ನಿರಂಜನ ಪ್ರಣವಸ್ವರೂಪಿ ಬಸವಲಿಂಗ ಮಹಾಸ್ವಾಮಿಗಳು ಮಾತನಾಡಿ, ಗಡಿಯಲ್ಲಿ ಕನ್ನಡವನ್ನು ಉಳಿಸಿ ಬೆಳೆಸುವ ಪ್ರತಿಜ್ಞೆ ಮಾಡಿ ಈ ಪ್ರಶಸ್ತಿ ಪಡೆದುಕೊಂಡಿದ್ದೇನೆ ಎಂದರು.

ಚಾವುಂಡರಾಯ ದತ್ತಿ ಪ್ರಶಸ್ತಿಯನ್ನು ಹಿರಿಯ ವಿದ್ವಾಂಸರಾದ ಶ್ರೀ ಶಾಂತಿನಾಥ ದಿಬ್ಬದ ಅವರಿಗೆ, 'ನಾಗಡಿಕೆರೆ ಕಿಟ್ಟಪ್ಪಗೌಡ ರುಕ್ಮಿಣಿ ತೀರ್ಥಹಳ್ಳಿ ದತ್ತಿ' ಪ್ರಶಸ್ತಿಯನ್ನು ವಿಜಯವಾಣಿ ದಿನಪತ್ರಿಕೆಯ ಸಂಪಾದಕರಾದ ಶ್ರೀ ಕೆ.ಎನ್. ಚನ್ನೇಗೌಡ ಅವರಿಗೆ, 'ಕನ್ನಡ ಕಾಯಕ ದತ್ತಿ' ಪ್ರಶಸ್ತಿಯನ್ನು ಕೋಲಾರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಶಂಕರಪ್ಪ ಅವರಿಗೆ ಮತ್ತು ಕೊಪ್ಪಳದ ರಂಗನಿರ್ದೇಶಕರು ಹಾಗೂ ರಂಗಭೂಮಿ ಕಲಾವಿದರಾದ ಶ್ರೀ. ಕೆ. ಇಮಾಮಸಾಬ ಅವರಿಗೆ ದತ್ತಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಚಾವುಂಡರಾಯ ದತ್ತಿ ಪ್ರಶಸ್ತಿಯ ದಾನಿಗಳಾದ ಶ್ರವಣಬೆಳಗೊಳದ ಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮಿಜಿಗಳು ಕಳಿಸಿದ ಸಂದೇಶವನ್ನು ಶ್ರೀ ಮುರುಳೀಧರ ವಾಚಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶ್ರೀ ನೇ.ಭ. ರಾಮಲಿಂಗ ಶೆಟ್ಟಿ ಅವರು ಸ್ವಾಗತಿಸಿದರು. ಗೌರವ ಕೋಶಾಧ್ಯಕ್ಷರಾದ ಶ್ರೀ ಬಿ.ಎಂ. ಪಟೇಲ್‌ಪಾಂಡು ಅವರು ಕಾರ್ಯಕ್ರಮ ನಿರೂಪಣೆ ಮಾಡಿದರು.

# ಆಂತರಿಕ ಕಣ್ಣುಳ್ಳ ದಿವ್ಯಾಂಗ ಚೇತನರಿಗೆ ಬಾಹ್ಯ ಕಣ್ಣು ಕಾಣುವಂತೆ ಮಾಡಬೇಕಿದೆ: ನಾಡೋಜ ಡಾ. ಮಹೇಶ ಜೋಶಿ




**ಬೆಂಗಳೂರು:** ಮನುಷ್ಯ ಸಾವಿನಲ್ಲಿಯೂ ಬೇರೆಯವರಿಗೆ ಉಪಕಾರಿಯಾಗಬೇಕು. ಸಾವು ಎನ್ನುವುದು ಪರಿಪೂರ್ಣವಾಗಬೇಕಾದರೆ ನಮ್ಮ ಅಂತ್ಯ ಬೇರೆಯವರಿಗೆ ಆರಂಭಕ್ಕೆ ಕಾರಣವಾಗಬೇಕು. ದೃಷ್ಟಿ ವಿಕಲ ಚೇತನ ಎನ್ನುವ ಪಿಡುಗನ್ನು ಇಲ್ಲದಂತೆ ಮಾಡಬಹುದು. ಅದಕ್ಕೆ ನಾವು ಕಣ್ಣು ದಾನ ಮಾಡುವ ಮೂಲಕ ಸಮಾಜಕ್ಕೆ ಮಾದರಿಯಾಗಬೇಕಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯ ಪಟ್ಟರು.

೧೬.೦೭.೨೦೨೨ರಂದು ಕನ್ನಡ ಸಾಹಿತ್ಯ ಪರಿಷತ್ತು, ಅಖಿಲ ಕರ್ನಾಟಕ ಮಕ್ಕಳ ಕೂಟ, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಇಂದು ಶನಿವಾರ ಕನ್ನಡ ಸಾಹಿತ್ಯ ಪರಿಷತ್ತಿನ ಕುವೆಂಪು ಸಭಾಂಗಣದಲ್ಲಿ ಹಮ್ಮಿಕೊಂಡ ಡಾ॥ ಹೆಚ್. ವಿಶ್ವನಾಥ ಮತ್ತು ಶ್ರೀಮತಿ ಎಂ.ಎಸ್. ಇಂದಿರಾ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ೨೦೨೨ನೆಯ ಸಾಲಿನ ಡಾ॥ ಹೆಚ್. ವಿಶ್ವನಾಥ ಮತ್ತು ಶ್ರೀಮತಿ ಎಂ.ಎಸ್. ಇಂದಿರಾ ದತ್ತಿ ಪ್ರಶಸ್ತಿಯನ್ನು ದೃಷ್ಟಿ ವಿಕಲಚೇತನ ಸಾಹಿತಿ ಶ್ರೀ ರಮೇಶ್ ಮುದಿಗೆರೆ ಅವರಿಗೆ ಪ್ರದಾನ ಮಾಡಲಾಯಿತು.

ಜಗತ್ತಿನಲ್ಲಿ ಅತಿ ಹೆಚ್ಚು ದೃಷ್ಟಿವಿಕಲಾಂಗ ಚೇತನರನ್ನು ಹೊಂದಿರುವ ದೇಶ ನಮ್ಮದು. ನಮ್ಮ ದೇಶದಲ್ಲಿ ೧೦೦೦ ಶಿಶುಗಳ ಜನನವಾದರೆ ಅವರ ಪೈಕಿ ೯ ಶಿಶುಗಳು ದೃಷ್ಟಿ ಹೀನತೆಗೆ ಒಳಗಾಗಿರುತ್ತಾರೆ. ಪ್ರತಿ ವರ್ಷ ೩೦ ಲಕ್ಷ ಜನರು ದೇಹವನ್ನು ಬಿಡ್ತಾರೆ. ಇವರಲ್ಲಿ ಶೇ ೧ರಷ್ಟು ಜನ ನೇತ್ರ ದಾನ ಮಾಡಿದರೆ ನಮ್ಮ ದೇಶದಲ್ಲಿ ಅಂಧತ್ವ ನಿವಾರಣೆ ಮಾಡಬಹುದು. ಬಾಹ್ಯ ಕಣ್ಣುಗಳು ಕೆಲವರಿಗಿದ್ದರೆ ಆಂತರಿಕ ಕಣ್ಣುಗಳು ಎಲ್ಲರಿಗೂ ಇರುತ್ತವೆ. ಆಂತರಿಕ ಕಣ್ಣುಗಳಿದ್ದವರಿಗೂ ಬಾಹ್ಯ ಕಣ್ಣು ಕಾಣುವಂತೆ ಮಾಡಬೇಕಾದ ಕೆಲಸ ಆಗಬೇಕಿದೆ. ಕನ್ನಡ ಸಾಹಿತ್ಯ ಪರಿಷತ್ತು ಮುಂದಿನ ದಿನಗಳಲ್ಲಿ ಯಾವುದೇ ದಿವ್ಯಾಂಗ ಚೇತನರಿದ್ದರೂ ಅಂಥವರ ಮನೆಗೆ ತೆರಳಿ ಗೌರವ ಪೂರ್ವಕವಾಗಿ ಯಾವುದೇ ಶುಲ್ಕ ಪಡೆಯದೆ ಸದಸ್ಯತ್ವ ನೀಡಲಿದೆ. ದಿವ್ಯಾಂಗಚೇತನರಿಗೆ ಸಮ ಗೌರವ ನೀಡುವ ಕೆಲಸವನ್ನು ಪರಿಷತ್ತು ಮಾಡಲಿದೆ ಎಂದು ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಭಾಗವಹಿಸಿದ ವಿಸ್ತಾರ ನ್ಯೂಸ್ ಮುಖ್ಯ ಸಂಪಾದಕರಾದ ಶ್ರೀ ಹರಿಪ್ರಕಾಶ್ ಕೋಣೆಮನೆ ಅವರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ತನ್ನ ರಚನಾತ್ಮಕ ಕಾರ್ಯಗಳಿಂದ ಜನರ ಹತ್ತಿರಕ್ಕೆ ಹೋಗುತ್ತಿದೆ. ಮುಂದಿನ ದಿನಗಳಲ್ಲಿ ಪರಿಷತ್ತು ಜನ ಸಾಮಾನ್ಯರ ಪರಿಷತ್ತು ಆಗುವ ನಿಟ್ಟಿನಲ್ಲಿ ಮುನ್ನಡೆಯುತ್ತಿದೆ. ಈ ಸಂದರ್ಭದಲ್ಲಿ ಅಂಗವೈಕಲ್ಯ ಇರುವವರಿಗೆ ಗೌರವ ನೀಡುವ ಮೂಲಕ ಕನ್ನಡದ ಸೇವೆಯಲ್ಲಿ ತೊಡಗಿಕೊಂಡಿದೆ ಎಂದರು.

ರಾಜ್ಯ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ನಿರ್ದೇಶಕರಾದ ಶ್ರೀಮತಿ ಲತಾಕುಮಾರಿ ಮಾತನಾಡಿ, ಪ್ರತಿಯೊಬ್ಬರಲ್ಲಿಯೂ ಒಂದಿಲ್ಲೊಂದು ನ್ಯೂನತೆಗಳು ಇದ್ದೇ ಇದೆ. ಆದರೆ ತಮ್ಮ ಅಂತಃಶಕ್ತಿಯಿಂದ ಎಲ್ಲವನ್ನೂ ಮೆಟ್ಟಿ ನಿಲ್ಲುವ ಸಂಕಲ್ಪ ಮಾಡಬೇಕಿದೆ. ಆ ಮೂಲಕ ನಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ. ಕನ್ನಡ ಸಾಹಿತ್ಯ ಪರಿಷತ್ತು ದಿವ್ಯಾಂಗ ಚೇತನ ಸಮುದಾಯದ ಬಗ್ಗೆ ಇರುವ ಕಾಳಜಿಗೆ ರಾಜ್ಯ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಭಿನಂದಿಸುತ್ತದೆ ಎಂದರು.

ಡಾ॥ ಹೆಚ್. ವಿಶ್ವನಾಥ ಮತ್ತು ಶ್ರೀಮತಿ ಎಂ.ಎಸ್. ಇಂದಿರಾ ದತ್ತಿ ಪ್ರಶಸ್ತಿ ಪುರಸ್ಕೃತ ದೃಷ್ಟಿ ದಿವ್ಯಾಂಗ ಚೇತನ ಸಾಹಿತಿ ಶ್ರೀ ರಮೇಶ್ ಮುದಿಗೆರೆ ಮಾತನಾಡಿ, ಪರಿಷತ್ತಿನ ಕೆಲಸಗಳು ಹೆಮ್ಮೆ ತರುವಂತಹದ್ದು. ನಮ್ಮ ನಾಡಿನಲ್ಲಿ ಸರಿ ಸುಮಾರು ೨೦ಕ್ಕೂ ಹೆಚ್ಚು ದೃಷ್ಟಿ ವಿಕಲಚೇತನ ಸಾಹಿತಿಗಳು ಇದ್ದಾರೆ. ಅಂತವರನ್ನು ಸಾಹಿತ್ಯ ಪರಿಷತ್ತು ಗುರುತಿಸುವ ಕಾರ್ಯವಾಗಬೇಕಿದೆ. ಅದು ಮುಂದಿನ ದಿನಗಳಲ್ಲಿ ಆಗಲಿದೆ ಎನ್ನುವ ಭರವಸೆ ಇದೆ ಎಂದರು.

'ಅಖಿಲ ಕರ್ನಾಟಕ ಮಕ್ಕಳ ಕೂಟ'ದ ಅಧ್ಯಕ್ಷರಾದ ಶ್ರೀ ಕೆ. ಮೋಹನ್‌ದೇವ್ ಆಳ್ವ ಮಾತನಾಡಿ, ಹುಟ್ಟು ಅಂಧರಿಗೆ ದೇಹದ ತುಂಬಾ ಕಣ್ಣುಗಳಿರುತ್ತದೆ. ಆ ಮೂಲಕ ಸಮಾಜಕ್ಕೆ ಅವರು ವಿವಿಧ ಕ್ಷೇತ್ರಗಳಲ್ಲಿ ಕೊಡುಗೆಗಳನ್ನು ಕೊಡುತ್ತಿದ್ದಾರೆ. ಅದಕ್ಕೆ ಕಾರಣ ಅವರಿಗೆ ದೇವರು ಜಾಗೃತ ಶಕ್ತಿ ಕೊಟ್ಟಿರುತ್ತಾರೆ. ವಿಕಲಚೇತನರಿಗೆ ಕರುಣೆಯ ಅಗತ್ಯವಿಲ್ಲ ಬದಲಿಗೆ ಅವಕಾಶಗಳನ್ನು ನೀಡಬೇಕಿದೆ ಎಂದರು.

ದತ್ತಿ ದಾನಿಗಳಾದ ಡಾ. ಹೆಚ್. ವಿಶ್ವನಾಥ ಅವರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿಗೆ ನಾನೂ ಏನಾದರೂ ಕೊಡುಗೆ ಕೊಡಬೇಕು ಎಂಬ ಹಿನ್ನೆಲೆಯಲ್ಲಿ ಚಿಂತನೆ ಮಾಡಿದಾಗ ದತ್ತಿ ನೀಡುವ ಮೂಲಕ ಕನ್ನಡ ಸಾಹಿತ್ಯ ಲೋಕಕ್ಕೆ ಅಳಿಲು ಸೇವೆ ಮಾಡಬೇಕು ಎನ್ನುವ ನಿರ್ಧಾರಕ್ಕೆ ಬಂದೆ. ಅದರಲ್ಲಿಯೂ ದೃಷ್ಟಿ ದಿವ್ಯಾಂಗ ಚೇತನ ಸಾಹಿತಿಗಳಿಗೆ ಪ್ರೋತ್ಸಾಹ ನೀಡುವುದಕ್ಕೆ ಮುಂದಾದೆ, ಅದಕ್ಕೆ ಪರಿಷತ್ತು ಗೌರವ ಪೂರ್ವಕ ಸ್ಪಂದನೆ ನೀಡಿ ಯೋಗ್ಯರಿಗೆ ಪ್ರಶಸ್ತಿ ಪ್ರದಾನ ಮಾಡುತ್ತಿದೆ ಎಂದರು.

ರಮಣ ಮಹರ್ಷಿ ಅಂಧರ ಅಕಾಡೆಮಿಯ ಸಂಸ್ಥಾಪಕರಾದ ಶ್ರೀ ಟಿ.ವಿ. ಶ್ರೀನಿವಾಸನ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವಕೋಶಾಧ್ಯಕ್ಷ ಶ್ರೀ ಬಿ.ಎಂ.ಪಟೇಲ್‌ಪಾಂಡು ಅವರು ಸ್ವಾಗತಿಸಿದರು. ಶ್ರೀ ನೇ.ಭ.ರಾಮಲಿಂಗಶೆಟ್ಟಿ ಅವರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕ ಉದ್ಘಾಟನೆ




*ದೆಹಲಿ ಕರ್ನಾಟಕ ಸಂಘದ ವಿಚಾರಸಂಕಿರಣ ಸಭಾಂಗಣದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕದ ಪದಾಧಿಕಾರಿಗಳಿಗೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು ಕನ್ನಡದ ಧ್ವಜ ಹಸ್ತಾಂತರಿಸಿದರು.*

**ದೆಹಲಿ:** ಕರ್ನಾಟಕದಲ್ಲಿ ಶೇ.೬೪ರಷ್ಟು ಜನ ಮಾತ್ರ ಕನ್ನಡದಲ್ಲಿ ಮಾತನಾಡುತ್ತಿದ್ದಾರೆ. ಕನ್ನಡ ಶಾಲೆಗಳು ತೀರ ದುಸ್ಥಿತಿಯಲ್ಲಿವೆ. ಹಾಗಾಗಿ ಪ್ರತಿಯೊಬ್ಬ ಕನ್ನಡಿಗರೂ ಕನ್ನಡದ ರಾಯಭಾರಿಗಳಾಗಿ ಕನ್ನಡವನ್ನು ಉಳಿಸಿ ಬೆಳೆಸಬೇಕು. ಇಲ್ಲದಿದ್ದರೆ ಮುಂದಿನ ಹತ್ತು ವರ್ಷಗಳಲ್ಲಿ ಕನ್ನಡ ಶಾಲೆ ಮತ್ತು ಕನ್ನಡ ಸಾಹಿತ್ಯ ಪರಿಷತ್ತು ಯಾವುದು ಉಳಿಯುವುದಿಲ್ಲ. ಇಂತಹ ಪರಿಸ್ಥಿತಿಯನ್ನು ಎದುರಿಸಲು ಕರ್ನಾಟಕ ಕಾನೂನು ಆಯೋಗ ಸಮಗ್ರ ಕನ್ನಡ ಅಭಿವೃದ್ಧಿಗಾಗಿ ಕಾನೂನನ್ನು ಜಾರಿಗೆ ತರುವ ಚಿಂತನೆ ನಡೆಸುತ್ತಿದೆ. ಇದನ್ನು ಮುಂಬರುವ ಅಧಿವೇಶನದಲ್ಲಿ ಕಾನೂನನ್ನಾಗಿ ರೂಪುಗೊಳಿಸುವಂತೆ ಕ್ರಮ ಕೈಗೊಳ್ಳುವಂತೆ ಮಾಡಲು ಭಗೀರಥ ಪ್ರಯತ್ನವನ್ನು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಮಾಡಲಾಗುತ್ತಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಅವರು ೦೮.೦೭.೨೦೨೨ರಂದು ದೆಹಲಿ ಕರ್ನಾಟಕ ಸಂಘದ ವಿಚಾರಸಂಕಿರಣ ಸಭಾಂಗಣದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. "ಜನನಿ ಜನ್ಮ ಭೂಮಿಶ್ಚ ಸ್ವರ್ಗಾದಪಿ ಗರೀಯಸಿ" ಎಂಬ ರಾಮಾಯಣ ಮಹಾಕಾವ್ಯದಲ್ಲಿನ ವಾಕ್ಯವನ್ನು ಉಲ್ಲೇಖಿಸಿ ತಾಯಿ ಮತ್ತು ತಾಯ್ನೆಲ ಸ್ವರ್ಗಕ್ಕಿಂತಲು ಮಿಗಿಲು ಎಂದು ತಿಳಿಸುತ್ತಾ, ಕನ್ನಡ, ಕನ್ನಡಿಗ ಮತ್ತು ಕರ್ನಾಟಕದ ಬಗ್ಗೆ ಕಾಳಜಿ ವಹಿಸುವ ಮೂಲಕ ಕನ್ನಡಿಗರ ನೋವು ನಲಿವುಗಳಿಗೆ ಸಾಹಿತ್ಯ ಪರಿಷತ್ತು ಸ್ಪಂದಿಸುವ ಕೆಲಸವನ್ನು ಮಾಡುತ್ತಿದೆ.

ಕನ್ನಡ ಸಾಹಿತ್ಯ ಪರಿಷತ್ತನ್ನು ಸಾಹಿತಿಗಳಿಗೆ ಮಾತ್ರ ಸೀಮಿತವಾಗುವಂತೆ ಮಾಡದೆ, ಕನ್ನಡ ಭಾಷೆ ಸಾಹಿತ್ಯದ ಬಗ್ಗೆ ಕಾಳಜಿ ಇರುವ ಎಲ್ಲ ಕನ್ನಡಿಗರ ಮನೆ ಬಾಗಿಲಿಗೆ ಕೊಂಡೊಯ್ದು ಕನ್ನಡ ಸಾಹಿತ್ಯ ಪರಿಷತ್ತಿಗೆ ಕೋಟಿ ಸದಸ್ಯರನ್ನು ನೋಂದಣಿ ಮಾಡಿಸಬೇಕೆಂಬ ಮಹತ್ವದ ಗುರಿ ನಮ್ಮದಾಗಿದೆ. ಪ್ರತಿಯೊಬ್ಬ ಕನ್ನಡಿಗರು ಸೇರಿ ತಾಯಿ ಕನ್ನಡಾಂಬೆಯ ತೇರನ್ನು ಎಳೆಯುತ್ತ ಕನ್ನಡ ನಾಡು ನುಡಿ, ಭಾಷೆ ಸಂಸ್ಕೃತಿಯ ಬಗ್ಗೆ ದೇಶದ ಮೂಲೆ ಮೂಲೆಗೂ ಪರಿಚಯಿಸುವ ಕೆಲಸದಲ್ಲಿ ಸಾಹಿತ್ಯ ಪರಿಷತ್ತಿನ ಜೊತೆ ಕೈ ಜೋಡಿಸಬೇಕು ಎಂದು ಕರೆ ನೀಡಿದರು.

ಇದಕ್ಕಾಗಿ ನಮ್ಮ ಜೊತೆ ಹೆಜ್ಜೆ ಹಾಕುವ ಎಲ್ಲ ಕನ್ನಡಿಗರಿಗೂ ಕನ್ನಡ ಸಾಹಿತ್ಯ ಪರಿಷತ್ತು ಎಲ್ಲಾ ರೀತಿಯ ಸಹಕಾರವನ್ನು ನೀಡುತ್ತದೆ ಎಂದರು. ಕನ್ನಡದ ಉಚ್ಚಾರಣೆ ಮತ್ತು ಬರಹ ಎರಡಲ್ಲೂ ಸಾಮ್ಯತೆ ಇರುವ ಜಗತ್ತಿನ ಮೂರು ಭಾಷೆಗಳಲ್ಲಿ ಕನ್ನಡವೂ ಒಂದು. ಉಳಿದೆರಡು ಸಂಸ್ಕೃತ ಮತ್ತು ಗ್ರೀಕ್ ಭಾಷೆಗಳು. ಹಾಗಾಗಿ ಕನ್ನಡ ಜಗತ್ತಿನಲ್ಲಿಯೇ

ಕರಾರುವಾಕ್ಕಾದ ಭಾಷೆಯಾಗಿದೆ ಎನ್ನುವುದು ಹೆಮ್ಮೆಯ ವಿಷಯ ಎಂದು ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ದೆಹಲಿ ಘಟಕದ ಉದ್ಘಾಟನೆಯ ಸಂದರ್ಭದಲ್ಲಿ ಬಹಳ ಮಕ್ಕಳು, ಮಹಿಳೆಯರು ಕನ್ನಡ ಪದ್ಯಗಳನ್ನು ಹಾಡುವ, ವಾಚಿಸುವ ಮೂಲಕ ನೀಡಿದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೋಡಿ ನನಗೆ ಬಹಳ ಸಂತೋಷವಾಗಿದೆ. ಅಲ್ಲದೆ ಮಕ್ಕಳಿಗೆ ಮನೆಯಲ್ಲಿ ತಾಯಂದಿರೇ ಹೆಚ್ಚು ಸಮಯ ನೀಡಿ ಕಲಿಸುತ್ತಾರೆ. ಮಹಿಳೆಯರು ಮುಂದೆ ಬಂದು ಇಲ್ಲಿ ಕಾರ್ಯಕ್ರಮಗಳನ್ನು ನೀಡಿರುವುದರಿಂದ ಕನ್ನಡ ಭಾಷೆ ಉಳಿದು ಬೆಳೆಯುವುದರಲ್ಲಿ ನನಗೆ ಯಾವುದೇ ಸಂದೇಹ ಇಲ್ಲ. ಇದು ನಮ್ಮ ನೂತನ ಘಟಕದ ಆರಂಭದ ಶುಭ ಸಂಕೇತ ಎಂದು ಅಭಿಪ್ರಾಯಪಟ್ಟರು.

ಸಮಾರಂಭದಲ್ಲಿ ನೂತನ ಘಟಕದ ಅಧ್ಯಕ್ಷರಾದ ಸಿ.ಎಂ. ನಾಗರಾಜ, ಗೌರವ ಕಾರ್ಯದರ್ಶಿ ಶ್ರೀ ಚಂದ್ರಶೇಖರ ಎನ್.ಪಿ. ಹಾಗೂ ಗೌರವ ಕೋಶಾಧ್ಯಕ್ಷ ಶ್ರೀ ಸಂತೋಷ್ ಜೆ. ಅವರಿಗೆ ಆದೇಶ ಪತ್ರ ನೀಡಿದರು. ನಂತರ ಅಧ್ಯಕ್ಷರಾದ ಸಿ.ಎಂ. ನಾಗರಾಜ ಅವರಿಗೆ ಕನ್ನಡ ಬಾವುಟ ನೀಡಿ ದೆಹಲಿ ಕನ್ನಡ ಸಾಹಿತ್ಯ ಪರಿಷತ್ ಘಟಕದ ಅಧಿಕೃತ ಘೋಷಣೆ ಮಾಡಿ ದೆಹಲಿ ಘಟಕದ ಪದಾಧಿಕಾರಿಗಳಿಗೆ ಕನ್ನಡದ ಕೆಲಸವನ್ನು ಮಾಡಲು ದೊಡ್ಡ ಜವಾಬ್ದಾರಿ ನೀಡಲಾಗಿದ್ದು ಕನ್ನಡ ಕಟ್ಟುವ ಕೆಲಸವನ್ನು ಶ್ರದ್ಧೆ ಆಸಕ್ತಿ ವಹಿಸಿ ಮಾಡಬೇಕೆಂದು ಸಲಹೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಗೌರವ ಕಾರ್ಯದರ್ಶಿ ಚಂದ್ರಶೇಖರ್ ಅವರು ನಿಮ್ಮ ನಿರೀಕ್ಷೆ ಹುಸಿಯಾಗದ ರೀತಿಯಲ್ಲಿ ನಾವು ಕನ್ನಡ ಸಾಹಿತ್ಯ ಪರಿಷತ್ತಿನ ಕೆಲಸಗಳನ್ನು ಕನ್ನಡ ಸೇವೆ ಎಂದು ತಿಳಿದು ಶ್ರದ್ಧೆ, ನಿಷ್ಠೆಯಿಂದ ಕೆಲಸ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕವನ್ನು ದೀಪ ಬೆಳಗುವ ಮೂಲಕ ಉದ್ಘಾಟನೆ ಮಾಡಿದ ದೆಹಲಿ ಸರ್ಕಾರದ ಲೋಕೋಪಯೋಗಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯಾಗಿರುವ ಹಿರಿಯ ಐಎಎಸ್ ಅಧಿಕಾರಿ ಹೆಚ್. ರಾಜೇಶ್ ಪ್ರಸಾದ್ ಅವರು ಮಾತನಾಡಿ, ೧೯೧೫ರಲ್ಲಿ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರಿಂದ ಪ್ರಾರಂಭವಾದ ಕನ್ನಡ ಸಾಹಿತ್ಯ ಪರಿಷತ್ತು ೧೦೭ ವರ್ಷಗಳ ನಂತರ ದೆಹಲಿಯಲ್ಲಿ ತನ್ನ ಘಟಕ ತೆರೆಯುತ್ತಿದೆ. ಇಷ್ಟು ತಡವಾದರೂ ಸಹ ಇಂದು ರಾಷ್ಟ್ರ ರಾಜಧಾನಿಯಲ್ಲಿ ನಾಡೋಜ ಡಾ. ಮಹೇಶ ಜೋಶಿ ಅವರ ಪ್ರಯತ್ನದೊಂದಿಗೆ ನೆರವೇರಿದೆ. ಈ ಶುಭ ಸಂದರ್ಭದಲ್ಲಿ ಭಾಗಿಯಾಗಿರುವುದು ನನಗೆ ಹೆಮ್ಮೆ ಎನಿಸುತ್ತಿದೆ ಎಂದು ನುಡಿದರು. ಶತಮಾನದ ಹಿಂದೆ ಸಾಹಿತ್ಯ ಪರಿಷತ್ತು ಆರಂಭವಾದ ಕ್ಷಣದ ಸಂಭ್ರಮವನ್ನೇ ಇಂದು ದೆಹಲಿಯಲ್ಲೂ ನಾವು ನೀವೆಲ್ಲ ಅನುಭವಿಸುತ್ತಿದ್ದೇವೆ, ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕಕ್ಕೆ ಚಾಲನೆ ಸಿಕ್ಕಿರುವ ಈ ಶುಭ ಸಂಜೆ ಸುವರ್ಣ ಅಕ್ಷರದಲ್ಲಿ ಬರೆದಿಡಬೇಕಾದ ಐತಿಹಾಸಿಕ ಕ್ಷಣ. ದೆಹಲಿಯಲ್ಲಿರುವ ನಾವು ಇತರೆ ದಕ್ಷಿಣ ಭಾರತೀಯರಂತೆ ನಮ್ಮ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು ಹಾಗೂ ಕನ್ನಡವನ್ನು ಹೆಚ್ಚು ಹೆಚ್ಚು ಬಳಸಿ ಕನ್ನಡ ಸಂಸ್ಕೃತಿ, ಕಲೆಗಳನ್ನು ಇನ್ನಷ್ಟು ಚೆನ್ನಾಗಿ ಪ್ರಚಾರ, ಪ್ರಸಾರಗೊಳಿಸಲು ಮುಂದಾಗಲು ಐಎಎಸ್ ಅಧಿಕಾರಿ ಹೆಚ್. ರಾಜೇಶ್ ಪ್ರಸಾದ್ ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ವಿದೇಶಾಂಗ ಇಲಾಖೆಯಲ್ಲಿ ಜಂಟಿ ಕಾರ್ಯದರ್ಶಿಯಾಗಿರುವ ಐಎಫ್ಎಸ್ ಅಧಿಕಾರಿ ಮಂಜುನಾಥ್ ಅವರು ಕಾರ್ಯಕ್ರಮದಲ್ಲಿ ಪುಟ್ಟ ಬಾಲಕಿ ನೂತನ್ ಕೈಕಾಡೆ ವಾಚನ ಮಾಡಿದ ಕವಿ ಸಿದ್ಧಯ್ಯ ಪುರಾಣಿಕರ 'ಏನಾದರೂ ಆಗು ಮೊದಲು ಮಾನವನಾಗು' ಎಂಬ ಕವಿತೆಯನ್ನು ತಮ್ಮ ತಾಯಿಯವರು ಬಾಲ್ಯದಲ್ಲಿ ಕಲಿಸಿದ್ದುದು, ಜೊತೆಗೆ ಅವರು ಕಲಿಸಿದ್ದ 'ಪುಣ್ಯಕೋಟಿ' ಹಾಡನ್ನು ಸ್ಮರಿಸಿಕೊಂಡು ತಾಯ್ನುಡಿಯ ಹೃದಯಂಗಮ ಬೆಸುಗೆಯನ್ನು ಮೆಲುಕು ಹಾಕಿದರು.

ಮತ್ತೊಬ್ಬ ಅತಿಥಿ ವಿದೇಶಾಂಗ ಇಲಾಖೆಯಲ್ಲಿ ಅಧೀನ ಕಾರ್ಯದರ್ಶಿಯಾಗಿರುವ ಡಾ. ನಿಖಿಲ್ ಅವರು ಮಾತನಾಡಿ, ಇಂತಹ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿಯನ್ನು ಹೊರನಾಡಿನಲ್ಲಿ ಪ್ರತಿಬಿಂಬಿಸುವ ವೇದಿಕೆಯಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕ ಹೊರಹೊಮ್ಮಲಿ ಎಂದು ಶುಭ ಕೋರಿದರು.

ಸರ್ಕಾರದ ವಿಶೇಷ ಕರ್ತವ್ಯಾಧಿಕಾರಿ (ಕರೋನಾ ಲಸಿಕೆ) ಶ್ರೀ ವೈಶಾಖ್ ನಾಗ್ ಅವರು ಮಾತನಾಡಿ, ಕನ್ನಡ ಭಾಷೆ ಮತ್ತು ಸಾಹಿತ್ಯದ ಬಗ್ಗೆ ಆಸಕ್ತಿ ಅಭಿರುಚಿ ಬೆಳೆಸಿಕೊಂಡು ಇವತ್ತಿನ ಯುವ ಪೀಳಿಗೆಗೆ ಕನ್ನಡವನ್ನು ಉಳಿಸಿ ಬೆಳೆಸಿಕೊಂಡು ಹೋಗಬೇಕಾದ ಗುರುತರ ಕಾರ್ಯವನ್ನು ಮಾಡುವಲ್ಲಿ ಈಗ ತಾನೇ ಮೊಳಕೆಯೊಡೆದಿರುವ ಕನ್ನಡ ಸಾಹಿತ್ಯ ಪರಿಷತ್ ನ ದೆಹಲಿ ಘಟಕ ಹೆಮ್ಮರವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮಕ್ಕೆ ಆಗಮಿಸಿದ್ದ ಅತಿಥಿ ಗಣ್ಯರು ಹಾಗೂ ಸಭಿಕರನ್ನು ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿಯ ನೂತನ ಘಟಕದ ಅಧ್ಯಕ್ಷರಾದ ಶ್ರೀ ಸಿ.ಎಂ. ನಾಗರಾಜ ಅವರು ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿ ದೆಹಲಿಯಲ್ಲಿ ಕರ್ನಾಟಕ ಸಂಘದ ಮೂಲಕ ಈಗಾಗಲೇ ಮಾಡಿಕೊಂಡು ಬರುತ್ತಿರುವ ಕನ್ನಡದ ಕೆಲಸಗಳಿಗೆ ಇನ್ನಷ್ಟು ಬಲ ಬಂದಂತಾಗಿದ್ದು ಇದಕ್ಕೆ ಕಾರಣಕರ್ತರಾದ ನಾಡೋಜ ಡಾ. ಮಹೇಶ ಜೋಷಿ ಅವರು ನಿಜಕ್ಕೂ ಒಬ್ಬ ದೂರದೃಷ್ಟಿಯುಳ್ಳ ನಾಯಕ ಎಂದು ಅವರು ತೆಗೆದುಕೊಂಡ ಈ ಐತಿಹಾಸಿಕ ನಿರ್ಧಾರವನ್ನು ಶ್ಲಾಘಿಸಿದರು.

ದೆಹಲಿಯ ಕನ್ನಡತಿಯರಾದ ಶ್ರೀಮತಿ ಪೂಜಾರಾವ್, ಶ್ರೀಮತಿ ಮಾಲಿನಿ ಪ್ರಹ್ಲಾದ್, ಶ್ರೀಮತಿ ಶೋಭಾ ನಾಗರಾಜ್, ಶ್ರೀಮತಿ ಹೇಮಶ್ರೀ ಚಂದ್ರಶೇಖರ್, ಶ್ರೀಮತಿ ರೂಪಶ್ರೀ ನರಸಿಂಹ ಮೂರ್ತಿ, ಶ್ರೀಮತಿ ನೇತ್ರಾಕುಮಾರ್ ಮತ್ತು ಶ್ರೀಮತಿ ಲೀಲಾ ದೇವರಾಜ್ ಅವರು ಕನ್ನಡ ನಾಡಗೀತೆಗಳನ್ನು ಪ್ರಸ್ತುತ ಪಡಿಸಿದರು. ಕಾರ್ಯಕ್ರಮದಲ್ಲಿ ಗೌರವ ಕೋಶಾಧ್ಯಕ್ಷರಾದ ಶ್ರೀ ಸಂತೋಷ್ ಜೆ ವಂದನಾರ್ಪಣೆ ಮಾಡಿದರು. ಕನ್ನಡ ಸಾಹಿತ್ಯ ಪರಿಷತ್ತಿನ ದೆಹಲಿ ಘಟಕದ ಉದ್ಘಾಟನೆಯಂತಹ ಅಮೃತ ಘಳಿಗೆಗೆ ದೆಹಲಿಯ ಕನ್ನಡದ ಹಿರಿಯರು, ಅಧಿಕಾರಿಗಳು ಹಾಗೂ ಮಹಿಳೆಯರು ಮಕ್ಕಳು ಸೇರಿದಂತೆ ನೂರಾರು ಕನ್ನಡಾಭಿಮಾನಿಗಳು ಸಾಕ್ಷಿಯಾದರು.

# ಕನ್ನಡ ಸಾಹಿತ್ಯ ಪರಿಷತ್ತಿನ ನಿಬಂಧನೆಗಳಿಗೆ ಚಾರಿತ್ರಿಕ ತಿದ್ದುಪಡಿ



ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ನಾಡು–ನುಡಿ, ಜಲ, ಸಾಹಿತ್ಯ, ಕಲೆ, ಸಂಸ್ಕೃತಿ ಇವುಗಳ ರಕ್ಷಣೆಗೆ ಮತ್ತು ಅಭಿವೃದ್ಧಿಗೆ ಬದ್ಧವಾದ ಏಕೈಕ ಸಂಸ್ಥೆ. ಈ ಕಾರಣದಿಂದಲೇ ಇದು ಕನ್ನಡಿಗರ ಮಾತೃ ಸಂಸ್ಥೆ ಎನ್ನಿಸಿಕೊಂಡಿದೆ. ೧೯೧೫ರಂದು ಅಂದಿನ ಮೈಸೂರಿನ ಮಹಾರಾಜರಾಗಿದ್ದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ ದೂರದೃಷ್ಟಿಯಿಂದ ಸ್ಥಾಪಿತವಾದ ಇದು ಸರ್ ಎಂ. ವಿಶ್ವೇಶ್ವರಯ್ಯ ಮತ್ತು ಸರ್ ಮಿರ್ಜಾ ಇಸ್ಮಾಯಿಲ್ ಅವರ ಬೆಂಬಲದೊಂದಿಗೆ ಅಗಾಧವಾಗಿ ಬೆಳೆಯಿತು. ಈ ಸಂಸ್ಥೆ ೩೦ ಜಿಲ್ಲಾ ಘಟಕಗಳನ್ನು, ೬ ಗಡಿನಾಡ ಘಟಕಗಳನ್ನು ಹಾಗೂ ೨೫೨ ತಾಲೂಕು ಘಟಕಗಳನ್ನು ಹೊಂದಿದ್ದು ೩,೪೦,೦೦೦ ಕ್ಕಿಂತಲೂ ಅಧಿಕ ಆಜೀವ ಸದಸ್ಯರನ್ನು ಹೊಂದಿದ್ದು ಪ್ರಸ್ತುತ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರ ಅವಧಿಯಲ್ಲಿ ಒಂದು ಕೋಟಿ ಸದಸ್ಯತ್ವವನ್ನು ಹೊಂದುವ ಗುರಿಯನ್ನು ಹೊಂದಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆಯಾದ ಸಂದರ್ಭಕ್ಕೂ ಈಗಿನ ಸಂದರ್ಭಕ್ಕೂ ಅಗಾಧ ವ್ಯತ್ಯಾಸಗಳಿವೆ. ಕರ್ನಾಟಕ ಈಗ ಏಕೀಕರಣಗೊಂಡಿದೆ. ಜಿಲ್ಲೆ, ತಾಲೂಕು, ಹೋಬಳಿಗಳ ಸಂಖ್ಯೆಯಲ್ಲಿಯೂ ಅಪಾರ ಬದಲಾವಣೆಗಳಾಗಿವೆ, ಮುಖ್ಯ ಕನ್ನಡಿಗರ ಜನಸಂಖ್ಯೆ ಈಗ ಸುಮಾರು ಏಳು ಕೋಟಿಯಷ್ಟಾಗಿದೆ. ಪರಿಷತ್ತು ಸ್ಥಾಪನೆಯಾದಾಗಿಂದಲೂ ಇಲ್ಲಿಯುವರೆಗೆ ಮೂಲ ಧ್ಯೇಯೋದ್ದೇಶಗಳು ಮತ್ತು ನಿಬಂಧನೆಗಳಿಗೆ ಅನುಗುಣವಾಗಿ ಕಾರ್ಯ ನಿರ್ವಹಿಸುತ್ತಲೇ ಬಂದಿದೆ. ನಿಬಂಧನೆಗಳು ಕೂಡ ಇಲ್ಲಿಯವರೆಗೆ ೬ ಸಲ ತಿದ್ದುಪಡಿಯಾಗಿದ್ದು ೧೫–೦೩–೨೦೧೮ರಂದು ಜರುಗಿದ ವಿಶೇಷ ಸಾಮಾನ್ಯ ಸಭೆಯಲ್ಲಿ ಅಂಗೀಕಾರವಾದ ತಿದ್ದುಪಡಿ ಆರನೆಯದು. ಪ್ರಸ್ತುತ ಅಗತ್ಯಕ್ಕೆ ತಕ್ಕಂತೆ ನಿಬಂಧನೆಗಳನ್ನು ಆಮೂಲಾಗ್ರವಾಗಿ ಪರಿಶೀಲಿಸಿ ಬದಲಾದ ಸಂದರ್ಭಕ್ಕೆ ಅನುಗುಣವಾಗಿ ತಿದ್ದುಪಡಿ ಮಾಡಬೇಕು ಎಂದು ೦೪–೧೨–೨೦೨೧ರ ಪರಿಷತ್ತಿನ ಕಾರ್ಯಕಾರಿ ಸಮಿತಿಯು ತೀರ್ಮಾನಿಸಿತು. ಇದಕ್ಕಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿಯವರು ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ನ್ಯಾಯಮೂರ್ತಿ ಅರಳಿ ನಾಗರಾಜ ಅವರ ಅಧ್ಯಕ್ಷತೆಯಲ್ಲಿ ತಿದ್ದುಪಡಿ ಸಲಹಾ ಸಮಿತಿಯನ್ನು ರಚಿಸಿದರು. ದಿನಾಂಕ ೯–೧೨–೨೦೨೧ರಂದು ಪ್ರಥಮ ಸಭೆಯು ನಡೆಯಿತು, ಈ ಪ್ರಥಮ ಸಭೆಯಲ್ಲಿ ಸಮಿತಿಯ ಸರ್ವ ಸದಸ್ಯರು, ಪರಿಷತ್ತಿನ ಅಧ್ಯಕ್ಷರು, ಗೌರವ ಕಾರ್ಯದರ್ಶಿಗಳು ಹಾಜರಿದ್ದು ಪ್ರಸ್ತುತ ಜಾರಿಯಲ್ಲಿರುವ ಎಲ್ಲಾ ನಿಬಂಧನೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಯಾವ ಯಾವ ವಿಷಯಗಳಿಗೆ ಸಂಬಂಧಿಸಿದಂತೆ ತಿದ್ದುಪಡಿಯಾಗಬೇಕು ಎನ್ನುವುದರ ಬಗ್ಗೆ ವಿಸ್ತಾರವಾದ ಚರ್ಚೆ ನಡೆಯಿತು. ಮುಂದೆ ದಿನಾಕ ೧೬–೧೮–೧೨–೨೦೨೧, ೨೮–೧೨–೨೦೨೧, ೩೧–೧೨–೨೦೨೧, ೯–೧೦–೦೨–೨೦೨೨ ಹೀಗೆ ಒಟ್ಟು ಆರು ಸಭೆಗಳನ್ನು ನಡೆಸಿದ ಸಮಿತಿಯು ಪ್ರತಿಯೊಂದು ನಿಯಮವನ್ನು ಎಚ್ಚರಿಕೆಯಿಂದ ಪರಿಶೀಲಿಸಿ ಬದಲಾವಣೆಯ ಸ್ವರೂಪವನ್ನು ನಿರ್ಣಯಿಸಿತು. ತಿದ್ದುಪಡಿ ಸಲಹಾ ಸಮಿತಿಯ ಸದಸ್ಯರಾದ ಶ್ರೀ ಶಿವಲಿಂಗೇಗೌಡರು ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಶ್ರೀ ಎಸ್.ಟಿ.ಮೋಹನ್ ರಾಜು ಕೇಂದ್ರ ವಿಶೇಷ ಚುನಾವಣಾಧಿಕಾರಿ–ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತು, ಶ್ರೀ ಎಚ್.ಎಸ್. ಮುದ್ದೇಗೌಡರು ಮಂಡ್ಯ ಜಿಲ್ಲಾ ಸಾಹಿತ್ಯ ಪರಿಷತ್ತಿನ ಘಟಕದ ಮಾಜಿ ಅಧ್ಯಕ್ಷರು ಹಾಗೂ ಶ್ರೀ ಅಶ್ವತ್ಥಯ್ಯ ನಿವೃತ್ತ ಸಹಕಾರಿ ಇಲಾಖೆಯ ಅಧಿಕಾರಿಗಳು ಇವರನ್ನು ಒಳಗೊಂಡ ಉಪ ಸಮಿತಿಯನ್ನು ರಚಿಸಲಾಯಿತು. ಈ ಸಮಿತಿಯು ಕರಡನ್ನು ಅಂತಿಮಗೊಳಿಸಿ ೧೦–೨–೨೦೨೨ರಂದು ಜರುಗಿದ ತಿದ್ದುಪಡಿ ಸಲಹಾ ಸಮಿತಿಯು ಸಭೆಯಲ್ಲಿ ಪರಿಷ್ಕೃತ ಕರಡನ್ನು ಸರ್ವಾನುಮತದಿಂದ ಅನುಮೋದಿಸಲಾಯಿತು.






ದಿನಾಂಕ ೧೭-೦೨-೨೦೨೨ರಂದು ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿಯವರ ಅಧ್ಯಕ್ಷತೆಯಲ್ಲಿ ಉದ್ದೇಶಿತ ತಿದ್ದುಪಡಿಯನ್ನು ಅಧ್ಯಯನ ಮಾಡಿ ತಮ್ಮ ಅಮೂಲ್ಯವಾದ ಸಲಹೆ ಸೂಚನೆ ನೀಡಲು ನಾಡಿನ ಸಾಹಿತಿ, ಸಂಸ್ಕೃತಿ ಚಿಂತಕರು, ವಿದ್ವಾಂಸರು, ಕಲಾವಿದರು, ಕನ್ನಡಪರ ಹೋರಾಟಗಾರರು ಸೇರಿದಂತೆ ೨೪ ಗಣ್ಯ ವ್ಯಕ್ತಿಗಳ ಸಮಾಲೋಚನಾ ಸಭೆಯನ್ನು ನಡೆಸಲಾಯಿತು. ಇದರಲ್ಲಿ ಪರಿಷತ್ತಿನ ಪದಾಧಿಕಾರಿಗಳೂ ಭಾಗವಹಿಸಿದ್ದರು. ಈ ಸಮಿತಿಯ ಸಲಹೆಗಳಂತೆ ಕರಡನ್ನು ಪರಿಷ್ಕರಿಸಲಾಯಿತು. ೨೫.೦೨.೨೦೨೨ ರಂದು ಜರುಗಿದ ಕಾರ್ಯಕಾರಿ ಸಮಿತಿಯ ಸಭೆ ಪರಿಷ್ಕೃತ ಕರಡನ್ನು ಕೂಲಂಕಷವಾಗಿ ಪರಿಶೀಲಿಸಿ, ವಿಸ್ತೃತವಾಗಿ ಚರ್ಚಿಸಿ ಕೆಲವೊಂದು ಬದಲಾವಣೆಯನ್ನು ಸೂಚಿಸುವುದರೊಂದಿಗೆ ಅನುಮೋದಿಸಿತು. ೧೪-೩-೨೦೨೨ರ ತನ್ನ ಸಭೆಯಲ್ಲಿ ಕರಡು ಸಮಿತಿಯು ಕಾರ್ಯಕಾರಿ ಸಮಿತಿಯು ಸೂಚಿಸಿದ್ದ ಬದಲಾವಣೆಗಳನ್ನು ಅಳವಡಿಸಿ ಕೊಂಡು ಅಂತಿಮ ಕರಡನ್ನು ಸಿದ್ಧಪಡಿಸಿತು. ಮೇ ೧, ೨೦೨೨ರಂದು ಕಾಗಿನೆಲೆಯಲ್ಲಿ ನಡೆದ ಸರ್ವಸದಸ್ಯರ ಸಭೆಯಲ್ಲಿ ಈ ತಿದ್ದುಪಡಿಗಳು ಅಂಗೀಕಾರಗೊಂಡವು. ೩೦.೬.೨೦೨೨ರಂದು ಸಹಕಾರಿ ಸಂಘಗಳ ನಿಯಂತ್ರಕರಿಂದ ತಿದ್ದುಪಡಿ ಅನುಮೋದನೆಯನ್ನು ಪಡೆದು ಅಧಿಕೃತವೆನ್ನಿಸಿಕೊಂಡಿತು.

ಕನ್ನಡ ಸಾಹಿತ್ಯ ಪರಿಷತ್ತನ್ನು ಆಧುನಿಕ ಅಗತ್ಯಗಳಿಗೆ ತಕ್ಕಂತೆ ಪರಂಪರೆಯ ನಂಟನ್ನು ಬಿಡದಂತೆ ಸಜ್ಜುಗೊಳಿಸಲು ಈ ತಿದ್ದುಪಡಿಗಳು ಸಹಾಯಕವಾಗಿದ್ದು ಚಾರಿತ್ರಿಕ ಎನ್ನುವ ಮನ್ನಣೆಗೆ ಪಾತ್ರವಾಗಿವೆ.

# ಕನ್ನಡ ಸಾಹಿತ್ಯ ಪರಿಷತ್ತಿನ ಅಲ್ಪಸಂಖ್ಯಾತರ ಪ್ರತಿನಿಧಿಯಾಗಿ ಸರ್ದಾರ್ ಬಲ್ಜಿತ್ ಸಿಂಗ್ ನೇಮಕ



ಬೆಂಗಳೂರು: ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ, ಪರಂಪರೆ ಮತ್ತು ಜಾನಪದಗಳ ರಕ್ಷಣೆ, ಪ್ರಸಾರ ಮತ್ತು ಅಭಿವೃದ್ಧಿಯ ಮೂಲ ಧ್ಯೇಯೋದ್ದೇಶಗಳೊಂದಿಗೆ **ಕನ್ನಡ-ಕನ್ನಡಿಗ-ಕರ್ನಾಟಕದ** ಹಿತರಕ್ಷಣೆಗಾಗಿ ಶ್ರಮಿಸುತ್ತಿರುವ ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ೧೦೮ ವರ್ಷಗಳ ಇತಿಹಾಸದಲ್ಲಿ ಮೊದಲ ಬಾರಿಗೆ ಐತಿಹಾಸಿಕ ನಿರ್ಣಯವನ್ನು ಮಾಡಿದೆ. ಪಂಜಾಬ ಮೂಲದ ಸಿಖ್ ಧರ್ಮದ ಶ್ರೀ ಸರ್ದಾರ್ ಬಲ್ಜಿತ್ ಸಿಂಗ್ ಅವರನ್ನು 'ಸಿಖ್ ಸಮುದಾಯದ ಅಲ್ಪಸಂಖ್ಯಾತರ ಪ್ರತಿನಿಧಿ'ಯಾಗಿ ೦೫.೦೮.೨೦೨೨ರಂದು ನೇಮಕ ಮಾಡಲಾಗಿದೆ.

ಶ್ರೀ ಸರ್ದಾರ್ ಬಲ್ಜಿತ್ ಸಿಂಗ್ ಅವರು ಮೂಲತಃ ಪಂಜಾಬಿನವರು. ಇವರು ಹುಟ್ಟಿದ್ದು ಬೆಂಗಳೂರಿನಲ್ಲಿ. ಹಾಗಾಗಿ ಕನ್ನಡ ಭಾಷೆಯ ಕುರಿತು ಅಪಾರ ಗೌರವವನ್ನು ಹೊಂದಿದ್ದ ಸರ್ದಾರ್ ಬಲ್ಜಿತ್ ಸಿಂಗ್ ಅವರು ಕನ್ನಡವನ್ನು ಕಲಿತು ನಿರರ್ಗಳವಾಗಿ ಮಾತನಾಡುತ್ತಾರೆ, ಕನ್ನಡದಲ್ಲಿ ಬರೆಯುವುದನ್ನು ರೂಢಿಸಿಕೊಂಡಿದ್ದಾರೆ. ಅದರೊಂದಿಗೆ ಕನ್ನಡಿಗರ ಹೆಮ್ಮೆಯ ಪ್ರಾತಿನಿಧಿಕ ಸಂಸ್ಥೆಯಾಗಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವವನ್ನು ಪಡೆದುಕೊಂಡಿದ್ದಾರೆ. ಅವರಿಗೆ ಕನ್ನಡ ಸಾಹಿತ್ಯ ಪರಿಷತ್ತಿನ 'ಸಿಖ್ ಸಮುದಾಯದ ಅಲ್ಪಸಂಖ್ಯಾತರ ಪ್ರತಿನಿಧಿ'ಯಾಗಿ ಕಾರ್ಯನಿರ್ವಹಿಸಲು ಸಂತೋಷದಿಂದ ಒಪ್ಪಿಕೊಂಡಿರುವ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಮಹತ್ವದ ಜವಾಬ್ದಾರಿಯನ್ನು ನೀಡಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ತಿಳಿಸಿದ್ದಾರೆ.

# ಗೋವಾ ವಿಮೋಚನೆಯಲ್ಲಿ ಕನ್ನಡಿಗರ ಪಾತ್ರ ಸ್ಮರಣೀಯ: ನಾಡೋಜ ಡಾ. ಮಹೇಶ ಜೋಶಿ



*ಗೋವಾದ ಪಣಜಿಯಲ್ಲಿ ಗೋವಾ ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ*

**ಪಣಜಿ:** ಕರ್ನಾಟಕ ಮತ್ತು ಗೋವಾ ರಾಜ್ಯಗಳ ನಡುವೆ ಐತಿಹಾಸಿಕ ಬಾಂಧವ್ಯ ಬಹಳ ಕಾಲದಿಂದಲೂ ಮುಂದುವರೆದುಕೊಂಡು ಬಂದಿದೆ. ಗೋವಾ ರಾಜ್ಯ ವಿಮೋಚನೆಯ ಸಂದರ್ಭದಲ್ಲಿ ಕನ್ನಡಿಗರ ತ್ಯಾಗ, ಬಲಿದಾನವನ್ನು ಗೋವನ್ನರು ಇಂದಿಗೂ ಗೌರವಿಸುತ್ತಿದ್ದಾರೆ. ಉಭಯ ರಾಜ್ಯಗಳ ನಡುವೆ ಶೈಕ್ಷಣಿಕ ಬಾಂಧವ್ಯಕ್ಕೆ ಧಾರವಾಡ ಹಾಗೂ ಬೆಳಗಾವಿ ಸಾಕ್ಷಿಯಾಗಿತ್ತು. ಗೋವಾದ ಮೊದಲ ಮುಖ್ಯಮಂತ್ರಿ ಶಶಿಕಲಾ ಕಾಕೋಡಕರ್ ಹಾಗೂ ಭಾರತ ದೇಶದ ಮೊದಲ ವಿದೇಶಾಂಗ ಮಂತ್ರಿ ಗೋವಾ ಮೂಲದ ಎಡ್ವರ್ಡ್ ಫೇಲಿರೋ ಇಬ್ಬರೂ ಧಾರವಾಡದಲ್ಲಿ ಕಲಿತವರು. ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಗೋವಾದ ಫರ್ನಾಂಡೋ ಮಿನೇಜಸ್ ಪ್ರಾಚಾರ್ಯರಾಗಿ ಜನಮೆಚ್ಚುಗೆಯ ಕೆಲಸ ಮಾಡಿದ್ದರು. ಅದರ ಪ್ರತೀಕವಾಗಿ ಇಂದಿಗೂ ಅವರ ಹೆಸರಿನಲ್ಲಿ ಧಾರವಾಡದಲ್ಲಿ ವೃತ್ತವೊಂದನ್ನು ನಿರ್ಮಿಸಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಗೋವಾ ಮತ್ತು ಕರ್ನಾಟಕದ ನಡುವಿನ ಅವಿನಾಭಾವ ಸಂಬಂಧವನ್ನು ನೆನಪಿಸಿಕೊಂಡರು.

೨೫.೭.೨೨ರಂದು ಗೋವಾದ ಪಣಜಿಯಲ್ಲಿ ಗೋವಾ ರಾಜ್ಯ ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ಗಡಿನಾಡ ಘಟಕ ಗೋವಾ, ಕನ್ನಡ ಸಂಘಗಳ ಒಕ್ಕೂಟ, ಮನೋಹರ ಗ್ರಂಥಮಾಲೆ ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ 'ಅಂಬಿಕಾತನಯದತ್ತ' ಕವಿ–ಕಾವ್ಯ–ಕಲ್ಪನೆ ವಿಚಾರ ಸಂಕಿರಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕನ್ನಡ ಸಾಹಿತ್ಯ ಪರಿಷತ್ತು ಕರ್ನಾಟಕ ಮತ್ತು ಗೋವಾ ರಾಜ್ಯಗಳ ನಡುವೆ ಸೌಹಾರ್ದಯುತ ಬಾಂಧವ್ಯ ಬೆಸೆಯಲು ಮುಂದಾಗಲಿದೆ. ಪರಿಷತ್ತು ರಾಜಕೀಯ ಹೊರತಾಗಿ ಸಾಹಿತ್ಯ, ಸಂಸ್ಕೃತಿ, ಕಲೆ, ಪರಂಪರೆಯೊಂದಿಗೆ ಮುನ್ನಡೆಯಲಿದೆ. ಗೋವಾ ರಾಜ್ಯದಲ್ಲಿ ಪ್ರತ್ಯೇಕ ಎರಡು ಬಾರಿ ನನಗೆ ಕೆಲಸ ಮಾಡುವ ಅವಕಾಶ ಸಿಕ್ಕಿತ್ತು. ಮೊದಲ ಬಾರಿಗೆ ಕಾರ್ಮಿಕ ಆಯುಕ್ತನಾಗಿ ಇಲ್ಲಿ ಸೇವೆ ಸಲ್ಲಿಸಿದ್ದೆ. ಎರಡನೆಯ ಬಾರಿ ದೂರದರ್ಶನದ ನಿರ್ದೇಶಕನಾಗಿ ಕೆಲಸ ಮಾಡಿದ್ದೆ. ಆಗ ಕೊಂಕಣಿ, ಮರಾಠಿ ಹಾಗೂ ಪೋರ್ಚುಗೀಸ್ ಭಾಷೆಯ ಕಾರ್ಯಕ್ರಮಗಳನ್ನು ನಡೆಸುವ ಮೂಲಕ ಭಾಷಾ ಸೌಹಾರ್ದವನ್ನು ಮೂಡಿಸುವಲ್ಲಿ ಕೆಲಸ ಮಾಡಿದ್ದೆ. ಸಾಹಿತ್ಯ, ಕಲೆ, ಸಂಸ್ಕೃತಿಗೆ ಭಾಷೆ ಅಡ್ಡಿಯಾಗಲಾರದು ಎಂದು ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಹಿಂದಿನಿಂದಲೂ ಗೋವಾ ಹಾಗೂ ಕರ್ನಾಟಕದ ನಡುವೆ ಉತ್ತಮ ಬಾಂಧವ್ಯ ಬೆಸೆದುಕೊಂಡು ಬಂದಿದೆ. ಪರಸ್ಪರ ಎರಡು ರಾಜ್ಯಗಳು ಒಂದಕ್ಕೊಂದು ಜತೆಯಾಗಿ ಸಹೋದರ ಬಾಂಧವ್ಯ ಹೊಂದಿವೆ. ಉಭಯ ರಾಜ್ಯಗಳ ನಡುವೆ ಪರಸ್ಪರ ಅವಲಂಬನೆ ಬೆಳೆದುಕೊಂಡಿದೆ. ಕನ್ನಡದ ನೆಲದಿಂದ ಹಾಲು, ಹಣ್ಣು, ತರಕಾರಿ ಸೇರಿದಂತೆ ಅಗತ್ಯ ವಸ್ತುಗಳನ್ನು ಗೋವಾಕ್ಕೆ ಪೂರೈಸಲಾಗುತ್ತದೆ. ಕೊಂಕಣಿ ನೆಲದಲ್ಲಿ ಅದೆಷ್ಟೋ ಕನ್ನಡದ ಕಾರ್ಮಿಕರು ತಮ್ಮ ಜೀವನವನ್ನು ಕಟ್ಟಿಕೊಂಡಿದ್ದಾರೆ. ಗೋವನ್ನರು ಕನ್ನಡಿಗರಿಗೆ ನಿಸ್ವಾರ್ಥಭಾವದಿಂದ ಸ್ವಾಗತಿಸಿ ತಮ್ಮ ನೆಲದಲ್ಲಿ ದುಡಿಯಲು ಮುಕ್ತ ಅವಕಾಶ ಕಲ್ಪಿಸಿಕೊಟ್ಟಿದ್ದಾರೆ. ಗೋವಾ ಮತ್ತು ಕರ್ನಾಟಕ ಪರಸ್ಪರ ಅವಲಂಬಿಸಿಕೊಂಡಿರುವ ರಾಜ್ಯಗಳು ಎಂದು ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯಪಟ್ಟಿದ್ದಾರೆ.

# ಗೋವಾದಲ್ಲಿ ಕನ್ನಡ ಭವನ

ಗೋವಾ ನೆಲದಲ್ಲಿ ಕನ್ನಡ ಭವನ ನಿರ್ಮಾಣವಾಗಬೇಕಿದೆ. ಗೋವಾ ಕನ್ನಡ ಭವನ ನಿರ್ಮಿಸಲು ಕರ್ನಾಟಕ ಸರಕಾರ ಆರ್ಥಿಕ ಸಹಾಯ ಮಾಡುವ ಭರವಸೆ ನೀಡಿದೆ. ಇನ್ನೂ ಗೋವಾ ಸರಕಾರ ಕನ್ನಡ ಭವನ ನಿರ್ಮಾಣಕ್ಕೆ ಜಾಗ ನೀಡಬೇಕೆಂದು ಕೋರಲಾಗಿದೆ. ಈ ಹಿನ್ನೆಲೆಯಲ್ಲಿ ಗೋವಾದ ಜನಪ್ರತಿನಿಧಿಗಳೊಂದಿಗೆ ಕನ್ನಡ ಸಾಹಿತ್ಯ ಪರಿಷತ್ತು ಚರ್ಚೆ ನಡೆಸಿದೆ. ಆದಷ್ಟು ಬೇಗ ಕನ್ನಡ ಭವನ ನಿರ್ಮಾಣಕ್ಕೆ ಗೋವಾ ಸರಕಾರ ಸ್ಪಂದಿಸುವಂತೆ ಮನವಿ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ತಿಳಿಸಿದರು.

ಮುಂದಿನ ಐದು ವರ್ಷಗಳಲ್ಲಿ ಗೋವಾ ರಾಜ್ಯದಲ್ಲಿ ನೆಲೆಸಿರುವ ಕನಿಷ್ಠ ೧ ಲಕ್ಷಕ್ಕೂ ಹೆಚ್ಚು ಕನ್ನಡಿಗರು ಕನ್ನಡಿಗರ ಹೆಮ್ಮೆಯ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆದುಕೊಳ್ಳಬೇಕು. ಈ ಗೋವಾ ನೆಲದಲ್ಲಿ ಕನ್ನಡ ಭವನ ಆಗಬೇಕು. ಗೋವಾದಲ್ಲಿ ಪದಗ್ರಹಣ ಸಮಾರಂಭ ನಡೆಯುತ್ತಿದೆ. ಗೋವೆಯ ಮೂಲ ನಿವಾಸಿಗಳನ್ನು ಹೊರತು ಪಡಿಸಿದರೆ ಇಲ್ಲಿ ಕನ್ನಡಿಗರೆ ಹೆಚ್ಚಾಗಿದ್ದಾರೆ. ಯಾವುದೇ ಕಾರಣಕ್ಕೂ ಉಭಯ ರಾಜ್ಯಗಳ ನಡುವೆ ಯಾವುದೇ ಭಿನ್ನಾಭಿಪ್ರಾಯಗಳು ಇರಬಾರದು. ಈ ಹಿನ್ನೆಲೆಯಲ್ಲಿ ಈಗಾಗಲೇ ಕನ್ನಡ ಸಾಹಿತ್ಯ ಪರಿಷತ್ತು ಉಭಯ ರಾಜ್ಯ ಸರಕಾರದೊಂದಿಗೆ ಸಮಾಲೋಚನೆ ನಡೆಸುತ್ತಿದೆ ಎಂದರು.

ಸಮಾರಂಭದ ದಿವ್ಯಸಾನ್ನಿಧ್ಯ ವಹಿಸಿದ ಬೆಳಗಾವಿ ಹುಕ್ಕೇರಿ ಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಮಾತನಾಡಿ, ಇನ್ನು ಒಂದು ವರ್ಷದೊಳಗೆ ಗೋವಾ ನೆಲದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಬೇಕು. ಇಲ್ಲಿನ ಎಲ್ಲ ಕನ್ನಡಿಗರು ಮನಸ್ಸು ಮಾಡಿದರೆ ಕನ್ನಡ ಭವನ ನಿರ್ಮಾಣ ಕಷ್ಟವಲ್ಲ. ಮುಂದೆ ಕನ್ನಡ ಭವನ ತನ್ನ ಸ್ವಂತ ಜಾಗದಲ್ಲಿ ಕನ್ನಡ ಕಾರ್ಯಕ್ರಮ ಆಯೋಜಿಸುವಂತಾಗಬೇಕು. ಇನ್ನೊಂದು ತಿಂಗಳೊಳಗೆ ಕನ್ನಡ ಭವನ ನಿರ್ಮಾಣಕ್ಕಾಗಿ ಬೇಕಾದ ಜಾಗ ಖರೀದಿಯಾಗಲೇಬೇಕು. ನನ್ನ ಮಠಕ್ಕಾಗಿ ನಾನು ಎಂದೂ ಇಲ್ಲಿಗೆ ಜೋಳಿಗೆ ಹಿಡಿದು ಬಂದವನಲ್ಲ. ಗೋವೆಯಲ್ಲಿ ಕನ್ನಡ ಭವನ ನಿರ್ಮಾಣಕ್ಕಾಗಿ ನಾನು ಜೋಳಿಗೆ ಹಿಡಿಯಲು ಸಿದ್ಧ ಎಂದು ಶ್ರೀಗಳು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ ಗೋವಾ ರಾಜ್ಯ ಘಟಕದ ಡಾ. ಸಿದ್ಧಣ್ಣ ಮೇಟಿ ಮಾತನಾಡಿ, ಗೋವಾದಲ್ಲಿ ಕನ್ನಡ ಭವನ ನಿರ್ಮಾಣಕ್ಕೆ ಸಾಕಷ್ಟು ಪ್ರಯತ್ನ ನಡೆಸಲಾಗುತ್ತಿದೆ. ಕನ್ನಡ ಭವನ ನಿರ್ಮಾಣಕ್ಕೆ ಜಾಗ ಖರೀದಿಸಲು ಹುಕ್ಕೇರಿ ಶ್ರೀಗಳು ಜೋಳಿಗೆ ಹಿಡಿದು ಬಂದರೆ ನಾನು ಆ ಜೋಳಿಗೆಯಲ್ಲಿ ೧೦ ಲಕ್ಷ ರೂ. ದೇಣಿಗೆ ರೂಪದಲ್ಲಿ ನೀಡುವುದಾಗಿ ಘೋಷಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಗೋವಾ ರಾಜ್ಯದ ಮಾಜಿ ಮುಖ್ಯಮಂತ್ರಿ ದಿಗಂಬರ ಕಾಮತ್ ಮಾತನಾಡಿ, ಗೋವಾದಲ್ಲಿಯ ಕೊಂಕಣಿಗರು ಕನ್ನಡಿಗರ ಮೇಲೆ ಅಪಾರ ಗೌರವವನ್ನು ಹೊಂದಿದ್ದಾರೆ. ಮಹೇಶ್ ಜೋಶಿ ಅವರು ಗೋವಾ ದೂರದರ್ಶನದಲ್ಲಿ ಇದ್ದಾಗ ಗೋವಾ ರಾಜ್ಯಕ್ಕೆ ಅಪಾರ ಕೊಡುಗೆಯನ್ನು ಕೊಟ್ಟಿದ್ದರು. ಸಾಂಸ್ಕೃತಿಕವಾಗಿ ನಮ್ಮ ರಾಜ್ಯವನ್ನು ಒಂದು ಗೂಡಿಸುವಲ್ಲಿ ಇವರ ಸೇವೆ ಯಾವತ್ತು ಮರೆಯಲು ಸಾಧ್ಯವಿಲ್ಲ ಎಂದರು.

ವೇದಿಕೆಯಲ್ಲಿ ಇಂಡೋ– ಪೋರ್ಚುಗೀಸ ಸಾಹಿತ್ಯ ಪ್ರತಿಷ್ಠಾನದ ನಿರ್ದೇಶಕ ಅರವಿಂದ ಯಾಳಗಿ ಮಾತನಾಡಿದರು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ವಿಜಯಪುರ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ನೀಲಮ್ಮ ಮೇಟಿ, ಅಖಿಲ ಗೋವಾ ಕನ್ನಡ ಮಹಾಸಂಘದ ಅಧ್ಯಕ್ಷ ಹನುಮಂತಪ್ಪ ಶಿರೂರ ರೆಡ್ಡಿ, ಕನ್ನಡ ಸಾಹಿತ್ಯ ಪರಿಷತ್ ಗೋವಾ ರಾಜ್ಯ ಘಟಕದ ನಿಕಟಪೂರ್ವ ಅಧ್ಯಕ್ಷ ಮಲ್ಲಿಕಾರ್ಜುನ ಬದಾಮಿ, ಕರ್ನಾಟಕ ಜಾಗೃತ ವೇದಿಕೆಯ ರಾಜ್ಯಾಧ್ಯಕ್ಷ ಮಹೇಶಬಾಬು ಸುರ್ವೆ ಸೇರಿದಂತೆ ಅನೇಕ ಕನ್ನಡಿಗರು ಉಪಸ್ಥಿತರಿದ್ದರು.

## ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯಕಾರಿ ಸಮಿತಿ ಸದಸ್ಯರು



# ಬಳ್ಳಾರಿ ಕರ್ನಾಟಕದಲ್ಲೇ ಇರಲು ನಾಡೋಜ ಡಾ. ಕೋ. ಚೆನ್ನಬಸಪ್ಪನವರು ಕಾರಣ: ನಾಡೋಜ ಡಾ. ಮಹೇಶ ಜೋಶಿ ಅಭಿಮತ




*ಸ್ವಾತಂತ್ರ್ಯ ಹೋರಾಟಗಾರ, ಹಿರಿಯ ಸಾಹಿತಿ ನಾಡೋಜ ಡಾ. ಕೋ. ಚೆನ್ನಬಸಪ್ಪ ಅವರ ಜನ್ಮಶತಾಬ್ದಿ ಸಮಾರಂಭದಲ್ಲಿ ಗಣ್ಯರಿಂದ ಪುಷ್ಪನಮನ.*

**ಬೆಂಗಳೂರು:** ನೇರ ನುಡಿ, ನುಡಿದಂತೆ ನಡೆಯುತ್ತ ಅನ್ಯಾಯವನ್ನು ಯಾವ ನಿರ್ಭಯವಿಲ್ಲದೆ ವಿರೋಧಿಸುವ ಮೇರು ವ್ಯಕ್ತಿತ್ವ ನಾಡೋಜ ಡಾ. ಕೋ. ಚೆನ್ನಬಸಪ್ಪನವರ ಹೋರಾಟ ಇಲ್ಲದಿದ್ದರೆ ಬಳ್ಳಾರಿಯ ನೆಲ ಕರ್ನಾಟಕದಲ್ಲಿ ಇರುತ್ತಿರಲಿಲ್ಲ. ಬಳ್ಳಾರಿ ಆಂಧ್ರದ ಪಾಲಾಗುತ್ತಿತ್ತು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತು, ಕೋಚೆ ಸಾಹಿತ್ಯ ಮತ್ತು ಶಿಕ್ಷಣ ಟ್ರಸ್ಟ್ (ನೋಂ), ಕರ್ನಾಟಕ ಗಾಂಧಿ ಸ್ಮಾರಕ ನಿಧಿ (ನೋಂ) ಹಾಗೂ ಭಾರತೀಯ ವಿದ್ಯಾಭವನ ಇವರುಗಳ ಸಹಭಾಗಿತ್ವದಲ್ಲಿ ೧೦.೭.೨೦೨೨ರಂದು ಗಾಂಧಿ ಭವನದಲ್ಲಿರುವ ಮಹದೇವ ದೇಸಾಯಿ ಸಭಾಂಗಣದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಹಾಗೂ ಹಿರಿಯ ಸಾಹಿತಿ ನಾಡೋಜ ಡಾ. ಕೋ. ಚೆನ್ನಬಸಪ್ಪ ಅವರ ಜನ್ಮಶತಾಬ್ದಿ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೋಚೆ ಅವರು ಅನೇಕ ವಿಶೇಷತೆಗಳ ಸಂಗಮ, ಅವರು ಕರ್ನಾಟಕ ಏಕೀಕರಣದ ರೂವಾರಿ, ಕನ್ನಡದ ಕಟ್ಟಾಳು, ಸಾಮಾಜಿಕ ಚಿಂತಕರು ಆದ ಅವರು ೮೦ಕ್ಕೂ ಹೆಚ್ಚು ಕೃತಿಗಳನ್ನು ಸಾರಸ್ವತ ಲೋಕಕ್ಕೆ ನೀಡಿದ್ದಾರೆ. ಸಮಾಜದಲ್ಲಿ ತುಳಿತಕ್ಕೆ ಒಳಗಾದವರ, ನೊಂದವರ, ರೈತರ ಪರ ಧ್ವನಿಯಾಗಿದ್ದವರು, ಸಾಮಾಜಿಕ ಸಮಸ್ಯೆಗಳಿಗೆ ಸ್ಪಂದಿಸುವ ವಕೀಲರಾಗಿದ್ದರು ಎಂದು ಬಹುಮುಖ ಪ್ರತಿಭೆಯ ಕೋ.ಚೆನ್ನಬಸಪ್ಪ ಅವರ ನಿಲುವುಗಳನ್ನು ನಾಡೋಜ ಡಾ. ಮಹೇಶ ಜೋಶಿ ನೆನಪಿಸಿಕೊಂಡರು.

ಕೋಚೆ ಅವರ ಜನ್ಮಶತಾಬ್ದಿ ಸಮಾರಂಭವನ್ನು ಉದ್ಘಾಟಿಸಿದ ಭಾರತದ ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿಗಳಾದ ಶಿವರಾಜ ವಿ. ಪಾಟೀಲ್ ಅವರು ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಇತ್ತೀಚೆಗೆ ರಚನಾತ್ಮಕ ಕೆಲಸಗಳನ್ನು ಮಾಡುತ್ತಿದೆ. ಅದಕ್ಕೆ ಸಾಕ್ಷಿ ಇವತ್ತಿನ ಕೋಚೆ ಅವರ ಜನ್ಮಶತಾಬ್ದಿ ಕಾರ್ಯಕ್ರಮವೂ ಒಂದು. ಕೋಚೆ ಅವರು ಪ್ರಜ್ಞಾವಂತಿಕೆಯ ನ್ಯಾಯಯುತ ವ್ಯಕ್ತಿತ್ವದ ವಿದ್ವಾಂಸ. ಸಾಹಿತ್ಯಕ್ಷೇತ್ರದ ಆಸ್ತಿ, ಯಾರದೇ ಹಂಗಿಲ್ಲದೆ, ಹಮ್ಮಿಲ್ಲದೆ ಕನ್ನಡಕ್ಕಾಗಿ ಬದುಕಿದವರು ಎಂದು ಕೋಚೆ ಅವರ ಬಗ್ಗೆ ನೆನಪಿಸಿಕೊಂಡರು.

ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷರಾದ ನಾಡೋಜ ಡಾ. ವೂಡೇ ಪಿ. ಕೃಷ್ಣ ಅವರು ಮಾತನಾಡಿ, ಗಾಂಧಿಯವರ ನಡೆ ನುಡಿ ವಿಚಾರಗಳನ್ನು ಯಾರು ಒಪ್ಪಿಕೊಳ್ಳುತ್ತಾರೋ, ಅನ್ಯಾಯ ವಿರೋಧಿಸ್ತಾರೋ ಅವರೇ ಗಾಂಧಿವಾದಿಗಳು. ಖಾದಿ ತೊಟ್ಟ ಮಾತ್ರಕ್ಕೆ ಗಾಂಧಿವಾದಿ ಆಗಲಾರರು. ಕೋಚೆ ಅವರು ಅನ್ಯಾಯವನ್ನು ತಕ್ಷಣವೇ ವಿರೋಧಿಸುವ ಮಹಾನ್ ಗಾಂಧಿವಾದಿಗಳಾಗಿದ್ದರು ಎಂದರು.

ಕೃಷಿ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀ ಶಿವಯೋಗಿ ಕಳಸದ ಅವರು ಮಾತನಾಡಿ, ಕೋ. ಚೆನ್ನಬಸಪ್ಪರವರ ಸರಳ ಜೀವನ ಮತ್ತು ಸಾಮಾನ್ಯ ಬದುಕಿನ ಅನಾವರಣ ಮಾಡಿದರು. ಕೋಚೆ ಅವರ ಮಗ ಹಾಗೂ ಮೇರಿಲ್ಯಾಂಡ್ ಯೂನಿವರ್ಸಿಟಿಯ ಡೀನ್ ಆದ ಡಾ. ಪ್ರಭುದೇವ ಕೋಣನ ಮಾತನಾಡಿ, "ತಾನು ಕೋಚೆಯವರ ಮಗ ಎನ್ನುವುದಕ್ಕೆ ಅಭಿಮಾನವಾಗುತ್ತದೆ" ಎಂದರು. ಕೆಲವು ವಿಷಯಗಳಲ್ಲಿ ಯಾವತ್ತು ರಾಜಿ ಮಾಡಿಕೊಳ್ಳದ ಅವರು ವಾದಕ್ಕೆ ನಿಂತ ಉದಾಹರಣೆಗಳನ್ನು ನೆನಪಿಸಿಕೊಂಡರು.

ಆಕಾಶವಾಣಿಯ ವಿಶ್ರಾಂತ ನಿರ್ದೇಶಕರಾದ ಡಾ. ಬಸವರಾಜ ಸಾದರ ಅವರು ಕೋಚೆ ಮತ್ತು ಪ್ರಗತಿಶೀಲ ಸಾಹಿತ್ಯ ಚಳವಳಿ ಕುರಿತು ಹಾಗೂ ಹಿರಿಯ ಸಾಹಿತಿಗಳಾದ ಪ್ರೊ. ಕೆ.ಎಸ್. ಮಧುಸೂದನ ಅವರು ಕೋಚೆ ಅವರ ಅರವಿಂದ ಸಾಹಿತ್ಯ ಅನುವಾದಗಳು ವಿಷಯದ ಕುರಿತು ಉಪನ್ಯಾಸ ಮಾಡಿದರು. ವಿಚಾರಗೋಷ್ಠಿಯ ಅಧ್ಯಕ್ಷತೆಯನ್ನು ಹಿರಿಯ ಪತ್ರಕರ್ತರಾದ ಶ್ರೀ ಲಕ್ಷ್ಮಣ ಕೊಡಸೆ ವಹಿಸಿಕೊಂಡಿದ್ದರು.

ನಾನು ಕಂಡಂತೆ ಕೋಚೆ ಕುರಿತು ಹಿರಿಯ ಸಂಶೋಧಕರಾದ ಡಾ. ವೀರಶೆಟ್ಟಿ ಬಿ. ಗಾರಂಪಳ್ಳಿ, ಸಾಹಿತಿಗಳಾದ ಶ್ರೀ ಪ್ರಕಾಶ ಗಿರಿಮಲ್ಲನವರ, ಕೋಚೆ ಅವರ ಮಗಳಾದ ಶ್ರೀಮತಿ ಶಾಂತ ಜಯಪ್ರಸಾದ್, ರಾಮಯ್ಯ ಮೆಮೋರಿಯಲ್ ಆಸ್ಪತ್ರೆಯ ಡಾ. ಕೆ.ಸಿ. ಗುರುದೇವ್, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀ ಕೆ.ಬಿ. ಗುದಗಿ ಅವರುಗಳು ಕೋಚೆ ಯವರೊಂದಿಗಿನ ಒಡನಾಟವನ್ನು ಹಂಚಿಕೊಂಡರು.

ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಯಾದ ನೇ.ಭ.ರಾಮಲಿಂಗಶೆಟ್ಟಿ ಸ್ವಾಗತಿಸಿದರು, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವಕೋಶಾಧ್ಯಕ್ಷ ಬಿ.ಎಂ.ಪಟೇಲ್‌ಪಾಂಡು ಅವರು ಕಾರ್ಯಕ್ರಮ ನಿರೂಪಿಸಿದರು.

# ಮಾದರಿ ಮೈಸೂರನ್ನು ರೂಪಿಸಿದ ಸರ್ ಮಿರ್ಜಾ ಇಸ್ಮಾಯಿಲ್ – ನಾಡೋಜ ಡಾ. ಮಹೇಶ ಜೋಶಿ



***ಚಾಮರಾಜಪೇಟೆಯಲ್ಲಿನ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ ಪರಿಷತ್ತಿನ ಆಧಾರ ಸ್ಥಂಭಗಳಲ್ಲಿ ಪ್ರಮುಖರಾದ ದಿವಾನ್ ಸರ್ ಮಿರ್ಜಾ ಇಸ್ಮಾಯಿಲ್ ಅವರ ೧೩೭ ನೆಯ ಜನ್ಮದಿನಾಚರಣೆ ಸಮಾರಂಭದಲ್ಲಿ ದಿವಾನ್ ಸರ್ ಮಿರ್ಜಾ ಇಸ್ಮಾಯಿಲ್ ಅವರ ಭಾವಚಿತ್ರಕ್ಕೆ ಗಣ್ಯರಿಂದ ಗೌರವ ಸಮರ್ಪಣೆ.***

**ಬೆಂಗಳೂರು:** "ಕೃಷ್ಣರಾಜ ಒಡೆಯರಂತಹ ದೊರೆಯಿಲ್ಲ, ಮಿರ್ಜಾ ಇಸ್ಮಾಯಿಲ್ ಅಂತಹ ಮಂತ್ರಿ ಇಲ್ಲ" ಎನ್ನುವ ಗಾದೆ ಮಾತು ದಿವಾನ್ ಮಿರ್ಜಾ ಇಸ್ಮಾಯಿಲ್ ಅವರ ಕಾಲದಲ್ಲಿ ಜನಜನಿತವಾಗಿತ್ತು. ಮಿರ್ಜಾ ಇಸ್ಮಾಯಿಲ್ ಅವರ ಅತ್ಯಂತ ಆದರ್ಶವಾದ ಗುಣವೆಂದರೆ ಅವರ ಸೌಜನ್ಯ ವಿನಯ ಹಾಗೂ ಕಾರ್ಯತತ್ಪರತೆ. ಇದೇ ಕಾರಣಕ್ಕೆ ಅವರು ಎಲ್ಲ ಜನರ ಮನಸ್ಸನ್ನು ಗೆದ್ದುಕೊಂಡಿದ್ದರು. ಇವತ್ತು ಮೈಸೂರು ನಗರವನ್ನು ಅತ್ಯಂತ ಸುಂದರ ನಗರವಾಗುವುದಕ್ಕೆ ಮಿರ್ಜಾ ಇಸ್ಮಾಯಿಲ್ ಅವರೇ ಕಾರಣ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯ ಪಟ್ಟರು.

ಅವರು ಇಂದು ಚಾಮರಾಜ ಪೇಟೆಯಲ್ಲಿ ಇರುವ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿರುವ ಪರಿಷತ್ತಿನ ಆಧಾರ ಸ್ಥಂಭಗಳಲ್ಲಿ ಪ್ರಮುಖರಾದ ದಿವಾನ್ ಸರ್ ಮಿರ್ಜಾ ಇಸ್ಮಾಯಿಲ್ ಅವರ ೧೩೭ ನೆಯ ಜನ್ಮದಿನಾಚರಣೆ ಸಮಾರಂಭದಲ್ಲಿ ಮಾತನಾಡಿದರು.

ಸರ್ ಮಿರ್ಜಾ ಇಸ್ಮಾಯಿಲ್ ಅವರು ಪರ್ಷಿಯಾ ಮೂಲದವರಾದರೂ ಕನ್ನಡದ ಮೇಲೆ ಅಪಾರ ಗೌರವ ಹೊಂದಿದ್ದರು. ಕನ್ನಡ ಸಾಹಿತ್ಯ ಪರಿಷತ್ತು ಬೆಳೆಯುವಲ್ಲಿ ಅವರ ಪಾತ್ರ ಪ್ರಮುಖವಾಗಿತ್ತು. ಕನ್ನಡ ಸಾಹಿತ್ಯ ಪರಿಷತ್ತಿಗೆ ಸ್ಥಳದ ಅವಶ್ಯಕತೆ ಇದೆ ಎಂದಾಗ ಕನ್ನಡ ಸಾಹಿತ್ಯ ಪರಿಷತ್ತು ಇರುವ ಈಗಿನ ಜಾಗವನ್ನು ಉಚಿತವಾಗಿ ನೀಡಿ, "ಕನ್ನಡ ತಾಯಿಯ ದೇಗುಲ ಇಲ್ಲಿ ಸಿದ್ಧವಾಗಲಿ" ಎಂಬ ಮಾತನ್ನು ಹೇಳಿದ್ದರು. ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಕನ್ನಡ ಸಂಘಗಳು "ಕನ್ನಡದ ಅರಿವನ್ನು ಬೆಳಗುವ ನಂದಾ ದೀಪಗಳು" ಎಂದು ಬಣ್ಣಿಸಿದ್ದರು. ಮಿರ್ಜಾ ಅವರು ಸೋಮಾರಿತನ ಮತ್ತು ಲಂಚಗುಳಿತನಕ್ಕೆ ವಿರೋಧಿಸಿ ದಕ್ಷತೆಗೆ ಸದಾ ಪ್ರೋತ್ಸಾಹಿಸುತ್ತಿದ್ದುದನ್ನು ನಾಡೋಜ ಡಾ. ಮಹೇಶ ಜೋಶಿ ನೆನಪಿಸಿಕೊಂಡರು.

ಸರ್ ಮಿರ್ಜಾ ಇಸ್ಮಾಯಿಲ್ ಅವರ ಕುರಿತು ಉಪನ್ಯಾಸ ನೀಡಿದ ಜೆ.ಎಸ್.ಎಸ್. ಮಹಾವಿದ್ಯಾಲಯ ನಿವೃತ್ತ ಪ್ರಾಂಶುಪಾಲರಾದ ಪ್ರೊ. ಚಂದ್ರಶೇಖರ ಉಷಾಲ ಮಾತನಾಡಿ, ಮಿರ್ಜಾ ಇಸ್ಮಾಯಿಲ್ ಅವರು ತಮ್ಮೊಂದಿಗೆ ಎಲ್ಲರೂ ಬೆಳೆಯಬೇಕು, ಎನ್ನುವ ಭಾವನೆ ಹೊಂದಿದ್ದರು. ಅವರ ದೂರದೃಷ್ಟಿಯ ಪ್ರತೀಕವಾಗಿ ಮೈಸೂರು ಸಂಸ್ಥಾನ ಜಗತ್ತಿನ ಮಾದರಿ ಸಂಸ್ಥಾನ ಎಂದು ಹೆಸರಾಗಿತ್ತು. ಹಿಂದೆ ೧೯೩೮ರಲ್ಲಿ ಮಹಾತ್ಮಾಗಾಂಧಿಯವರಿಂದ ರಾಜರ್ಷಿ ಎಂದು ಕರೆಸಿಕೊಂಡಿದ್ದ ನಾಲ್ವಡಿಯವರಿಗೆ ಬೆನ್ನೆಲುಬಾಗಿ ನಿಂತವರು ಮಿರ್ಜಾ ಇಸ್ಮಾಯಿಲ್ ಅವರು. ಮೈಸೂರು ಸಂಸ್ಥಾನದ ಏಳಿಗೆಯ ಸಂಪೂರ್ಣ ಜವಾಬ್ದಾರಿಯನ್ನು ವಹಿಸಿಕೊಂಡವರು ದಿವಾನರು. ಸರ್ ಎಂ. ವಿಶ್ವೇಶ್ವರಯ್ಯನವರು ಕಂಡ ಎಲ್ಲಾ ಕನಸುಗಳನ್ನು ನನಸು ಮಾಡುವ ಜವಾಬ್ದಾರಿ ವಹಿಸಿಕೊಂಡವರೇ ದಿವಾನ್ ಸರ್ ಎಂ. ಮಿರ್ಜಾ ಇಸ್ಮಾಯಿಲ್ ಅವರು ಎಂದು ಪ್ರೊ. ಚಂದ್ರಶೇಖರ ಉಷಾಲ ಹೇಳಿದರು. ನೀರಾವರಿ, ಕೃಷಿ, ಕೈಗಾರಿಕೆಯ ಯೋಜನೆಗಳನ್ನು ಮೈಸೂರಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ನಾಡನ್ನು ಮಾದರಿ ಮಾಡಿದ್ದರು. ಸೌಂದರ್ಯದ ಕುರಿತು ಅತಿಯಾದ ಆಸಕ್ತಿ ಹೊಂದಿದ ಅವರ ದೂರ ದೃಷ್ಟಿಯ ಪರಿಣಾಮವೇ ಬೃಂದಾವನ ಗಾರ್ಡನ್ ತಲೆ ಎತ್ತಿದ್ದು. ಅಸಾಧಾರಣವಾದ ದೂರದೃಷ್ಟಿ ಹೊಂದಿದ್ದ ಮಿರ್ಜಾ ಅವರು ಭಾರತ ಇಬ್ಭಾಗವಾಗುವುದನ್ನು ಇಷ್ಟ ಪಡದೆ ಸೌಮ್ಯವಾಗಿ ಅದನ್ನು ವಿರೋಧಿಸಿ ಅಖಂಡ ಭಾರತ ಇರಬೇಕು ಎನ್ನುವ ಕನಸನ್ನು ಕಂಡಿದ್ದರು. ಜೀವನದ ಕೊನೆಯ ಕಾಲದಲ್ಲಿ ಹೈದರಾಬಾದಿಗೆ ಬಂದ ಮಿರ್ಜಾ ಅವರು ಅಲ್ಲಿಯ ಸ್ಥಿತಿ ಕಂಡು ಒಂದು ಹಂತದಲ್ಲಿ ಭ್ರಮ ನಿರಸನಗೊಂಡಿದ್ದರು. ನಾಡು ಕಂಡ ಅಪ್ರತಿಮ ರಾಷ್ಟ್ರಭಕ್ತರಾದ ಇಸ್ಮಾಯಿಲ್ ಅವರು ದೈವಾಧೀನರಾದಾಗ ಜಾತಿ ಧರ್ಮ ಮರೆತು ಜನರು ಕಣ್ಣೀರು ಹಾಕಿದ್ದನ್ನು ಡಿ.ವಿ.ಜಿ. ಅವರು ತಮ್ಮ 'ಜ್ಞಾಪಕ ಚಿತ್ರಶಾಲೆ' ಪುಸ್ತಕದಲ್ಲಿ ಬರೆದಿದ್ದಾರೆ ಎಂದು ಅವರು ಸ್ಮರಿಸಿದರು.

ಹಿರಿಯ ಸಾಹಿತಿ ಅಬ್ದುಲ್ ಬಷೀರ್ ಮಾತನಾಡಿ, ಮಿರ್ಜಾ ಇಸ್ಮಾಯಿಲ್ ಅವರಿಗೆ ಕಾಶ್ಮಿರದ ಮುಖ್ಯಮಂತ್ರಿಯಾಗುವ ಅವಕಾಶ ಬಂದಾಗ ಅದನ್ನು ಗೌರವ ಪೂರ್ವಕವಾಗಿ ತಿರಸ್ಕರಿಸಿದ್ದರು. ಬೆಂಗಳೂರಿನ ಸೆಂಟ್ರಲ್ ಕಾಲೇಜಿನಲ್ಲಿ ಭೂಗರ್ಭ ಶಾಸ್ತ್ರ ವಿಷಯದಲ್ಲಿ ಕಲಿತ ಮಿರ್ಜಾ ಅವರು ಯಾವುದೇ ಶಿಕ್ಷಕರು ಕಂಡರೂ ಗೌರವದಿಂದ ನಮಿಸುತ್ತಿದ್ದರು. ಆಗಿನ ಮೈಸೂರು ಸಂಸ್ಥಾನದಲ್ಲಿ ಆರಂಭಿಸಲಾಗುವ ಎಲ್ಲಾ ಕೈಗಾರಿಕೆಗಳು ಒಂದೇ ಕಡೆ ಇರಬಾರದು ಎನ್ನುವ ಮೂಲ ಉದ್ದೇಶವನ್ನು ತಿಳಿಸಿ ನಾಡಿನ ಎಲ್ಲಾ ಮೂಲೆ ಮೂಲೆಗಳಲ್ಲಿ ಕೈಗಾರಿಕೆಗಳು ಇರಬೇಕು ಎನ್ನುವ ವಿಕೇಂದ್ರಿಕರಣದ ಉದ್ದೇಶವನ್ನು ಇಟ್ಟುಕೊಂಡಿದ್ದರು ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ನೇ.ಭ. ರಾಮಲಿಂಗಶೆಟ್ಟಿ ಅವರು ಸ್ವಾಗತಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಕೆ. ಮಹಾಲಿಂಗಯ್ಯ ವಂದಿಸಿದರು. ಗೌರವ ಕೋಶಾಧ್ಯಕ್ಷರಾದ ಬಿ.ಎಂ. ಪಟೇಲ್‌ಪಾಂಡು ಕಾರ್ಯಕ್ರಮ ನಿರ್ವಹಿಸಿದರು.

# ಸಾಮಾಜಿಕ ಮೌಲ್ಯಗಳ ಅವನತಿಯ ಕಾಲದಲ್ಲಿ ಸರ್ ಎಂ. ವಿಶ್ವೇಶ್ವರಯ್ಯನವರ ಮಹತ್ವ ಇನ್ನಷ್ಟು ಹೆಚ್ಚಾಗಿದೆ: ತಿಮ್ಮಪ್ಪ ಭಟ್ ಅಭಿಪ್ರಾಯ

**ಬೆಂಗಳೂರು:** ಸರ್ ಎಂ. ವಿಶ್ವೇಶ್ವರಯ್ಯುನವರು ಕೇವಲ ವ್ಯಕ್ತಿಯಲ್ಲ, ಸಾಮಾಜಿಕ ಬದ್ಧತೆಯ ಸಂಸ್ಥೆಯಂತೆ ಇದ್ದವರು ಶಿಸ್ತು ಮತ್ತು ಮೌಲ್ಯಯುತವಾದ ಬದುಕನ್ನು ಕಟ್ಟಿಕೊಂಡಿದ್ದರು. ಸಮಾಜಕ್ಕಾಗಿ ಜೀವನ ನಡೆಸುವ ಮೂಲಕ ಸಾರ್ವಕಾಲಿಕ ಪ್ರಸ್ತುತತೆಯನ್ನು ಪಡೆದವರು ಎಂದು ಹಿರಿಯ ಪತ್ರಕರ್ತ ಶ್ರೀ ತಿಮ್ಮಪ್ಪ ಭಟ್ ಅಭಿಪ್ರಾಯಪಟ್ಟರು.

ಕನ್ನಡ ಸಾಹಿತ್ಯ ಪರಿಷತ್ತಿನ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ೧೫.೯.೨೦೨೨ರಂದು ನಾಡಿನ ಹಿರಿಯ ಚೇತನ, ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಲ್ಲೊಬ್ಬರಾದ ಭಾರತರತ್ನ ಸರ್ ಎಂ. ವಿಶ್ವೇಶ್ವರಯ್ಯನವರ ಜನ್ಮ ದಿನಾಚರಣೆಯನ್ನು ಪರಿಷತ್ತಿನ ಕುವೆಂಪು ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸಕಾರರಾಗಿ ಮಾತನಾಡುತ್ತಿದ್ದರು, ಹಳೆ ಮೈಸೂರು ಭಾಗದ ಪ್ರತಿಯೊಬ್ಬರ ಮನೆಯಲ್ಲೂ ಸರ್ ಎಂ.ವಿ. ಅವರು ಇಂದಿಗೂ ಪೂಜಿಸಲ್ಪಡುತ್ತಾರೆ. ಒಂದು ರೀತಿಯಲ್ಲಿ ದಂತ ಕಥೆಯಾಗಿದ್ದ ಅವರು ಮಹಾನ್ ಚೇತನವಾಗಿದ್ದರು. ಸರ್ ಎಂ.ವಿ. ಅವರು ಮೌಲ್ಯಯುತ ಜೀವನ ನಡೆಸಿದ್ದರಿಂದ ಎಂದೂ ಒಂದು ಚೌಕಟ್ಟಿಗೆ ಸಿಲುಕಿದವರಲ್ಲ, ಹೊರನೋಟಕ್ಕೆ ಠಾಕುಠೀಕಿನ ಜೀವನ ಪದ್ಧತಿ ಅಳವಡಿಸಿಕೊಂಡಂತೆ ಕಂಡರೂ ವಾಸ್ತವದಲ್ಲಿ ಅವರು ಸಂತನಂತೆ ಜೀವನ ನಡೆಸಿದ್ದರು. ಉಡುಪಿನಲ್ಲಿ ಪೇಟಾ, ಟೈ, ಸೂಟು, ಬೂಟು ಇಲ್ಲದೇ ಯಾವತ್ತೂ ಅವರು ಹೊರಗೆ ಬಂದವರಲ್ಲ. ಇಂತಹ ಶಿಸ್ತಿನಲ್ಲಿಯೇ ಜೀವನದ ಮೌಲ್ಯವನ್ನು ಕಂಡುಕೊಂಡಿದ್ದರು ಎಂದು ಶ್ರೀ ತಿಮ್ಮಪ್ಪ ಭಟ್ ಹೇಳಿದರು.

ಸಮಾಜದ ಬಗ್ಗೆ ತುಂಬಾ ಕಳಕಳಿ ಇದ್ದದ್ದರಿಂದ ಅವರು ಕಂಡ ಪ್ರತಿಯೊಂದು ಕನಸುಗಳು ನಾಡಿನ ಕನಸಾಗಿದ್ದವು. ಆ ಕನಸುಗಳನ್ನು ನನಸು ಮಾಡುವುದಕ್ಕೆ ಅವಿರತವಾಗಿ ಪ್ರಯತ್ನಿಸಿದರು. ಅವರ ಸಾಧನೆಯ ವ್ಯಾಪ್ತಿಯನ್ನು ನೋಡಿದರೆ ಅವರನ್ನು ಕೇವಲ ಇಂಜಿನಿಯರ್ ಎಂದು ಕರೆಯುವುದು ತಪ್ಪಾಗುತ್ತದೆ, ಅವರೊಬ್ಬ ಮುತ್ಸದ್ಧಿಯಾಗಿದ್ದರು. ಅದರ ಪರಿಣಾಮವೇ ಶಿಕ್ಷಣ, ಉದ್ಯಮ, ಉದ್ಯೋಗ, ಕೃಷಿ, ನೀರಾವರಿ, ಕಲೆ, ಸಾಹಿತ್ಯ, ನಾಡು–ನುಡಿ, ಇತ್ಯಾದಿಗಳ ಬಗ್ಗೆ ಕಳಕಳಿ ಹೊಂದಿದ್ದರು ಎಂದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರು, ಕನ್ನಡದ ಕಟ್ಟಾಳು, ಶಿಸ್ತುಬದ್ಧ ಜೀವನ ಹಾಗೂ ಸಮಯ ಪ್ರಜ್ಞೆಯ ಸಾಕಾರ ಮೂರ್ತಿಯಾಗಿದ್ದ ಸರ್ ಎಂ. ವಿಶ್ವೇಶ್ವರಯ್ಯನವರ ಬದುಕು ನಮಗೆಲ್ಲಾ ಮಾರ್ಗದರ್ಶಿ. ಅವರ ೧೦೨ ವರ್ಷದ ತುಂಬು



***ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಕುವೆಂಪು ಸಭಾಂಗಣದಲ್ಲಿ ಹಮ್ಮಿಕೊಂಡ ಸರ್ ಎಂ. ವಿಶ್ವೇಶ್ವರಯ್ಯ ಅವರ ಜನ್ಮದಿನಾಚರಣೆ ಸಂದರ್ಭದಲ್ಲಿ ಸರ್ ಎಂ.ವಿ. ಅವರ ಭಾವಚಿತ್ರಕ್ಕೆ ಪುಷ್ಪನಮನ.***

ಜೀವನದಲ್ಲಿ ನಾಡಿನ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡುವ ಮೂಲಕ ನಮಗೆಲ್ಲರಿಗೂ ಆದರ್ಶವಾಗಿದ್ದಾರೆ. ನಿಷ್ಠುರ ವ್ಯಕ್ತಿತ್ವದ ಸರ್ ಎಂ. ವಿಶ್ವೇಶ್ವರಯ್ಯನವರು ಕೆಲವು ವಿಷಯಗಳ ಬಗ್ಗೆ ಸ್ಪಷ್ಟತೆ, ಗಟ್ಟಿತನದಿಂದ ವಿಷಯಗಳನ್ನು ಮಂಡಿಸುತ್ತಿದ್ದರು. ನಾಡಿನ ಬಗೆಗಿನ ಕಾಳಜಿ ಮತ್ತು ದೂರದೃಷ್ಟಿಯನ್ನು ಅವರು ಹೊಂದಿದ್ದರಿಂದ ಎಲ್ಲರೂ ಅವರ ಮಾತನ್ನು ಗಂಭೀರವಾಗಿ ಪರಿಗಣಿಸುವ ವಾತಾವರಣವನ್ನು ನಿರ್ಮಾಣ ಮಾಡಿದ್ದರು ಎಂದು ನಾಡೋಜ ಡಾ. ಮಹೇಶ ಜೋಶಿ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಲ್ಲಿ ಒಬ್ಬರಾದ ಸರ್ ಎಂ. ವಿಶ್ವೇಶ್ವರಯ್ಯ ಅವರ ಜನ್ಮ ದಿನಾಚರಣೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಮತ್ತು ತಾಲೂಕು ಘಟಕಗಳಲ್ಲಿ ಆಯೋಜಿಸಲಾಗಿದೆ. ಇದೇ ಮೊದಲ ಬಾರಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮ ದಿನಾಚರಣೆಯನ್ನು ಕನ್ನಡ ಸಾಹಿತ್ಯ ಪರಿಷತ್ತು ಎಲ್ಲಾ ಘಟಕಗಳಲ್ಲಿ ಹಮ್ಮಿಕೊಂಡಿದ್ದು. ಮುಂದಿನ ದಿನಗಳಲ್ಲಿ ಸರ್ ಮಿರ್ಜಾ ಇಸ್ಮಾಯಿಲ್ ಅವರ ಜನ್ಮದಿನಾಚರಣೆಯನ್ನು ನಾಡಿನಾದ್ಯಂತ ಇರುವ ಎಲ್ಲಾ ಘಟಕಗಳಲ್ಲಿ ನಡೆಸಲು ಕನ್ನಡ ಸಾಹಿತ್ಯ ಪರಿಷತ್ತು ನಿರ್ಧರಿಸಿದೆ ಎಂದು ಡಾ. ಮಹೇಶ ಜೋಶಿ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ ನೇ.ಭ. ರಾಮಲಿಂಗ ಶೆಟ್ಟಿ ಅವರು ಸ್ವಾಗತಿಸಿದರು. ಶ್ರೀ ಕೆ. ಮಹಾಲಿಂಗಯ್ಯ ಅವರು ವಂದಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷರಾದ ಶ್ರೀ ಬಿ.ಎಂ. ಪಟೇಲ್‌ಪಾಂಡು ಅವರು ಕಾರ್ಯಕ್ರಮ ನಿರೂಪಣೆ ಮಾಡಿದರು.

# ಕನ್ನಡಿಗರಿಗೆ ತಮ್ಮ ನಿಜ ಶಕ್ತಿ ಅರಿವಾಗಬೇಕಿದೆ: ನಾಡೋಜ ಡಾ. ಮಹೇಶ ಜೋಶಿ ಕಾಳಜಿ



***ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ೬೭ನೆ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ನಾಡೋಜ ಡಾ. ಮಹೇಶ ಜೋಶಿ, ಹಿರಿಯ ಇತಿಹಾಸ ತಜ್ಞ ಡಾ. ಎಚ್.ಎಸ್.ಗೋಪಾಲರಾವ್ ಕನ್ನಡ ಹೋರಾಟಗಾರ ಹಾಗೂ ಕನ್ನಡ ಪರಿಚಾರಕರಾದ ಶ್ರೀ ಗಾರೆ ಮಹದೇವ ಭಾಗವಹಿಸಿದ್ದರು.***

**ಬೆಂಗಳೂರು:** ಕನ್ನಡಿಗರು ಆಂಜನೇಯನ ವಂಶಸ್ಥರು, ಆಂಜನೇಯನಿಗಿರುವ ಅಗಾಧವಾದ ಶಕ್ತಿಯ ಬಗ್ಗೆ ಅರಿವು ಮಾಡಿಕೊಡಲು ಜಾಂಬವಂತ ಬರಬೇಕಾಯ್ತು. ಹಾಗೆಯೇ ಕನ್ನಡಿಗರಿಗೆ ತಮ್ಮ ನಿಜವಾದ ಶಕ್ತಿಯ ಅರಿವಿಲ್ಲ. ನಮ್ಮ ಕನ್ನಡ ಶಕ್ತಿಯ ಬಗ್ಗೆ ಎಚ್ಚರಿಸಲು ಮತ್ತೊಬ್ಬರು ಬರಬೇಕಾದ ದುಸ್ಥಿತಿಯಲ್ಲಿ ನಾವಿದ್ದೇವೆ. ಆದರೆ ನಾನು ಆಶಾವಾದಿ, ಭವಿಷ್ಯದಲ್ಲಿ ನಂಬಿಕೆ ಇದೆ. ಸರಕಾರದ ಜೊತೆ ಕನ್ನಡ ಸಾಹಿತ್ಯ ಪರಿಷತ್ತು ಸೇರಿ 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ–೨೦೨೨' ತರುವುದಕ್ಕೆ ಮುಂದಾಗಿದೆ. ಅದು ಮುಂದಿನ ಅಧಿವೇಶನದಲ್ಲಿ ಕಾನೂನಾಗಲಿದೆ. ಇದರಿಂದ ೮೬ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸುವುದಕ್ಕೆ ಸೂಕ್ತ ಅರ್ಥಬರಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯಪಟ್ಟರು.

೧.೧೧.೨೦೨೨ರಂದು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ೬೭ನೆ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ನಾಡೋಜ ಡಾ. ಮಹೇಶ ಜೋಶಿ ಭಾಗವಹಿಸಿ ಮಾತನಾಡಿದರು. ಆರಂಭದಲ್ಲಿ ಪರಿಷತ್ತಿನ ಆವರಣದಲ್ಲಿ ಕನ್ನಡ ಧ್ವಜಾರೋಹಣ ನಡೆಸುವ ಮೂಲಕ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ಹಮ್ಮಿಕೊಂಡ ಕರ್ನಾಟಕ ಏಕೀಕರಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಪಾತ್ರ ಎನ್ನುವ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತಾನಾಡಿದರು.

ಕನ್ನಡಕ್ಕೆ ಅನ್ಯ ಭಾಷಿಗರ ಕೊಡುಗೆ ಅನನ್ಯ. ಕನ್ನಡಿಗರಲ್ಲದಿದ್ದರೂ ಹುಟ್ಟಿದ್ದು ಕನ್ನಡ ನಾಡಿನಲ್ಲಿ ಎನ್ನುವ ಅಭಿಮಾನದಿಂದ ಕನ್ನಡಕ್ಕೆ ಸಾಕಷ್ಟು ಕೊಡುಗೆಯನ್ನು ನೀಡಿದ್ದಾರೆ. ಕನ್ನಡದ ಆಸ್ತಿಯಾಗಿರುವ ಮಾಸ್ತಿಯವರದ್ದು ಮಾತೃ ಭಾಷೆ ತಮಿಳು, ಕನ್ನಡದ ಭಗವದ್ಗೀತೆ ಎನಿಸಿಕೊಂಡ ಮಂಕುತಿಮ್ಮನ ಕಗ್ಗ ಬರೆದ ಡಿವಿಜಿ ಅವರ ಮಾತೃಭಾಷೆ ಕನ್ನಡವಲ್ಲ. ವರಕವಿ ಬೇಂದ್ರೆಯವರ ಮಾತೃ ಭಾಷೆ ಮರಾಠಿ, ನಾ.ಕಸ್ತೂರಿ ಅವರದ್ದು ಮಾತೃಭಾಷೆ ಮಲೆಯಾಳಂ, ಕನ್ನಡಕ್ಕೆ ಅಪಾರ ಕೊಡುಗೆ ನೀಡಿದ ಮಾರ್ಕ್ ಕಬ್ಬನ್ ಅವರು ಕನ್ನಡಿಗರಲ್ಲ, ಕನ್ನಡಕ್ಕೆ ನಿಘಂಟು ನೀಡಿದ ಫರ್ಡಿನ್ಯಾಂಡ್ ಕಿಟೆಲ್ ಮಾತೃ ಭಾಷೆ ಜರ್ಮನ್. ಇವರೆಲ್ಲಾ ಕನ್ನಡದಲ್ಲಿ ಇರುವ ಶಕ್ತಿಯನ್ನು ಕಂಡುಕೊಂಡಿದ್ದರು. ಕನ್ನಡಕ್ಕೆ ದೇವರನ್ನು ಒಲಿಸುವ ಶಕ್ತಿ ಇದೆ. ಮಂತ್ರಾಲಯ ರಾಘವೇಂದ್ರ ಸ್ವಾಮಿಗಳು ಉಡುಪಿಯ ಕೃಷ್ಣನಿಗೆ 'ಇಂದು ಎನಗೆ ಗೋವಿಂದ ನಿನ್ನಯ ಪಾದಾರವಿಂದವ, ತೋರೋ ಮುಕುಂದನೆ' ಎಂದು ಕನ್ನಡದಲ್ಲಿ ಹಾಡಿದಾಗ ಶ್ರೀಕೃಷ್ಣ ಪ್ರತ್ಯಕ್ಷನಾದ. ಅದೇ ರೀತಿ ಭಕ್ತ ಕನಕದಾಸರು ಅದೇ ಉಡುಪಿಯಲ್ಲಿ 'ಬಾಗಿಲನು ತೆರೆದು ಸೇವೆಯನು ಕೊಡೋ ಹರಿಯೇ' ಎಂದು ಹಾಡಿದಾಗ ಶ್ರೀಕೃಷ್ಣ ದಿಕ್ಕನ್ನು ಬದಲಿಸಿ ಪ್ರತ್ಯಕ್ಷನಾದ. ಭಗವಂತನ ದರ್ಶನವನ್ನೂ ಪಡೆಯಬಲ್ಲ ಶಕ್ತಿ ನಮ್ಮ ಕನ್ನಡಕ್ಕಿದೆ ಎಂದು ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಕರ್ನಾಟಕ ಏಕೀಕರಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಕೊಡುಗೆ ಈ ವಿಷಯದ ಕುರಿತು ಮಾತನಾಡಿದ ಹಿರಿಯ ಇತಿಹಾಸ ತಜ್ಞ ಡಾ. ಎಚ್.ಎಸ್.ಗೋಪಾಲರಾವ್ ಅವರು ಮಾತನಾಡಿ, ಹರಿದು ಹಂಚಿ ಹೋಗಿದ್ದ ಕನ್ನಡನಾಡನ್ನು ಒಂದು ಗೂಡಿಸುವ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಸಾಕಷ್ಟು ಕೊಡುಗೆ ನೀಡಿದೆ. ಪ್ರತಿ ಕನ್ನಡ ಸಾಹಿತ್ಯ ಸಮ್ಮೇಳನಗಳೂ ಏಕೀಕರಣದ ಕಹಳೆಯನ್ನು ಊದುತ್ತಲೇ ಬಂದವು. ಕನ್ನಡಿಗರನ್ನು ಒಟ್ಟುಗೂಡಿಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಬಹಳ ಮುಖ್ಯ ಪಾತ್ರವನ್ನು ವಹಿಸಿದೆ. ಆದರೂ ಏಕೀಕರಣದ ಪೂರ್ಣ ಉದ್ದೇಶ ಇನ್ನೂ ಈಡೇರಿಲ್ಲ. ಅಚ್ಚ ಕನ್ನಡ ಪ್ರದೇಶಗಳಾದ ಕಾಸರಗೋಡು, ಸೊಲ್ಲಾಪುರ, ಅಕ್ಕಲಕೋಟೆ ಹಲವು ಭಾಗಗಳು ಇನ್ನೂ ಕರ್ನಾಟಕದಿಂದ ಹೊರಗೆ ಉಳಿದಿವೆ. ಇವನ್ನು ಸೇರಿಸಿ ಸಮಗ್ರ ಕರ್ನಾಟಕ ರೂಪುಗೊಳ್ಳುವಲ್ಲಿ ನಾಡೋಜ ಡಾ. ಮಹೇಶ ಜೋಶಿಯವರ ಕ್ರಿಯಾಶೀಲ ನಾಯಕತ್ವದ ಕನ್ನಡ ಸಾಹಿತ್ಯ ಪರಿಷತ್ತು ಮುಖ್ಯ ಪಾತ್ರ ವಹಿಸಲಿ ಎಂದು ಆಶಿಸಿದರು.

ಕನ್ನಡ ಸಾಹಿತ್ಯ ಪರಿಷತ್ತು ಜನಸಾಮಾನ್ಯರ ಪರಿಷತ್ತನ್ನಾಗಿಸುವ ಹಿನ್ನೆಲೆಯಲ್ಲಿ ತಳಮಟ್ಟದ ಕನ್ನಡದ ಕಾರ್ಯಕರ್ತರನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಪರಿಷತ್ತು ಮಾಡುತ್ತಲೇ ಬಂದಿದೆ. ಈ ಹಿನ್ನೆಲೆಯಲ್ಲಿ ಕನ್ನಡ ಹೋರಾಟಗಾರ ಹಾಗೂ ಕನ್ನಡ ಪರಿಚಾರಕರಾದ ಶ್ರೀ ಗಾರೆ ಮಹದೇವ ಅವರನ್ನು ಇದೇ ಕಾರ್ಯಕ್ರಮದಲ್ಲಿ ಗೌರವಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ. ನೇ.ಭ ರಾಮಲಿಂಗ ಶೆಟ್ಟಿ ಅವರು ಸ್ವಾಗತಿಸಿದರು, ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಮ್. ಪಟೇಲ್‌ಪಾಂಡು ಅವರು ವಂದಿಸಿದರು. ಗೌರವ ಕಾರ್ಯದರ್ಶಿಗಳಾದ ಶ್ರೀ ಕೆ. ಮಹಾಲಿಂಗಯ್ಯ ಅವರು ಕಾರ್ಯಕ್ರಮ ನಿರ್ವಹಿಸಿದರು.

# ೮೬ನೇ ಕನ್ನಡ ಸಾಹಿತ್ಯ ಸಮ್ಮೇಳನದ ಗೋಷ್ಠಿಗಳ ವಿಷಯ ರಚನೆ ಮತ್ತು ಸಂಪನ್ಮೂಲ ವ್ಯಕ್ತಿಗಳ ಆಯ್ಕೆ ಮೊದಲ ಸಭೆ




*ಹಾವೇರಿಯಲ್ಲಿ ನಡೆಯಲಿರುವ ೮೬ನೇ ಕನ್ನಡ ಸಾಹಿತ್ಯ ಸಮ್ಮೇಳನದ ಗೋಷ್ಠಿಗಳ ವಿಷಯ ರಚನೆ ಮತ್ತು ಸಂಪನ್ಮೂಲ ವ್ಯಕ್ತಿಗಳ ಆಯ್ಕೆ ಸಮಿತಿಯ ಸಭೆಯು ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.*

**ಬೆಂಗಳೂರು:** ಹಾವೇರಿಯಲ್ಲಿ ನವಂಬರ್ ತಿಂಗಳ ೧೧, ೧೨ ಮತ್ತು ೧೩ರಂದು ನಡೆಯಲಿರುವ ೮೬ನೇ ಕನ್ನಡ ಸಾಹಿತ್ಯ ಸಮ್ಮೇಳನದ ಗೋಷ್ಠಿಗಳ ವಿಷಯ ರಚನೆ ಮತ್ತು ಸಂಪನ್ಮೂಲ ವ್ಯಕ್ತಿಗಳ ಆಯ್ಕೆ ಸಮಿತಿಯ ಸಭೆ ಇಂದು ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ ಗಣ್ಯರಾದ ಡಾ. ಪ್ರಧಾನ ಗುರುದತ್ತ, ಶ್ರೀ ಎಸ್.ಬಿ. ರಂಗನಾಥ, ಡಾ. ಶುಭಚಂದ್ರ, ಶ್ರೀಮತಿ ಪೂರ್ಣಿಮಾ ಸುರೇಶ, ಡಾ. ಇಕ್ಬಾಲ್ ಅಹಮದ್, ಶ್ರೀ ಡ್ಯಾನಿ ಪಿರೇರಾ, ನಿವೃತ್ತ ಜಿಲ್ಲಾ ನ್ಯಾಯಾಧೀಶ ಶ್ರೀ ಬಿ. ಶಿವಲಿಂಗೇಗೌಡ, ಡಾ. ಶಿವಾನಂದ ಕೆಳಗಿನಮನಿ, ಡಾ. ನಾ. ದಾಮೋದರ ಶೆಟ್ಟಿ, ಪ್ರೊ. ಅಶ್ವತ್ಥನಾರಾಯಣ, ಡಾ. ಬಿ.ಕೆ. ರವಿ, ಡಾ. ಪದ್ಮಿನಿ ನಾಗರಾಜು, ಡಾ. ತಲಕಾಡು ಚಿಕ್ಕರಂಗೇಗೌಡ, ಶ್ರೀ ಸತೀಶ್ ಕುಲಕರ್ಣಿ, ಶ್ರೀಮತಿ ಶೋಭಾ ಎಚ್.ಜಿ., ಶ್ರೀಮತಿ ವಾಣಿ ನಾಯ್ಡು, ಕನ್ನಡ ವಿವಿ ಕುಲಪತಿಗಳಾದ ಪ್ರೊ. ಸ.ಚಿ. ರಮೇಶ, ಜಾನಪದ ವಿವಿ ಕುಲಪತಿಗಳಾದ ಪ್ರೊ. ಟಿ.ಎಂ. ಭಾಸ್ಕರ, ಸಂಗೀತ ವಿವಿ ಕುಲಪತಿಗಳಾದ ಪ್ರೊ. ನಾಗೇಶ ಬೆಟ್ಟಕೋಟೆ, ಮಹಿಳಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ.ಕೆ. ತುಳಸಿಮಾಲಾ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ಶ್ರೀ ನೇ.ಭ. ರಾಮಲಿಂಗ ಶೆಟ್ಟಿ, ಕೆ. ಮಹಾಲಿಂಗಯ್ಯ, ಗೌರವ ಕೋಶಾಧ್ಯಕ್ಷರಾದ ಶ್ರೀ ಬಿ.ಎಂ. ಪಟೇಲ್‌ಪಾಂಡು, ಹಾವೇರಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶ್ರೀ ಲಿಂಗಯ್ಯ ಹಿರೇಮಠ ಅವರು ಸಭೆಯಲ್ಲಿ ಭಾಗವಹಿಸಿದ್ದರು.

೮೬ನೇ ಕನ್ನಡ ಸಾಹಿತ್ಯ ಸಮ್ಮೇಳನದ ಗೋಷ್ಠಿಗಳ ವಿಷಯ ರಚನೆ ಮತ್ತು ಸಂಪನ್ಮೂಲ ವ್ಯಕ್ತಿಗಳ ಆಯ್ಕೆ ಸಮಿತಿಯ ಮೊದಲ ಸಭೆ ಇದಾಗಿದ್ದು, ಸಮ್ಮೇಳನದಲ್ಲಿ ಹಮ್ಮಿಕೊಳ್ಳಬೇಕಿದ್ದ ಗೋಷ್ಠಿಗಳ ವಿಷಯ ಮತ್ತು ಸಂಪನ್ಮೂಲ ವ್ಯಕ್ತಿಗಳ ಆಯ್ಕೆ ಕುರಿತು ವಿವರವಾದ ಚರ್ಚೆ ನಡೆಯಿತು.

ಹಾವೇರಿಯು ಕನಕ-ಸರ್ವಜ್ಞ-ಶರೀಫರ ಪುಣ್ಯಭೂಮಿಯಾಗಿರುವ ಹಿನ್ನೆಲೆಯಲ್ಲಿ ಅವರ ಕುರಿತ ವಿಶೇಷ ಗೋಷ್ಠಿಯೊಂದಿಗೆ ಸಮ್ಮೇಳನ ಆರಂಭ ಮಾಡಲು ತೀರ್ಮಾನ ಕೈಗೊಳ್ಳಲಾಯಿತು. ಇದರೊಂದಿಗೆ ಸ್ವಾತಂತ್ರ್ಯ ಹೋರಾಟದಲ್ಲಿ ಹಾವೇರಿಯ ಪಾತ್ರ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಕನ್ನಡ ಸಾಹಿತ್ಯದ ಪಾತ್ರ, ಹೈದರಾಬಾದ್ ಕರ್ನಾಟಕದ ವಿಮೋಚನಾ ಹೋರಾಟ ನಡೆದ ದಾರಿ, ಗಡಿ ಕರ್ನಾಟಕ ಸಮಸ್ಯೆಗಳು ಮತ್ತು ಪರಿಹಾರ, ಅನುವಾದ ಸಾಹಿತ್ಯ- ಇದರಲ್ಲಿ ಕನ್ನಡ ಭಾಷೆಯಿಂದ ಇತರ ಭಾಷೆ ಹಾಗೂ ಇತರ ಭಾಷೆಗಳಿಂದ ಕನ್ನಡಕ್ಕೆ ಕೊಡುಗೆ, ಆರೋಗ್ಯ, ಜಾನಪದ ವೈವಿಧ್ಯ, ಕೃಷಿ, ಮಹಿಳೆ, ನೈಸರ್ಗಿಕ ವಿಪತ್ತು, ಕವಿಗೋಷ್ಠಿ, ಸನ್ಮಾನ, ಸಮ್ಮೇಳನಾಧ್ಯಕ್ಷರೊಂದಿಗೆ ಸಂವಾದ, ಹಾವೇರಿ ಜಿಲ್ಲಾ ದರ್ಶನ, ಕನ್ನಡದ ಅಸ್ಮಿತೆಯ ಸವಾಲುಗಳು, ಮಾಧ್ಯಮ ಮತ್ತು ಹೊಸ ಆವಿಷ್ಕಾರಗಳು, ಕರೋನಾ ತಂದ ಆವಿಷ್ಕಾರ, ರಾಷ್ಟ್ರೀಯ ಶಿಕ್ಷಣ ನೀತಿಯ ಅರಿವು ಮತ್ತು ಅನುಷ್ಠಾನ, ಕನ್ನಡ ಸಾಹಿತ್ಯಕ್ಕೆ ಯುವಸ್ಪಂದನ, ನಾಡಿನ ಸಾಕ್ಷಿಪ್ರಜ್ಞೆಯ ಸಂಸ್ಥೆಗಳು ಸೇರಿದಂತೆ ಹಲವು ವಿಷಯಗಳನ್ನು ಗೋಷ್ಠಿಯಲ್ಲಿ ಸೇರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ನಾಡಿನ ಎಲ್ಲ ಪ್ರದೇಶ, ಸಾಮಾಜಿಕ ನ್ಯಾಯ, ಮಹಿಳಾ ಮತ್ತು ಯುವಕರಿಗೆ ಪ್ರಾತಿನಿಧ್ಯ ಸೇರಿದಂತೆ ಸೂಕ್ತ ವಿಷಯ ತಜ್ಞರನ್ನು ಸಂಪನ್ಮೂಲ ವ್ಯಕ್ತಿಗಳಾಗಿ ಆಹ್ವಾನಿಸಲು ಸಭೆಯಲ್ಲಿ ತಿರ್ಮಾನಿಸಲಾಯಿತು. ಸಮ್ಮೇಳನದ ಗೋಷ್ಠಿಗಳ ಮಹತ್ವ ಹೆಚ್ಚಿಸಲು ಪ್ರಧಾನ ವೇದಿಕೆಯ ಜೊತೆ ಸಮಾನಾಂತರ ವೇದಿಕೆಯನ್ನದೆ ಮೂರೂ ವೇದಿಕೆಗಳಿಗೂ ಸಮಾನ ಮಹತ್ವ ನೀಡುವ ಹಿನ್ನೆಲೆಯಲ್ಲಿ ವೇದಿಕೆ-೧, ವೇದಿಕೆ-೨ ಮತ್ತು ವೇದಿಕೆ-೩ ಎಂದು ಹೆಸರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಾಹಿತ್ಯ, ಪರಂಪರೆ, ಸಂಸ್ಕೃತಿ, ಶೈಕ್ಷಣಿಕ, ಆರೋಗ್ಯ, ಜಾನಪದ, ಕನ್ನಡ ಶಾಲೆಗಳ ಉಳಿವು, ಕನ್ನಡ ಅನ್ನದ ಭಾಷೆಯಾಗುವ ನಿಟ್ಟಿನಲ್ಲಿ ಜನಮುಖಿಯಾಗಲು ಸಾಧ್ಯವಿರುವ ಎಲ್ಲ ವಿಷಯಗಳನ್ನು ಸಮ್ಮೇಳನದ ಮೂರು ದಿನಗಳಲ್ಲಿ ಅರ್ಥಪೂರ್ಣವಾಗಿ ಅಳವಡಿಸಿಕೊಳ್ಳಲು ನಿರ್ಣಯಿಸಲಾಯಿತು.

# ಕನ್ನಡ ಸಾಹಿತ್ಯ ಪರಿಷತ್ತಿನ ಆ್ಯಪ್ ಲೋಕಾರ್ಪಣೆ



***ಸಿಎಮ್ ಗೃಹಕಚೇರಿ ಕೃಷ್ಣಾದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ  ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿದ ಮೊಬೈಲ್ ಅಪ್ಲಿಕೇಶನ್‌ನನ್ನು ಮಾನ್ಯ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಲೋಕಾರ್ಪಣೆ ಮಾಡಿ ಮಾತನಾಡಿದರು.***

**ಬೆಂಗಳೂರು:** ಕನ್ನಡ ಸಾಹಿತ್ಯ ಪರಿಷತ್ತು ಹೊಸ ರೂಪ ಪಡೆಯುತ್ತಿದೆ. ಕನ್ನಡಿಗರ ಹೆಮ್ಮೆಯ ಕನ್ನಡ ಸಾಹಿತ್ಯ ಪರಿಷತ್ತಿನೊಂದಿಗೆ ಸರಕಾರ ಜೊತೆಯಾಗಿ ಕನ್ನಡ ಕಟ್ಟುವ ಕಾರ್ಯವನ್ನು ನಡೆಸಲಿದೆ. ಸಾಹಿತ್ಯದ ಒಡನಾಟ ಇಲ್ಲದವರಿಗೂ ಸಾಹಿತ್ಯದಲ್ಲಿ ಆಸಕ್ತಿ ಮೂಡಿಸುವ ಕಾರ್ಯ ಪರಿಷತ್ತು ಮಾಡಬೇಕಿದೆ ಎಂದು ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ  ತಿಳಿಸಿದರು.

ಅವರು ೪.೮.೨೦೨೨ರಂದು ಮುಖ್ಯಮಂತ್ರಿ ಗೃಹಕಚೇರಿ ಕೃಷ್ಣಾದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ  ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿದ ಮೊಬೈಲ್ ಅಪ್ಲಿಕೇಶನ್ ಲೋಕಾರ್ಪಣೆ ಮಾಡಿ ಮಾತನಾಡಿದರು. ನಾಡೋಜ ಡಾ. ಮಹೇಶ ಜೋಶಿ ಅವರ ನೇತೃತ್ವದಲ್ಲಿ ಪರಿಷತ್ತು ಸಾಕಷ್ಟು ಬದಲಾವಣೆಗಳನ್ನು ಕಾಣುತ್ತಿದೆ. ಅದಕ್ಕೆ ಕಾರಣ ಅವರ ಕ್ರಿಯಾಶೀಲತೆ ಹಾಗೂ ಕನ್ನಡ ಕಟ್ಟಿ ಬೆಳೆಸುವ ಛಲವೇ ಕಾರಣ. ಪ್ರಸ್ತುತ ಕನ್ನಡಿಗರಿಗೆ ಕನ್ನಡ ಸಾಹಿತ್ಯ ಪರಿಷತ್ತಿನ ಮೇಲೆ ಅಪಾರವಾದ ನಿರೀಕ್ಷೆಯಿದೆ. ಆ ಎಲ್ಲಾ ನಿರೀಕ್ಷೆಗಳನ್ನು ಮಹೇಶ ಜೋಶಿ ಅವರ ಮಾರ್ಗದರ್ಶನದಲ್ಲಿ ಅವರ ನೇತೃತ್ವದ ತಂಡ ಕೆಲಸ ಮಾಡಲಿದೆ ಎನ್ನುವ ವಿಶ್ವಾಸ ಸರಕಾರಕ್ಕೆ ಇದೆ.

ಕನ್ನಡ ಭಾಷೆಗೆ ದೇಶದಲ್ಲಿ ಅಗ್ರಸ್ಥಾನವಿದೆ, ಅದಕ್ಕೆ ತಕ್ಕಂತೆ ಆಯಾ ಕಾಲಘಟ್ಟದಲ್ಲಿ ಸವಾಲುಗಳು ಬಂದೇ ಬರುತ್ತವೆ. ಕನ್ನಡ ಉಳಿಸಿ ಎಲ್ಲ ರಂಗದಲ್ಲಿ ಬೆಳೆಸುವುದಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನೊಂದಿಗೆ ಸರಕಾರವೂ ಜೊತೆಯಾಗಿ ಮುನ್ನಡೆಯಲಿದೆ. ಮುಂದಿನ ದಿನಗಳಲ್ಲಿ ಉತ್ತಮ ಸಾಹಿತ್ಯ ಕೃತಿಗಳು ಪ್ರಕಟವಾಗಬೇಕಿದೆ. ಎಲ್ಲಾ ಕಾಲದಲ್ಲಿ ನೆನಪಿಸಿ ಕೊಳ್ಳುವಂತಹ ಸಮಾಜಮುಖಿ ಸಾಹಿತ್ಯ ರಚನೆಯಾಗಬೇಕಿದೆ. ಸ್ಫೂರ್ತಿದಾಯಕ ಕಾದಂಬರಿಗಳು ೮೦ರ ದಶಕದ ನಂತರ ಅಷ್ಟಾಗಿ ಪ್ರಕಟವಾಗಿಲ್ಲ. ಕನ್ನಡ ಸಾಹಿತ್ಯದ ಪ್ರಕಾರಗಳು ರಾಷ್ಟ್ರಮಟ್ಟದಲ್ಲಿ ಚರ್ಚೆಯಾಗುವ ಮಟ್ಟದಲ್ಲಿ ಬೆಳೆಯಬೇಕಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.

ಸಾಹಿತ್ಯ ಪರಿಷತ್ತಿನೊಂದಿಗೆ ಯಾವುದೇ ಪ್ರತಿಷ್ಠೆ ಇಲ್ಲದೆ ಕನ್ನಡ ಕಟ್ಟುವಲ್ಲಿ ರಾಜ್ಯ ಸರಕಾರ ಜೊತೆಯಾಗಿ ಇರಲಿದೆ. ಹಾವೇರಿಯಲ್ಲಿ ಹಮ್ಮಿಕೊಂಡ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅಭೂತಪೂರ್ವವಾಗಿ ನಡೆಸಲಾಗುವುದು. ಇದೇ ಮೊದಲ ಬಾರಿಗೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಿಗೆ ರಾಜ್ಯ ಸಚಿವ ಸ್ಥಾನಮಾನ ನೀಡಿ ಸರಕಾರ ಗೌರವಿಸಿದೆ ಎಂದು ಮುಖ್ಯಮಂತ್ರಿ ಅವರು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಮಾತನಾಡಿ,  "ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿಸುವ" ನಿಟ್ಟಿನಲ್ಲಿ ಪರಿಷತ್ತನ್ನು ಮುನ್ನಡೆಸಲಾಗುತ್ತಿದೆ. ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಜಾನಪದ ಇವುಗಳ ರಕ್ಷಣೆ, ಪ್ರಸಾರ ಮತ್ತು ಅಭಿವೃದ್ಧಿಯ ಮೂಲ ಧ್ಯೇಯೋದ್ದೇಶಗಳೊಂದಿಗೆ **ಕನ್ನಡ–ಕನ್ನಡಿಗ–ಕರ್ನಾಟಕ**ದ ಹಿತರಕ್ಷಣೆ ಕಾಪಾಡುವ ಹಾಗೂ ಅಭಿವೃದ್ಧಿ ಪಡಿಸುವ ಜವಾಬ್ದಾರಿಯನ್ನು ಹೊತ್ತು, ಪರಿಷತ್ತಿನ ನಿಯಮ–ನಿಬಂಧನೆಗಳಿಗೆ ಆಮೂಲಾಗ್ರ ಬದಲಾವಣೆ ತರುವ ಮೂಲಕ ಕ್ರಾಂತಿಕಾರಿ ಹೆಜ್ಜೆಯನ್ನು  ಇರಿಸಲಾಗಿದೆ.

ವಿಶ್ವದಾದ್ಯಂತ ಕನ್ನಡವನ್ನು ಒಗ್ಗೂಡಿಸಲು ಹೊರರಾಜ್ಯ, ಕೇಂದ್ರಾಡಳಿತ ಪ್ರದೇಶ ಮತ್ತು ಹೊರದೇಶ ಘಟಕಗಳನ್ನು ಸ್ಥಾಪಿಸುವ ದೃಷ್ಟಿಯಿಂದಲೂ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಪರಿಷತ್ತಿಗೆ ಪ್ರಸ್ತುತ ಮುಂದಿನ ಐದು ವರ್ಷಗಳ ಈ ಅವಧಿಯಲ್ಲಿ ಒಂದು ಕೋಟಿ ಸದಸ್ಯತ್ವವನ್ನು ಹೊಂದುವ ದೃಷ್ಟಿಯಿಂದ ಶ್ರೀಸಾಮಾನ್ಯನೂ ಸಹ ಸದಸ್ಯತ್ವ ಪಡೆಯಲು ಅನುಕೂಲವಾಗುವಂತೆ ರೂ.೫೦೦–೦೦ ಗಳಿದ್ದ ಸದಸ್ಯತ್ವ ಶುಲ್ಕವನ್ನು ರೂ. ೨೫೦–೦೦ ಗಳಿಗೆ ಇಳಿಸಲಾಗಿದೆ .. ಇನ್ನು ಮುಂದೆ https://play.google.com/store/apps/details?id=com.knobly.kasapa ವಿಳಾಸದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಪ್ಲಿಕೇಶನ್ ಸಾರ್ವಜನಿಕರಿಗೆ ಸಿಗಲಿದೆ ಎಂದರು.

ಈ ಸಂದರ್ಭದಲ್ಲಿ ಸಚಿವರಾದ ಡಾ. ಸಿ. ಎನ್. ಅಶ್ವತ್ಥನಾರಾಯಣ, ವಿ.ಸೋಮಣ್ಣ, ಶಾಸಕರಾದ ನೆಹರೂ ಓಲೆಕಾರ,  ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ, ಕಾರ್ಯದರ್ಶಿಗಳಾದ ಎಂ. ಎಸ್. ಶ್ರೀಕರ್, ಜಯರಾಮ ಮತ್ತು ಪರಿಷತ್ತಿನ  ಗೌರವ ಕೋಶಾಧ್ಯಕ್ಷರಾದ  ಬಿ.ಎಂ. ಪಟೇಲ್ ಪಾಂಡು, ಗೌರವ ಕಾರ್ಯದರ್ಶಿ ನೇ.ಭ. ರಾಮಲಿಂಗಶೆಟ್ಟಿಯವರು ಉಪಸ್ಥಿತರಿದ್ದರು.

# ಇಳಿದು ಬಾ ತಾಯಿ ಇಳಿದು ಬಾ.. ಬೇಂದ್ರೆ ನಮನ

## 'ದ.ರಾ. ಬೇಂದ್ರೆ ಅವರು ನೆನಪು ಕನ್ನಡಕ್ಕೆ, ಕನ್ನಡ ನಾಡಿಗೆ ಸದಾ ಚೇತೋಹಾರಿ'




*ಬೆಂಗಳೂರಿನ ಚಾಮರಾಜಪೇಟೆಯ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ವರಕವಿ ಡಾ. ದ.ರಾ.ಬೇಂದ್ರೆ ಅವರ ೧೨೭ನೆಯ ಜನ್ಮದಿನದ ಹಿನ್ನೆಲೆಯಲ್ಲಿ ಇಳಿದು ಬಾ ತಾಯಿ ಇಳಿದು ಬಾ.. ಬೇಂದ್ರೆ ನಮನ ವಿಶೇಷ ಕಾರ್ಯಕ್ರಮದಲ್ಲಿ ಬೇಂದ್ರೆ ಅವರ ಭಾವಚಿತ್ರಕ್ಕೆ ಪುಷ್ಪನಮನ*

**ಬೆಂಗಳೂರು:** ಜಗದ ಕವಿ ಕುವೆಂಪು ಹಾಗೂ ವರಕವಿ ಬೇಂದ್ರೆ ಇವರಿಬ್ಬರು ಕನ್ನಡ ಸಾಹಿತ್ಯದ ಎರಡು ಕಣ್ಣುಗಳು. ಕನ್ನಡಕ್ಕೆ ಅಪಾರವಾದ ಕೊಡುಗೆಗಳನ್ನು ನೀಡಿದ ಬೇಂದ್ರೆ ಅವರ ೧೨೭ನೇ ಜನ್ಮದಿನದಂದು ಅವರ ನೆನಪು ಮಾಡಿಕೊಳ್ಳುವುದರ ಜೊತೆಗೆ ಯಾವುದೇ ಸಂದರ್ಭದಲ್ಲಿ ಮನಸ್ಸಿನಲ್ಲಿ ಯಾವುದೇ ತರಹದ ಬೇಸರವಾದಾಗ ನೆನಪಾಗುವುದೇ ಬೇಂದ್ರೆ ಅವರು ಬರೆದ ಸಾಹಿತ್ಯ ಎಂದು ಬೇಂದ್ರೆಯವರ ಜೊತೆಗಿನ ತಮ್ಮ ಒಡನಾಟದ ನೆನಪುಗಳನ್ನು ಹಂಚಿಕೊಂಡ ನಾಡೋಜ ಡಾ. ಮಹೇಶ ಜೋಶಿಯವರು ನಿತ್ಯವೂ ನೂತನವಾಗಿರುವ ಸಾಹಿತ್ಯವನ್ನು ನೀಡಿ ಹೋದ ದತ್ತಾತ್ರೇಯ ರಾಮಚಂದ್ರ ಬೇಂದ್ರೆಯವರ ನೆನಪು ಕನ್ನಡಕ್ಕೆ, ಕನ್ನಡ ನಾಡಿಗೆ ಸದಾ ಚೇತೋಹಾರಿ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಬಣ್ಣಿಸಿದರು.

ಬೆಂಗಳೂರಿನ ಚಾಮರಾಜಪೇಟೆಯ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ವರಕವಿ ಡಾ. ದ.ರಾ.ಬೇಂದ್ರೆ ಅವರ ೧೨೭ನೆಯ ಜನ್ಮದಿನದ ಹಿನ್ನೆಲೆಯಲ್ಲಿ "ಇಳಿದು ಬಾ ತಾಯಿ ಇಳಿದು ಬಾ.. ಬೇಂದ್ರೆ ನಮನ" ವಿಶೇಷ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಕನ್ನಡದ ವರಕವಿ ಎಂದೇ ಖ್ಯಾತರಾಗಿರುವ ಬೇಂದ್ರೆಯವರು ೧೮೯೬ನೆಯ ಇಸವಿ ಜನವರಿ ೩೧ ರಂದು ಜನಿಸಿದರು. ಅವರು ಜನ್ಮಜಾತ ಕವಿಯಾಗಿದ್ದರು. ಅವರ ಮಾತೇ ಕಾವ್ಯದಂತಿರುತ್ತಿತ್ತು. ಕಾಲೇಜಿನಲ್ಲಿ ಓದುತ್ತಿದ್ದಾಗಲೇ ಕವಿತೆಗಳನ್ನು ಬರೆದರು. ೧೯೧೮ರಲ್ಲಿ ಅವರ ಮೊದಲ ಕವನ "ಪ್ರಭಾತ" ಎಂಬ ಪತ್ರಿಕೆಯಲ್ಲಿ ಪ್ರಕಟವಾಯಿತು. ಅಲ್ಲಿಂದಾಚೆಗೆ ಅವರು ಕಾವ್ಯ ರಚನೆ ಮಾಡುತ್ತಲೇ ಬಂದರು. 'ಗರಿ', 'ಕಾಮಕಸ್ತೂರಿ', 'ಸೂರ್ಯಪಾನ', 'ನಾದಲೀಲೆ', 'ನಾಕುತಂತಿ' ಮೊದಲಾದ ಕವನ ಸಂಕಲನಗಳನ್ನು ಪ್ರಕಟಿಸಿದರು. ಕವಿತೆಗಳನ್ನಲ್ಲದೆ ನಾಟಕಗಳು, ಸಂಶೋಧನಾತ್ಮಕ ಲೇಖನಗಳು, ವಿಮರ್ಶೆಗಳನ್ನು ಬೇಂದ್ರೆ ಬರೆದು ಕನ್ನಡ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದವರು ಎಂದು ನಾಡೋಜ ಡಾ. ಮಹೇಶ ಜೋಶಿ ನೆನಪಿಸಿಕೊಂಡರು.

೧೯೬೮ರಲ್ಲಿ ಭಾರತ ಸರ್ಕಾರದಿಂದ 'ಪದ್ಮಶ್ರೀ' ಪ್ರಶಸ್ತಿ, ೧೯೭೩ರಲ್ಲಿ 'ನಾಕುತಂತಿ' ಕೃತಿಗೆ ಜ್ಞಾನಪೀಠ ಪ್ರಶಸ್ತಿ, ಕಾಶಿ ವಿದ್ಯಾಪೀಠ, ವಾರಣಾಸಿ, ಮೈಸೂರು ಹಾಗೂ ಕರ್ನಾಟಕ ವಿಶ್ವವಿದ್ಯಾಲಯಗಳ ಗೌರವ ಡಾಕ್ಟರೇಟ್, ಕೇಂದ್ರ ಸಾಹಿತ್ಯ ಅಕಾಡೆಮಿಯ ಫೆಲೋಷಿಪ್ ಹೀಗೆ ಬೇಂದ್ರೆಯವರಿಗೆ ದೊರೆತ ಗೌರವಗಳು ಅಸಂಖ್ಯ. ಆದರೆ ಅದೇ ರೀತಿಯಲ್ಲಿ ಬಡತನವನ್ನು ಅನುಭವಿಸಿದ ಅವರ ಪ್ರತಿ ಮಾತುಗಳು ಮೇಲ್ನೋಟಕ್ಕೆ ಹಾಸ್ಯ ಎಂಬಂತೆ ಕಂಡರೂ ಪ್ರತಿ ಕ್ಷಣದಲ್ಲಿಯೂ ಜೀವನದ ಪಾಠವನ್ನು ಹೇಳುವಂತಿರುತ್ತಿದ್ದವು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

'ಬೇಂದ್ರೆಯವರ ಸೃಜನಶೀಲತೆಯ ವೈಶಿಷ್ಟ್ಯ' ಕುರಿತು ಬೆಂಗಳೂರು ವಿ.ವಿ. ಕನ್ನಡ ಅಧ್ಯಯನ ಕೇಂದ್ರದ ನಿಕಟಪೂರ್ವ ನಿರ್ದೇಶಕರಾದ ಡಾ. ಬಸವರಾಜ ಕಲ್ಗುಡಿ ಅವರು ಮಾತನಾಡಿದರು. ಕನ್ನಡಕ್ಕೆ ಸಾಹಿತ್ಯಕ ಹಾಗೂ ಸಂಸ್ಕೃತಿಯ ಜೀವಂತಿಕೆ ನೀಡಿದ ಅಪರೂಪದ ಕವಿ ಅವರು. ಬೇಂದ್ರೆ ಅವರು ಸಂಖ್ಯಾಶಾಸ್ತ್ರವನ್ನು ಇಟ್ಟುಕೊಂಡು ಕವನಗಳನ್ನು ಬರೆದರು. ಅವರು ಬರೆದ 'ನಾಲ್ಕು ತಂತಿ' ಎನ್ನುವ ಕವನದ ಆತ್ಯಂತಿಕ ಅರ್ಥವನ್ನು ಇನ್ನೂ ಸರಿಯಾಗಿ ವಿಮರ್ಶಕರು ಅರ್ಥಮಾಡಿಕೊಳ್ಳುವುದಕ್ಕೆ ಕಷ್ಟವಾಗುತ್ತಿದೆ. ಸಮರಸದ ರಸಭಾವವನ್ನು ಸಂಸ್ಕೃತಿಯೊಂದಿಗೆ ಬೆರೆತ ನಮ್ಮ ಭಾಷೆಗೆ ತಾಯ್ತನದ ಗುಣವಿದೆ ಎಂದು ಬಣ್ಣಿಸಿದರು.

ಬೇಂದ್ರೆ ಕಾವ್ಯದಲ್ಲಿ ಒಲವು ಅಂತಃಕರಣ ಕುರಿತು ಹಿರಿಯ ಕವಯತ್ರಿ ಪ್ರೊ. ಎಂ.ಆರ್. ಕಮಲಾ ಅವರು ಮಾತನಾಡಿ, "ಬೇಂದ್ರೆಯವರು ಹೇಳಿದಂತೆ ಅಂತಃಕರಣ ಅಂದರೆ ಮೈ ಮ್ಯಾಲಿನ ಒಡವೆನೂ ಅಲ್ಲ, ವಸ್ತುವೂ ಅಲ್ಲ, ಅದು ಒಳಗಿನ ಇಂದ್ರಿಯ, ಅದು ತಾಯಿಗೆ ಮಾತ್ರ ಅರ್ಥವಾಗುವ ಪರಿ ಎಂದು ಬಣ್ಣಿಸುತ್ತಾರೆ. ಅವರ ಬರವಣಿಗೆಯಲ್ಲಿ ಅಂತಃಕರಣ ಇರುವುದು ನಾವೆಲ್ಲಾ ಕಂಡಿದ್ದೇವೆ. ಆದರೆ ಅವರೊಳಗೆ ಇದ್ದ ಅಂತಃಕರಣದ ರೂಪವೆ ಅವರು ಬರೆದ ಕವನಗಳಲ್ಲಿ ತುಂಬು ತುಳುಕುವ ಭಾವ ಕಾಣುವುದಕ್ಕೆ ಸಾಧ್ಯವಾಗಿದೆ. 'ಒಲವು' ಎನ್ನುವ ಶಬ್ದಕ್ಕೆ ಬೇಂದ್ರೆ ಅವರು ಸಾಕಷ್ಟು ಅರ್ಥವನ್ನು ಇಟ್ಟುಕೊಂಡು ತನ್ನ ಸಾಹಿತ್ಯವನ್ನು ಕನ್ನಡಕ್ಕೆ ನೀಡಿದ ಮಹಾನ್ ಅಂತಃಕರಣವಾದಿ" ಎಂದು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ಬೇಂದ್ರೆಯವರ ಕಾವ್ಯಗಳ ಗಾಯನವನ್ನು ಶ್ರೀಮತಿ ಸ್ಮಿತಾ ಕಾರ್ತಿಕ್ ಹಾಗೂ ಅವರ ಸಂಗಡಿಗರು ಪ್ರಸ್ತುತಪಡಿಸಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶ್ರೀ ನೇ.ಭ. ರಾಮಲಿಂಗ ಶೆಟ್ಟಿ ಅವರು ಸ್ವಾಗತಿಸಿದರು. ಡಾ. ಪದ್ಮಿನಿ ನಾಗರಾಜು ಅವರು ವಂದಿಸಿದರು, ಗೌರವ ಕೋಶಾಧ್ಯಕ್ಷರಾದ ಡಾ. ಬಿ.ಎಂ.ಪಟೇಲ್ ಪಾಂಡು ಅವರು ಕಾರ್ಯಕ್ರಮ ನಿರೂಪಿಸಿದರು.

# ಕನ್ನಡ ಸಾಹಿತ್ಯ ಪರಿಷತ್ತಿನ ವಿದೇಶ ಘಟಕಗಳ ಸಲಹಾ ಸಮಿತಿ ರಚನೆ

**ಬೆಂಗಳೂರು:** ವಿದೇಶದಲ್ಲಿರುವ ಕನ್ನಡಿಗರನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರನ್ನಾಗಿಸಲು ಹಾಗೂ ಪರಿಷತ್ತಿನ ಚಟುವಟಿಕೆಗಳನ್ನು ವಿದೇಶಗಳಲ್ಲಿ ಸ್ಥಾಪಿಸುವ ಹಿನ್ನೆಲೆಯಲ್ಲಿ ಇಂದು ಪರಿಷತ್ತಿನ ಕೇಂದ್ರ ಕಚೇರಿಯಲ್ಲಿ ಮಹತ್ವದ ಸಭೆ ನಡೆಸಲಾಗಿತ್ತು. ಈ ಸಭೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ವಿದೇಶ ಘಟಕಗಳ ಸಲಹಾ ಸಮಿತಿ ರಚಿಸುವ ಮೂಲಕ ಪರಿಷತ್ತು ಹೊಸ ಶಕೆಗೆ ನಾಂದಿ ಹಾಡಿದೆ.

೨೨.೦೭.೨೦೨೨ರಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಇತಿಹಾಸದಲ್ಲಿಯೇ ಮೊದಲ ಬಾರಿಗೆ ಹೊರದೇಶಗಳಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಘಟಕಗಳನ್ನು ಸ್ಥಾಪಿಸಲು ಪೂರ್ವಭಾವಿ ಸಭೆ ನಡೆಸಲಾಗಿತ್ತು. ಪರಿಷತ್ತಿನ ಪಂಪ ಸಭಾಂಗಣದಲ್ಲಿ ಹಮ್ಮಿಕೊಂಡ ಸಭೆಯಲ್ಲಿ ೨೦ಕ್ಕೂ ಹೆಚ್ಚು ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಂಪರ್ಕ ಹೊಂದಿರುವ ಗಣ್ಯರು ಭಾಗವಹಿಸಿದ್ದರು.

೧೯೧೫ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರಿಂದ ಸ್ಥಾಪಿತವಾಗಿರುವ ಕನ್ನಡ ಸಾಹಿತ್ಯ ಪರಿಷತ್ತನ್ನು ಜನ ಸಾಮಾನ್ಯರ ಪರಿಷತ್ತನ್ನಾಗಿಸುವ ಹಿನ್ನೆಲೆಯಲ್ಲಿ ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ, ಜನಪದ ಜೊತೆಗೆ ಕನ್ನಡ–ಕನ್ನಡಿಗ–ಕರ್ನಾಟಕ ಧ್ಯೇಯೋದ್ದೇಶದೊಂದಿಗೆ ಮುನ್ನಡೆಯುತ್ತಿದೆ. ಪ್ರತಿಯೊಬ್ಬ ಕನ್ನಡಿಗನೂ ಸಾಹಿತ್ಯ ಪರಿಷತ್ತಿನ ಸದಸ್ಯರಾಗಬೇಕು ಜೊತೆಗೆ ಕೋಟಿ ಸದಸ್ಯರನ್ನೊಳಗೊಂಡ ಪರಿಷತ್ತು ಆಗಬೇಕೆಂಬ ಗುರಿಯೊಂದಿಗೆ ಪರಿಷತ್ತನ್ನು ನಾಡೋಜ ಡಾ. ಮಹೇಶ ಜೋಶಿ ಮುನ್ನಡೆಸುತ್ತಿದ್ದಾರೆ.

ಸಭೆಯಲ್ಲಿ ವಿದೇಶದಲ್ಲಿ ಇರುವ ಕನ್ನಡಿಗರನ್ನು ಸೇರಿಸಿ ಕನಿಷ್ಠ ನೂರು ಸದಸ್ಯರನ್ನು ಇರುವಲ್ಲಿ ಒಂದು ಘಟಕವನ್ನು ಸ್ಥಾಪಿಸಲು ತೀರ್ಮಾನಿಸಲಾಗಿದೆ. ಅದಕ್ಕಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ವಿದೇಶಿ ಘಟಕಗಳ ಸಲಹಾ ಸಮಿತಿಯನ್ನು ರಚಿಸಲಾಗಿದೆ. ಕನ್ನಡ ಸಾಹಿತ್ಯ ಪರಿಷತ್ತಿನ ವಿದೇಶಿ ಘಟಕಗಳ ಸಂಯೋಜ ನಾಧಿಕಾರಿಯಾಗಿ ಬೆಲ್ಜಿಯಂ ದೇಶದ ವ್ಯಾಪಾರ ಮತ್ತು ವಾಣಿಜ್ಯ ಆಯುಕ್ತರಾದ ಶ್ರೀ ಜಯಂತ್ ನಾಡಿಗೇರ್ ಅವರನ್ನು ನೇಮಿಸಲಾಗಿದೆ.

ಪರಿಷತ್ತಿನ ವಿದೇಶಿ ಘಟಕಗಳ ಸಂಯೋಜನಾಧಿಕಾರಿಯಾಗಿ ಜವಾಬ್ದಾರಿ ವಹಿಸಿಕೊಂಡ ವಿವಿಧ ದೇಶಗಳ ರಾಯಭಾರಿಯಾಗಿ ನಿವೃತ್ತರಾದ ಶ್ರೀ ಪಾರ್ಥಸಾರಥಿಯವರು ಮಾತನಾಡಿ, ಹೊರದೇಶಗಳಲ್ಲಿ ಕನ್ನಡವನ್ನು ಅಭಿವೃದ್ಧಿ ಪಡಿಸಲು ಕನ್ನಡ ಸಾಹಿತ್ಯ ಪರಿಷತ್ತು ಮುಂದೆ ಬಂದಿರುವುದು ತುಂಬಾ ಸಂತೋಷ. ಹೊರದೇಶದಲ್ಲಿರುವ ಕನ್ನಡಿಗರು ಪರಿಷತ್ತಿನಿಂದ ಏನು ನಿರೀಕ್ಷೆ ಇಟ್ಟುಕೊಂಡಿದ್ದಾರೆ ಎಂದು ತಿಳಿದುಕೊಂಡು ಮುಂದಿನ ಯೋಜನೆ ರೂಪಿಸಬೇಕು ಎಂದರು.

ಅನಿವಾಸಿ ಭಾರತೀಯರ ಸಮಿತಿಯ ಮಾಜಿ ಉಪಾಧ್ಯಕ್ಷೆ ಶ್ರೀಮತಿ ಆರತಿ ಕೃಷ್ಣ ಮಾತನಾಡಿ, ಪ್ರಪಂಚದಲ್ಲಿ ಇರುವ ಎಲ್ಲಾ ಕನ್ನಡಿಗರು ಒಂದಾಗಿ ಪರಿಷತ್ತಿನ ವ್ಯಾಪ್ತಿಯಲ್ಲಿ ಬರುವುದಕ್ಕೆ ವಿಶೇಷ ಎನ್ ಆರ್ ಐ ಪಾಲಿಸಿಯನ್ನು ಜಾರಿಗೆ ತರಬೇಕು ಎಂದರು.

ರಿಲೆವೆನ್ಸ್ ಲ್ಯಾಬ್‌ನ ಉಪಾಧ್ಯಕ್ಷ ಶ್ರೀ ರವೀಂದ್ರ ವರ್ಣ ಮಾತನಾಡಿ, ಫ್ರಾಂಕ್‌ಫರ್ಟ್, ಮಲೇಶಿಯಾ, ಇಂಡೋನೇಶಿಯಾ ಸೇರಿದಂತೆ ಕೆಲವು ದೇಶಗಳಲ್ಲಿ ಹೆಚ್ಚು ಕನ್ನಡಿಗರಿದ್ದಾರೆ. ಅಲ್ಲಿಯ ಕೆಲವರು ಕನ್ನಡ ಕಲಿತು ನಿರರ್ಗಳವಾಗಿ ಕನ್ನಡ ಮಾತನಾಡುತ್ತಾರೆ. ಒಂದು ವರ್ಷದಿಂದ ಎಷ್ಟು ಜನ ಕನ್ನಡಿಗರು ಹೊರ ದೇಶಗಳಿಗೆ ಹೋಗಿರುತ್ತಾರೆಂದು ಅರಿತುಕೊಳ್ಳುವ ಪ್ರಯತ್ನವೂ ಆಗಬೇಕಿದೆ ಎಂದು ಸಲಹೆ ನೀಡಿದರು.

ಇಂಡೊ–ಪೋರ್ಚುಗಲ್ ಸಾಹಿತ್ಯ ಪ್ರತಿಷ್ಠಾನದ ನಿರ್ದೇಶಕ ಡಾ. ಅರವಿಂದ ಯಾಳಗಿ ಮಾತನಾಡಿ, ವಿಶ್ವದಲ್ಲಿರುವ ಎಲ್ಲಾ ಕನ್ನಡಿಗರನ್ನು ಒಂದಾಗಿಸಬೇಕು. ಕನ್ನಡದ ಸಂಸ್ಕೃತಿಯನ್ನು ಎಲ್ಲೆಡೆ ಹರಡಬೇಕಿದೆ. ಕನ್ನಡ ಭಾಷೆ, ಸಂಸ್ಕೃತಿಯ ಕುರಿತು ಅನೇಕ ದಾಖಲೆಗಳು ವಿದೇಶಗಳಲ್ಲಿ ಇವೆ. ಅವುಗಳ ಮಹತ್ವ ನಮ್ಮ ಜನರಿಗೆ ತಿಳಿಸುವ ಕೆಲಸ ಆಗಬೇಕಿದೆ ಎಂದರು.

ಭಾರತ ದೇಶದ ಮಾಜಿ ರಾಯಭಾರಿ ಶ್ರೀ ಬಿ.ವಿ. ಕುಮಾರ್ ಮಾತನಾಡಿ, ವಿದೇಶಿಗಳಲ್ಲಿ ಕನ್ನಡಿಗರು ತಾವಿರುವ ಭಾಗದಲ್ಲಿ ಜಾತಿವಾರು ಸಂಘಟನೆಯನ್ನು ಮಾಡಿಕೊಂಡಿದ್ದಾರೆ. ಪ್ರತಿಯೊಬ್ಬ ವಿದೇಶಿ ಕನ್ನಡಿಗನನ್ನು ಒಂದು ಸೂರಿನಡಿಯಲ್ಲಿ ತರುವ ಕೆಲಸ ಕನ್ನಡ ಸಾಹಿತ್ಯ ಪರಿಷತ್ತು ಮಾಡಬೇಕು ಎಂದರು.

ಸಭೆಯಲ್ಲಿ ಇಕ್ಯೂಬ್ ಅಡ್ವೈಸರ್ ಶ್ರೀ ಹಾ.ವಿ.ಹರೀಶ್, ಸೋಹಮ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಸಂಜೀತ್ ಶೆಟ್ಟಿ, ಅನಿವಾಸಿ ಭಾರತೀಯರ ಸಮಿತಿಯ ಕಾರ್ಯದರ್ಶಿ ಶ್ರೀಮತಿ ಲಕ್ಷ್ಮಮ್ಮ ಪಿ., ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ ಹಾನಗಲ್, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷ ಶ್ರೀ ಬಿ.ಎಂ. ಪಟೇಲ್‌ಪಾಂಡು, ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶ್ರೀ ನೇ.ಭ. ರಾಮಲಿಂಗಶೆಟ್ಟಿ ಸೇರಿದಂತೆ ಇತರ ಗಣ್ಯರು ಸಭೆಯಲ್ಲಿ ಭಾಗವಹಿಸಿದ್ದರು.

# ವಿದೇಶದಲ್ಲಿರುವ ಕನ್ನಡಿಗರನ್ನು ಒಗ್ಗೂಡಿಸುವ ಕಾರ್ಯ ಕಸಾಪದ್ದು: ನಾಡೋಜ ಡಾ. ಮಹೇಶ ಜೋಶಿ

ಕರ್ನಾಟಕದಲ್ಲಿ ಕನ್ನಡ ಶಾಲೆಗಳು ಉಳಿಯಬೇಕಿದೆ. ಕನ್ನಡಿಗರಿಗೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗ ದೊರಕಿಸುವ ಮೂಲಕ ಕನ್ನಡವನ್ನು ಅನ್ನದ ಭಾಷೆಯನ್ನಾಗಿಸಬೇಕಿದೆ. ಕನ್ನಡಕ್ಕೆ ಜಾಗತಿಕ ಮಟ್ಟದಲ್ಲಿ ಉನ್ನತ ಸ್ಥಾನ ಸಿಗುವುದಕ್ಕೆ ಪರಿಶ್ರಮ ಪಡಬೇಕಾಗಿದೆ. ಸಭೆಯಲ್ಲಿ ಭಾಗವಹಿಸಿದ್ದ ಅನೇಕ ಗಣ್ಯರು ವಿದೇಶದಲ್ಲಿರುವ ಕನ್ನಡಿಗರನ್ನು ಒಗ್ಗೂಡಿಸಿ ಅವರಲ್ಲಿ ಇರುವ ಕನ್ನಡಾಭಿಮಾನವನ್ನು ಗೌರವಿಸುವ ಮೂಲಕ ತನ್ನ ತಾಯಿನಾಡಿನ ಮೇಲೆ ಹೆಚ್ಚಿನ ಗೌರವ ಬರುವಂತೆ ಮಾಡಲು ಕನ್ನಡ ಸಾಹಿತ್ಯ ಪರಿಷತ್ತು ಮುಂದಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಹೇಳಿದರು.

ಈಗಾಗಲೇ ಕನ್ನಡ ಸಾಹಿತ್ಯ ಪರಿಷತ್ತು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನಸಾಮಾನ್ಯರ ಪರಿಷತ್ತನ್ನಾಗಿಸುವ ನಿಟ್ಟಿನಲ್ಲಿ ದಾಪುಗಾಲಿಡುತ್ತಿದೆ. ಅದರ ಪರಿಣಾಮವಾಗಿಯೇ ಇದೇ ಮೊದಲ ಬಾರಿಗೆ ವಿದೇಶ ಘಟಕಗಳನ್ನು ರೂಪಿಸಲು ಮುಂದಾಗಿರುವುದು. ಪರಿಷತ್ತಿನ ಈ ಕನಸನ್ನು ನನಸು ಮಾಡಲು ವಿದೇಶದಲ್ಲಿರುವ ಕನ್ನಡಿಗರು ಮುಂದಾಗಿದ್ದಾರೆ. ಮುಂದಿನ ದಿನಗಳಲ್ಲಿ ವಿದೇಶದಲ್ಲಿರುವ ಪ್ರತಿಯೊಬ್ಬರಿಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾಗುವಂತೆ ಮಾಡಲಾಗುವುದು. ಅದಕ್ಕೆ ಬೇಕಾದ ಸುಸಜ್ಜಿತ ಆ್ಯಪ್ ಸಿದ್ಧಪಡಿಸಲಾಗಿದ್ದು, ಆ್ಯಪ್ ಮೂಲಕ ಸದಸ್ಯತ್ವ ಪಡೆಯುವ ಅವಕಾಶ ಕಲ್ಪಿಸಲಾಗಿದೆ. ಕರ್ನಾಟಕದಲ್ಲಿ ಕನ್ನಡ ಶಾಲೆಗಳನ್ನು ಉಳಿಸಿಕೊಳ್ಳಲು, ತೆರೆಯಲು ಇರುವ ಸವಾಲುಗಳನ್ನು ಬಗೆಹರಿಸುವುದು ಮತ್ತು ಕನ್ನಡಿಗರಿಗೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಾವಕಾಶದಲ್ಲಿ ಆದ್ಯತೆ ನೀಡಲು, ಕನ್ನಡಕ್ಕೆ ಸಿಗಬೇಕಾದ ಸ್ಥಾನಮಾನ ಸಿಗಲು ಕಾರ್ಯನಿರ್ವಹಿಸಬೇಕಿದೆ ಎಂದರು.

ಸಭೆಯಲ್ಲಿ ಉಪಸ್ಥಿತರಿದ್ದ ಗಣ್ಯರು ವಿದೇಶದಲ್ಲಿರುವ ಕನ್ನಡಿಗರನ್ನು ಒಗ್ಗೂಡಿಸಿ ಅವರಲ್ಲಿ ಇರುವ ಕನ್ನಡಾಭಿಮಾನವನ್ನು ಗೌರವಿಸುವ ಮೂಲಕ ತನ್ನ ತಾಯಿನಾಡಿನ ಮೇಲೆ ಹೆಚ್ಚಿನ ಗೌರವ ಬರುವಂತೆ ಮಾಡಲು ಕನ್ನಡ ಸಾಹಿತ್ಯ ಪರಿಷತ್ತು ಮುಂದಾಗಿರುವ ಕ್ರಮವನ್ನು ಸ್ವಾಗತಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ವಿದೇಶಿ ಘಟಕದ ಸಲಹಾ ಸಮಿತಿಯಲ್ಲಿ ಕಾರ್ಯನಿರ್ವಹಿಸಲು ಏರ್ ಡೆಕನ್ ಸಂಸ್ಥಾಪಕ ಕ್ಯಾ. ಗೋಪಿನಾಥ್, ಹಿರಿಯ ವೈದ್ಯರಾದ ಡಾ. ಶರಣ ಪಾಟೀಲ, ಬೆಂಗಳೂರಿನ ಮಾಹಿತಿ ತಂತ್ರಜ್ಞಾನ ಸಂಸ್ಥೆಗಳ ಮುಖ್ಯಸ್ಥರು, ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಹರಿ ಮಾರನ್ ಸೇರಿದಂತೆ ಬೆಂಗಳೂರಿನಲ್ಲಿ ನೆಲೆಸಿರುವ ಕನ್ನಡ ಬಲ್ಲ ವಿದೇಶಿ ರಾಯಭಾರಿ ಕಚೇರಿಯ ಆನರರಿ ಕೌನ್ಸಿಲರ್‌ಗಳು ಒಪ್ಪಿಕೊಂಡಿರುತ್ತಾರೆ ಎಂದು ನಾಡೋಜ ಡಾ. ಮಹೇಶ ಜೋಶಿ ತಿಳಿಸಿದ್ದರು.

ಈಗಾಗಲೇ ಕನ್ನಡ ಸಾಹಿತ್ಯ ಪರಿಷತ್ತು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನಸಾಮಾನ್ಯರ ಪರಿಷತ್ತನ್ನಾಗಿಸುವ ನಿಟ್ಟಿನಲ್ಲಿ ದಾಪುಗಾಲಿಡುತ್ತಿದೆ. ಅದರ ಫಲವಾಗಿಯೇ ಇದೇ ಮೊದಲ ಬಾರಿಗೆ ವಿದೇಶ ಘಟಕಗಳನ್ನು ರೂಪಿಸಲು ಮುಂದಾಗಿರುವುದು. ಪರಿಷತ್ತಿನ ಈ ಕನಸನ್ನು ನನಸು ಮಾಡಲು ವಿದೇಶದಲ್ಲಿರುವ ಕನ್ನಡಿಗರು ಮುಂದಾಗಿದ್ದಾರೆ. ಮುಂದಿನ ದಿನಗಳಲ್ಲಿ ವಿದೇಶದಲ್ಲಿ ಇರುವ ಪ್ರತಿಯೊಬ್ಬರೂ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರಾಗುವಂತೆ ಮಾಡಲಾಗುವುದು. ಅದಕ್ಕೆ ಬೇಕಾದ ಸುಸಜ್ಜಿತ ಆಪ್ ಸಿದ್ಧಪಡಿಸಲಾಗಿದೆ. ಆಪ್ ಮೂಲಕ ಸದಸ್ಯತ್ವ ಪಡೆಯುವ ಅವಕಾಶವನ್ನು ಕಲ್ಪಿಸಲಾಗಿದೆ. ಹಾವೇರಿಯಲ್ಲಿ ಹಮ್ಮಿಕೊಂಡಿರುವ ೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ 'ಕರ್ನಾಟಕ ಹಾಗೂ ವಿದೇಶಗಳ ಸಂಬಂಧ' ಕುರಿತ ಗೋಷ್ಠಿಯನ್ನು ಆಯೋಜಿಸಲು ತೀರ್ಮಾನಿಸಲಾಗಿದೆ. ಗೋಷ್ಠಿಯಲ್ಲಿ ವಿದೇಶದಲ್ಲಿರುವ ಕನ್ನಡಿಗರು ಸೇರಿದಂತೆ ವಿಷಯ ತಜ್ಞರನ್ನು ಒಳಗೊಳಿಸಲು ಪರಿಷತ್ತು ಚಿಂತನೆ ನಡೆಸಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ತಿಳಿಸಿದ್ದಾರೆ.

## ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ

**ಬೆಂಗಳೂರು:** ನಗರದ ಚಾಮರಾಜಪೇಟೆಯಲ್ಲಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಕಚೇರಿಯ ಆವರಣದಲ್ಲಿ ನಡೆದ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ. ಮಹೇಶ ಜೋಶಿ ಅವರು ರಾಷ್ಟ್ರಧ್ವಜವನ್ನು ಆರೋಹಣ ಮಾಡಿದರು.

ನಾಡೋಜ ಡಾ. ಮಹೇಶ ಜೋಶಿ ಅವರು ಮಾತನಾಡಿ, ದೇಶದ ಗಡಿಯಲ್ಲಿ ನಮ್ಮ ಯೋಧರು ಪ್ರಾಣವನ್ನೇ ಪಣಕ್ಕಿಟ್ಟು ಕಾಯುತ್ತಿದ್ದಾರೆ. ಪ್ರತಿಯೊಬ್ಬ ಭಾರತೀಯನೂ ದೇಶದ ಸತ್ಪ್ರಜೆಯಾಗಿ ಬಾಳುವ ಮೂಲಕ ಯೋಧರಿಗೆ ಗೌರವ ಸಲ್ಲಿಸಬೇಕು ಎಂದು ಹೇಳಿದರು. ಸ್ವಾತಂತ್ರ್ಯ ಹೋರಾಟದಲ್ಲಿ ತ್ಯಾಗ, ಬಲಿದಾನ ಮಾಡಿದ ವೀರರಿಗೆ ನಾಡೋಜ ಡಾ. ಮಹೇಶ ಜೋಶಿ ಗೌರವ ನಮನಗಳನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಪರಿಷತ್ತಿನ ಗೌರವ ಕಾರ್ಯದರ್ಶಿ ಶ್ರೀ ನೇ.ಭ. ರಾಮಲಿಂಗಶೆಟ್ಟಿ, ಗೌರವ ಕೋಶಾಧ್ಯಕ್ಷ ಶ್ರೀ ಬಿ.ಎಂ. ಪಟೇಲ್‌ಪಾಂಡು ಉಪಸ್ಥಿತರಿದ್ದರು.